ಸಂಪುಟ: 05 ಸಂಚಿಕೆ: 306 ಪುಟಗಳು: 08 ಸೋಮವಾರ 19 ಜನವರಿ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಉತ್ಸಾಹದಿಂದ ಮುನ್ನುಗ್ಗುವ ಸ್ವಭಾವವನ್ನು ಮೈಗೂಡಿಸಿಕೊಳ್ಳಿ. ಹಿಂಜರಿಕೆಯ ಸ್ವಭಾವವನ್ನು ಬಿಟ್ಟುಬಿಡಿ. ಆತ್ಮವಿಶ್ವಾಸವೇ ಯಶಸ್ಸಿನ ದೊಡ್ಡ ಬಲ ಎಂಬುದು ನೆನಪಿರಲಿ.

## ಜ.29ಕ್ಕೆ ಸಾರಿಗೆ ನೌಕರರ ಮುಷ್ಕರ

• ಉದಯವಾಹಿನಿ ಬೆಂಗಳೂರು

ವೇತನ ಹಿಂಬಾಕಿಗೆ ಒತ್ತಾಯಿಸಿ ಜನವರಿ 29ರಂದು ಸಾರಿಗೆ ನೌಕರರು ಪ್ರತಿಭಟನೆ ನಡೆಸಲು ಮುಂದಾಗಿದ್ದಾರೆ. ಅಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆವರೆಗೂ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಲು ನಿರ್ಧರಿಸಲಾಗಿದ್ದು, ಈಗಾಗಲೇ ಬೆಂಗಳೂರು ಚಲೋ ಚಳವಳಿ ಕುರಿತಂತೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಜಂಟಿ ಕ್ರಿಯಾ ಸಮಿತಿ ಪತ್ರ ಬರೆದಿದೆ. ಕಳೆದ 38 ತಿಂಗಳಿನಿಂದ ವೇತನ ಹಿಂಬಾಕಿ ಬಂದಿಲ್ಲ. ಈ ಬಗ್ಗೆ ಹಲವು ಬಾರಿ ನಾವು ಮನವಿ ಮಾಡಿದರೂ ಅದಕ್ಕೆ ಸ್ಪಂದಿಸುತ್ತಿಲ್ಲ. ಹೀಗಾಗಿ ನಾವು ಹೋರಾಟದ ಹಾದಿ ಹಿಡಿಯಬೇಕಿದೆ ಎಂದು ಕ್ರಿಯಾಸಮಿತಿ ಅಧ್ಯಕ್ಷ ಅನಂತಸುಬ್ಬರಾವ್ ತಿಳಿಸಿದ್ದಾರೆ.

ಪ್ರತಿಭಟನೆಯಲ್ಲಿ ನಾಲ್ಕು ಸಾರಿಗೆ ನಿಗಮಗಳ ಸಿಬ್ಬಂದಿ ಭಾಗವಹಿಸಲಿದ್ದಾರೆ ಎಂದು ಹೇಳಿದರು. ಈಗಾಗಲೇ ಇನ್ನು ಆರು ತಿಂಗಳ ಕಾಲ ಯಾವುದೇ ಪ್ರತಿಭಟನೆ ಮಾಡುವಂತಿಲ್ಲ ಎಂದು ಅಧಿಸೂಚನೆ ಹೊರಡಿಸಲಾಗಿದ್ದು, ಈ ಬಗ್ಗೆ ಸ್ಪಷ್ಟತೆ ಇಲ್ಲ. ಹೀಗಾಗಿ ಪ್ರಸ್ತುತ ಸಾರಿಗೆ ನೌಕರರು ಪ್ರತಿಭಟನೆ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ಎಂಬುದು ಈಗ ಕುತೂಹಲ ಮೂಡಿಸಿದೆ.

## ಕ್ಷಿಪ್ರ ಕ್ರಾಂತಿ: ಜಿಟಿಡಿ ಕ್ಷೇತ್ರದಿಂದ ಸಾರಾ ಮಹೇಶ್ ಕಣಕ್ಕಿಳಿಸಲು ಪ್ಲ್ಯಾನ್

• ಉದಯವಾಹಿನಿ ಮೈಸೂರು

ಜೆಡಿಎಸ್ ಪಾಳಯದಲ್ಲಿ ಕ್ಷಿಪ್ರ ಕ್ರಾಂತಿ ನಡೆದಿದೆ. ಹಾಲಿ ಶಾಸಕ ಜಿ.ಟಿ ದೇವೇಗೌಡ ಅವರು ಪ್ರತಿನಿಧಿಸುವ ಚಾಮುಂಡೇಶ್ವರಿ ಕ್ಷೇತ್ರದಿಂದ ಮಾಜಿ ಸಚಿವ ಸಾ.ರಾ ಮಹೇಶ್ ಕಣಕ್ಕಿಳಿಸಲು ತಯಾರಿ ನಡೆದಿದ್ದು ಇವತ್ತು ಬೆಂಗಳೂರಿನ ನಿವಾಸದಲ್ಲಿ ದೇವೇಗೌಡರು ಸಭೆ ನಡೆಸಿದ್ದಾರೆ.

ಚಾಮುಂಡೇಶ್ವರಿ ಕ್ಷೇತ್ರದ ಮುಖಂಡರನ್ನ ಸಭೆಗೆ ಆಹ್ವಾನಿಸಲಾಗಿತ್ತು. ಸಭೆ ಬಳಿಕ ಪ್ರತಿಕ್ರಿಯಿಸಿದ ಮಾಜಿ ಸಚಿವ ಸಾರಾ ಮಹೇಶ್, ಚಾಮುಂಡೇಶ್ವರಿ ಕ್ಷೇತ್ರದಿಂದ ಸ್ಪರ್ಧೆ ಬಗ್ಗೆ ಸುಳಿವು ಕೊಟ್ಟಿದ್ದಾರೆ. ಚುನಾವಣೆಗೆ ಇನ್ನೂ ಎರಡು ವರ್ಷ ಇದೆ. ಅಲ್ಲಿರುವ ಶಾಸಕರು ನಮ್ಮ ಜೊತೆ ಸಕ್ರಿಯವಾಗಿಲ್ಲ. ನನಗೆ ಕೃಷ್ಣರಾಜನಗರ (ಕೆ.ಆರ್ ನಗರ) ಜನರು ಮೂರು ಬಾರಿ ಆಯ್ಕೆ ಮಾಡಿ ಮಂತ್ರಿ ಮಾಡಿದ್ದಾರೆ. ಯಾವಾಗ ಯಾರು ಸ್ಪರ್ಧೆ ಮಾಡಬೇಕು ಅನ್ನೋದನ್ನ ಕುಮಾರಸ್ವಾಮಿ, ದೇವೇಗೌಡರು ನಿರ್ಧಾರ ಮಾಡ್ತಾರೆ. ಒಂದು ಪಕ್ಷ ಅಂದ ಮೇಲೆ ಅವರ ಕಾರ್ಯಕರ್ತರು ಸಹಜವಾಗಿ ಚರ್ಚೆ ಮಾಡ್ತಾರೆ ಎಂದಿದ್ದಾರೆ.

## ರೆಡ್ಡಿ, ಡಿಕೆಶಿ ಮಧ್ಯೆ ಕಾಳಗವಾಗಿ ಬದಲಾಯ್ತಾ ಬ್ಯಾನರ್ ಗಲಾಟೆ

• ಉದಯವಾಹಿನಿ ಬೆಂಗಳೂರು

ನೀನು ಏನು ಕಿಸಿಯೋದಕ್ಕೆ ಇವತ್ತು ರಾಜ್ಯದ ಉಪಮುಖ್ಯಮಂತ್ರಿಯಾಗಿ ಇಲ್ಲಿದ್ದೀಯಾ ಎಂದು ಗಂಗಾವತಿ ಶಾಸಕ ಜನಾರ್ದನ ರೆಡ್ಡಿ ಪ್ರತಿಭಟನಾ ಸಮಾವೇಶದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ವಾಗ್ದಾಳಿ ಮಾಡಿದ್ದರು. ಇದೇ ವಾಗ್ದಾಳಿ ಈಗ ಕಾಂಗ್ರೆಸ್ ನಾಯಕರನ್ನ ಕೆರಳಿಸಿದೆ. ರೆಡ್ಡಿ ವಿರುದ್ಧ ಬೀದಿಗಿಳಿದ ಕಾಂಗ್ರೆಸ್ ಕಾರ್ಯಕರ್ತರು, ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬಳ್ಳಾರಿ ಬ್ಯಾನರ್ ಗಲಾಟೆ ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಿದೆ. ಬಳ್ಳಾರಿ ಗಲಾಟೆ ವಿಚಾರಾಗಿಯೇ ಡಿಕೆ ಶಿವಕುಮಾರ್ ಮತ್ತು ಕೇಂದ್ರ ಸಚಿವ ಹೆಚ್‌ಡಿ ಕುಮಾರ್ ಸ್ವಾಮಿ ಮಧ್ಯೆ ವಾಗ್ಯುದ್ಧ ನಡೆದಿತ್ತು. ಇದೀಗ ಇದೇ ಮಾತಿನ ಯುದ್ಧ ಡಿಕೆ ಶಿವಕುಮಾರ್ ವರ್ಸಸ್ ಜನಾರ್ದನ ರೆಡ್ಡಿ ಕಡೆಗೆ ತಿರುಗಿದೆ.

## ಕಾಂಗ್ರೆಸ್ ಸರ್ಕಾರ ಬಂದಾಗಿನಿಂದ ರಾಜ್ಯದಲ್ಲಿ ಜಂಗಲ್ ರಾಜ್ : ಆರ್.ಅಶೋಕ್ ವಾಗ್ದಾಳಿ

• ಉದಯವಾಹಿನಿ ಬೆಂಗಳೂರು


ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಜಂಗಲ್ ರಾಜ್ ತಲೆ ಎತ್ತಿದ್ದು, ಪ್ರಾಮಾಣಿಕ ಅಧಿಕಾರಿಗಳಿಗೆ ಉಳಿಗಾಲವಿಲ್ಲ ಎಂಬ ವಾತಾವರಣ ನಿರ್ಮಾಣವಾಗಿದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್ ವಾಗ್ದಾಳಿ ಮಾಡಿದ್ದಾರೆ. ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಶಿಡ್ಲಘಟ್ಟದ ಪೌರಾಯುಕ್ತೆಯ ಮೇಲೆ ನಿಂದನೆ, ಬೆದರಿಕೆ ಪ್ರಕರಣ ಬೆನ್ನಲ್ಲೇ ಈಗ ಸಿಎಂ ಸಿದ್ದರಾಮಯ್ಯ ಅವರ ಸ್ವಕ್ಷೇತ್ರ ವರುಣಾದಲ್ಲಿ ಮಹಿಳಾ ಅಧಿಕಾರಿಯೊಬ್ಬರ ಮೇಲೆ ನಿಂದನೆ ನಡೆಸಿ, ಜೀವ ಬೆದರಿಕೆ ಹಾಕಿರುವ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ ಎಂದು ಉಲ್ಲೇಖಿಸಿದ್ದಾರೆ.

ವರುಣಾ ಹೋಬಳಿ ಗುಡಮಾದನಹಳ್ಳಿ ಗ್ರಾಮದ ಬಳಿ ನಿಮ್ಹಾನ್ಸ್ ಮಾದರಿಯ ಆಸ್ಪತ್ರೆ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಗುರುತಿಸಲಾದ ಜಮೀನು ಪರಿಶೀಲನೆಗಾಗಿ ತೆರಳಿದ್ದ ಭವ್ಯ ಎಂಬ ಮಹಿಳಾ ಅಧಿಕಾರಿ ವಿರುದ್ಧ ಸ್ಥಳೀಯ ಪುಡಾರಿಯೊಬ್ಬ ಜಗಳ ತೆಗೆದು ಕೊಲೆ ಬೆದರಿಕೆ ಹಾಕಿರುವ ಆಘಾತಕಾರಿ ಘಟನೆಯಿಂದ ರಾಜ್ಯದಲ್ಲಿ ಈಗಾಗಲೇ ಕುಸಿದಿರುವ ಅಧಿಕಾರಿಗಳ ಮನೋಬಲವನ್ನು ಮತ್ತಷ್ಟು ಕುಗ್ಗಿಸುವ ಅಪಾಯ ಎದುರಾಗಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ಮತ್ತೊಂದು ಪೋಸ್ಟ್‌ನಲ್ಲಿ, ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಚಿಕ್ಕಜಂತಕಲ್ ಗ್ರಾಮದ ಅಂಬೇಡ್ಕರ್ ಏರಿಯಾ ಮಹಿಳೆಯರು ಸಮುದಾಯ ಶೌಚಾಲಯಕ್ಕೆ ಹೋರಾಡಿ ಬೇಸತ್ತು ಈಗ ಬಯಲನ್ನೇ ಶೌಚಾಲಯ ಮಾಡಿಕೊಂಡು ಸೀರೆಯನ್ನೇ ಬಾಗಿಲು ಮಾಡಿ ಕೊಂಡಿರುವ ಮನಕಲಕುವ ಘಟನೆ ಕಾಂಗ್ರೆಸ್ ಪಕ್ಷದ ಆಷಾಢಭೂತನ, ಬೂಟಾಟಿಕೆಗೆ ಜೀವಂತ ಉದಾಹರಣೆಯಾಗಿದೆ. ದಶಕಗಳ ಕಾಲ ಕಲ್ಯಾಣ ಕರ್ನಾಟಕದ ಜನತೆಯ ಮೇಲೆ ಸವಾರಿ ಮಾಡಿ ಅಧಿಕಾರ, ಐಷಾರಾಮಿ ಜೀವನ ಅನುಭವಿಸಿದ ಸಚಿವ ಪ್ರಿಯಾಂಕ ಖರ್ಗೆ ಅವರ ಕುಟುಂಬದ ಸಾಧನೆಗೆ ಕನ್ನಡಿ ಹಿಡಿದಿದೆ ಎಂದು ಆರೋಪಿಸಿದ್ದಾರೆ.

# ಗಿಲ್ಲಿ ಗೆದ್ದ ಜನರ ದಿಲ್ಲು

## ಹೊಸ ಮೈಲಿಗಲ್ಲು







1. ಬಿಗ್ ಬಾಸ್ ಕನ್ನಡ 12ರಲ್ಲಿ ಐತಿಹಾಸಿಕ ಜಯ ಕಂಡ ಗಿಲ್ಲಿ ನಟ; ರಕ್ಷಿತಾ ರನ್ನರ್ ಅಪ್
2. ಸಿಕ್ಕಾಪಟ್ಟೆ ನೆಗೆಟಿವ್ ಆದರೂ ಛಲ ಬಿಡದ ಅಶ್ವಿನಿ ಗೌಡ 2ನೇ ರನ್ನರ್ ಅಪ್
3. ಗಿಲ್ಲಿಗೆ ಅಶ್ವಸೂರ್ಯ ಅವರ ಕಡೆಯಿಂದ 50 ಲಕ್ಷ ರೂಪಾಯಿ ನಗದು ಬಹುಮಾನ ಮತ್ತು ಮಾರುತಿಯ ಹೊಸ ಕಾರನ್ನು ಉಡುಗೊರೆಯಾಗಿ ನೀಡಲಾಯ್ತು.
4. ಅದ್ಭುತವಾಗಿ ಆಡಿದ ರಕ್ಷಿತಾ ಶೆಟ್ಟಿ ಮೊದಲ ರನ್ನರ್ ಅಪ್ ಆದರು. ಮನೊರಂಜನಾ ಕ್ಷೇತ್ರದ ಹಿನ್ನೆಲೆ ಇಲ್ಲದ ರಕ್ಷಿತಾ ರನ್ನರ್ ಅಪ್ ಆಗಿದ್ದನ್ನು ಸಾಧನೆ ಎಂದು ಸುದೀಪ್ ಕೊಂಡಾಡಿದರು.

• ಉದಯವಾಹಿನಿ ಬೆಂಗಳೂರು

ತೀವ್ರ ಕುತೂಹಲ ಕೆರಳಿಸಿದ್ದ ಬಿಗ್ ಬಾಸ್ ಸೀಸನ್ 12ಕ್ಕೆ ತೆರೆ ಬಿದ್ದಿದೆ. ಬಿಗ್‌ಬಾಸ್ ಇತಿಹಾಸದಲ್ಲಿ ಇದೇ ಮೊದಲಬಾರಿಗೆ ಅತೀ ಹೆಚ್ಚು ಮತಗಳನ್ನ ಪಡೆಯುವ ಮೂಲಕ ಗಿಲ್ಲಿ ನಟ ಬಿಗ್ ಬಾಸ್ ಟ್ರೋಫಿಗೆ ಮುತ್ತಿಟ್ಟಿದ್ದಾರೆ. ಈ ಮೂಲಕ ಹೊಸ ದಾಖಲೆಯನ್ನೂ ಗಿಲ್ಲಿ ಬರೆದಿದ್ದಾರೆ. ಹಲವು ವಾರಗಳಿಂದ ಗಿಲ್ಲಿ ನಟನೇ ಬಿಗ್ ಬಾಸ್ ಗೆಲ್ಲೋದು ಅಂತ ಜನಾಭಿಪ್ರಾಯ ವ್ಯಕ್ತವಾಗಿತ್ತು, ಅದೂ ಈಗ ನಿಜವಾಗಿದೆ. ಬಿಗ್ ಬಾಸ್ ಫಿನಾಲೆಗೆ 6 ಸ್ಪರ್ಧಿಗಳು ಆಯ್ಕೆಯಾಗಿದ್ದರು. ಗಿಲ್ಲಿ ನಟ, ಅಶ್ವಿನಿ ಗೌಡ, ರಕ್ಷಿತಾ ಶೆಟ್ಟಿ, ಕಾವ್ಯ ಶೈವ, ರಘು ಹಾಗೂ ಧನುಷ್ ಫಿನಾಲೆಗೆ ಆಯ್ಕೆಯಾಗಿದ್ದರು. ಭಾನುವಾರ ನಡೆದ ಫಿನಾಲೆ ಕಾರ್ಯಕ್ರಮದಲ್ಲಿ 6ನೇ ಎಲಿಮಿನೇಟ್ ಆಗಿ ಧನುಷ್ ಹೊರ ಬಂದರು. ಆನಂತರ ರಘು ಬಿಗ್ ಬಾಸ್ ಮನೆಯಿಂದ ಆಚೆ ಬಂದರು. 4ನೇ ಕಂಟೆಸ್ಟೆಂಟ್ ಆಗಿ ಕಾವ್ಯ ಮನೆಯಿಂದ ಆಚೆ ಬಂದರು. ಅಲ್ಲಿಂದ ಫಿನಾಲೆ ಇನ್ನಷ್ಟು ರೋಚಕ ತಿರುವು ಪಡೆದುಕೊಂಡಿತ್ತು. ನೋಡುಗರ ಅಭಿಪ್ರಾಯದಂತೆ ಗಿಲ್ಲಿ ನಟ, ಅಶ್ವಿನಿ ಗೌಡ ಮತ್ತು ರಕ್ಷಿತಾ ನಡುವೆ ತೀವ್ರ ಪೈಪೋಟಿ ಏರ್ಪಟ್ಟಿತ್ತು. ಮೂವರಲ್ಲಿ ಗೆಲ್ಲೋರು ಯಾರು ಅನ್ನುವ ಚರ್ಚೆ ಜೋರಾಗಿತ್ತು. ಇತ್ತ ಮೂರು ಸ್ಪರ್ಧಿಗಳ ಅಭಿಮಾನಿಗಳಲ್ಲೂ ಎದೆಬಡಿತ ಹೆಚ್ಚಿಸಿತ್ತು. ಏನೇ ಚರ್ಚೆ ನಡೆದರೂ, ಗಿಲ್ಲಿ ನಟನೇ ಗೆಲ್ಲೋದು ಪಕ್ಕಾ ಅನ್ನುವ ಅಭಿಪ್ರಾಯ ವ್ಯಕ್ತವಾಯಿತು. ಕೊನೆಗೂ ಗಿಲ್ಲಿ ನಟನೇ ಟ್ರೋಫಿಗೆ ಮುತ್ತಿಕ್ಕಿ ವಿಜಯ ಮಾಲೆ ಧರಿಸಿದರು.

ಬಿಗ್ ಬಾಸ್ ಇತಿಹಾಸದಲ್ಲೇ ಈ ಪ್ರಮಾಣದಲ್ಲಿ ವೋಟುಗಳು ಬಂದಿರಲಿಲ್ಲ. ಕಳೆದ ಬಾರಿ ಹನುಮಂತ ಲಮಾಣಿಗೆ 5 ಕೋಟಿಗೂ ಅಧಿಕ ಮತಗಳು ಬಿದ್ದಿದ್ದವು. ಈ ಬಾರಿ ದಾಖಲೆಯ ರೀತಿಯಲ್ಲಿ ಮತದಾನ ಆಗಿದೆ. ಹಾಗಾಗಿ ಗಿಲ್ಲಿ ನಟ ಅಚ್ಚರಿ ಎನ್ನುವಂತೆ ಗೆಲುವು ಸಾಧಿಸಿದ್ದಾರೆ.

**ಗಿಲ್ಲಿ ಯಾರು..? :** ಗಿಲ್ಲಿ ನಟನ ನಿಜವಾದ ಹೆಸರು ನಟರಾಜ್. ಇವರು ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ದಡದಪುರದ ಹಳ್ಳಿಯ ರೈತ ಕುಟುಂಬದಿಂದ ಬಂದವರು. ಗಿಲ್ಲಿ ನಟ ತಮ್ಮ 10ನೇ ತರಗತಿ ಪೂರ್ಣಗೊಳಿಸಿದ ನಂತರ 2 ವರ್ಷಗಳ ಐಟಿಐ ಕೋರ್ಸ್ ಮಾಡಿದರು.

ಪಕ್ಕಾ ಹಳ್ಳಿ ಪ್ರತಿಭೆಯಾಗಿರುವ ಗಿಲ್ಲಿ, ಮಾತನಾಡುವ ಶೈಲಿಯನ್ನೇ ತನ್ನ ಕಾಮಿಡಿಯಲ್ಲಿ ಬಳಸಿ ಜನಪ್ರಿಯರಾಗಿದ್ದಾರೆ. ಹಳ್ಳಿಯಿಂದ ಬೆಂಗಳೂರಿಗೆ ಬಂದ ಬಳಿಕ ವಿವಿಧ ರಿಯಾಲಿಟಿ ಶೋಗಳಲ್ಲಿ ಮಿಂಚಿದ್ದ ಗಿಲ್ಲಿಗೆ, ಬಿಗ್ ಬಾಸ್ ಹೊಸ ಮೈಲಿಗಲ್ಲನ್ನೇ ತಂದುಕೊಟ್ಟಿದೆ. ಟಿವಿ ವಾಹಿನಿಗಳ ಅತಿ ದೊಡ್ಡ ರಿಯಾಲಿಟಿ ಶೋಗಳಲ್ಲಿ ಬಿಗ್ ಬಾಸ್‌ಗೆ ಭಾರೀ ಜನಪ್ರಿಯತೆ ಇದೆ. ದೇಶದಲ್ಲಿ ಬಿಗ್ ಬಾಸ್ ಮೊದಲು ಆರಂಭವಾಗಿದ್ದು, ಹಿಂದಿಯಲ್ಲಿ. ಆ ಬಳಿಕ ಕನ್ನಡದಲ್ಲಿ ಬಿಗ್ ಬಾಸ್ ಪ್ರಸಾರ ಆರಂಭಿಸಲಾಯಿತು. ಕನ್ನಡದಲ್ಲಿ ಬಿಗ್ ಬಾಸ್ 12 ಸೀಸನ್‌ಗಳು ಯಶಸ್ವಿಯಾಗಿ ಪೂರ್ಣಗೊಂಡಿದೆ. ಈ ಬಾರಿಯ ಸೀಸನ್‌ನಲ್ಲಿ ಆರು ಸ್ಪರ್ಧಿಗಳು ಫೈನಲಿಸ್ಟ್ ಆಗಿ ಹೊರ ಹೊಮ್ಮಿದ್ದರು. ಗಿಲ್ಲಿ ನಟ, ರಕ್ಷಿತಾ ಶೆಟ್ಟಿ, ಅಶ್ವಿನಿ ಗೌಡ, ಧನುಷ್ ಗೌಡ, ಮ್ಯೂಟಂಟ್ ರಘು ಹಾಗೂ ಕಾವ್ಯ ಶೈವ ಅವರು ಫೈನಲಿಸ್ಟ್ ಆಗಿ ಹೊರ ಹೊಮ್ಮಿದ್ದರು. ಅವರಲ್ಲಿ ಗಿಲ್ಲಿ ನಟ ವಿನ್ನರ್ ಆಗಿದ್ದು, ಟ್ರೋಫಿ ಜೊತೆಗೆ 50 ಲಕ್ಷ ರೂಪಾಯಿ ಗಿಲ್ಲಿ ಕೈ ಸೇರಿದೆ.

### ಹುಟ್ಟೂರು ದಡದಪುರದಲ್ಲಿ ಹಬ್ಬದ ಸಂಭ್ರಮ

ಗಿಲ್ಲಿಯ ಹುಟ್ಟೂರಾದ ಮಳವಳ್ಳಿ ತಾಲ್ಲೂಕಿನ ದಡದಪುರ ಗ್ರಾಮದಲ್ಲಿ ಸಂಭ್ರಮ ಮುಗಿಲು ಮುಟ್ಟಿದೆ. ಗ್ರಾಮದ ತುಂಬಾ ಗಿಲ್ಲಿಯ ಫ್ಲೆಕ್ಸ್, ಬ್ಯಾನರ್‌ಗಳು ರಾರಾಜಿಸುತ್ತಿವೆ. ಗಿಲ್ಲಿಯ ಫೇಮಸ್ ಡೈಲಾಗ್‌ಗಳನ್ನೇ ಬ್ಯಾನರ್‌ನಲ್ಲಿ ಬರೆಸಿರುವ ಅಕ್ಕಪಕ್ಕದ ಊರಿನ ಜನರು ದಡದಪುರಕ್ಕೆ ತಂಡೋಪತಂಡವಾಗಿ ಬರುತ್ತಿದ್ದು, ಬಂದವರಿಗೆ ಗಿಲ್ಲಿ ಹಿತೈಷಿಗಳು ಬಾಳೆಹಣ್ಣು ನೀಡಿ ಸ್ವಾಗತಿಸುತ್ತಿರುವುದು ಕಂಡು ಬಂದಿದೆ.

### ಧನುಷ್ ಗೌಡಗೆ ಆರನೇ ಸ್ಥಾನ

ಬಿಗ್ ಬಾಸ್ ಫಿನಾಲೆ ತಲುಪಿದ್ದ ಧನುಷ್ ಗೌಡ ಅವರಿಗೆ 6ನೇ ಸ್ಥಾನ ಲಭಿಸಿದೆ. ವೀಕ್ಷಕರ ಮತಯುದ್ಧದಲ್ಲಿ ಧನುಷ್‌ಗೆ ಆರನೇ ಸ್ಥಾನ ಸಿಕ್ಕಿದೆ. ಎವಿಕ್ಷನ್ ಬೆನ್ನಲ್ಲೇ ಸುದೀಪ್ ಅವರು ಧನುಷ್ ಅವರನ್ನು ವೇದಿಕೆಗೆ ಕರೆದಿದ್ದಾರೆ. ಕನ್ನಡ ಬಿಗ್ ಬಾಸ್ ಸೀಸನ್-12 ರ ಅಂತಿಮ 6 ಸ್ಪರ್ಧಿಗಳ ಪೈಕಿಯಲ್ಲಿ ಧನುಷ್ ಕೂಡ ಒಬ್ಬರಾಗಿದ್ದರು. ಗಿಲ್ಲಿ ನಟ, ರಕ್ಷಿತಾ ಶೆಟ್ಟಿ, ಅಶ್ವಿನಿ ಗೌಡ, ಕಾವ್ಯ ಶೈವ, ಮ್ಯೂಟಂಟ್ ರಘು ಕೂಡ ಫೈನಲಿಸ್ಟ್ ಸ್ಪರ್ಧಿಗಳಾಗಿದ್ದರು. ಧನುಷ್ ಗೌಡ ಕನ್ನಡ ಕಿರುತೆರೆ ಜನಪ್ರಿಯ ನಟ. ಇವರು ಗೀತಾ ಧಾರಾವಾಹಿಯಲ್ಲಿ ನಾಯಕನಾಗಿ ನಟಿಸುವ ಮೂಲಕ ಕರ್ನಾಟಕದ ಮನೆಮಾತಾಗಿದ್ದಾರೆ. ಮೂಲ ಬೆಂಗಳೂರಿನವರಾದ ಧನುಷ್, ಇಂಜಿನಿಯರಿಂಗ್‌ನಲ್ಲಿ ಪದವಿ ಪಡೆದಿದ್ದಾರೆ. ಧನುಷ್ ಅವರು ತಮ್ಮ ಹಾಗೂ ಮಾವನ ಆಸೆ ಈಡೇರಿಸುವ ಸಲುವಾಗಿ ನಟನಾಗುವ ನಿರ್ಧಾರ ಮಾಡಿದರು. ಇದೀಗ ಬಿಗ್ ಬಾಸ್ ಶೋ ಧನುಷ್ ಅವರನ್ನು ಮತ್ತಷ್ಟು ಮೇಲಕ್ಕೆ ಕೊಂಡೊಯ್ದಿದೆ.

### ಹೃದಯಗೆದ್ದ ಮ್ಯೂಟಂಟ್ ರಘು

ಬಿಗ್ ಬಾಸ್ ಫಿನಾಲೆ ತಲುಪಿದ್ದ ಮ್ಯೂಟಂಟ್ ರಘು ಅವರ ಜರ್ನಿ ಐದನೇ ಸ್ಥಾನಕ್ಕೆ ಕೊನೆಯಾಗಿದೆ. ವೀಕ್ಷಕರ ಮತಯುದ್ಧದಲ್ಲಿ ರಘು ಅವರಿಗೆ ಐದನೇ ಸ್ಥಾನ ಲಭಿಸಿದೆ. ನಟಿ ಶೃತಿ ಅವರು ಬಿಗ್ ಬಾಸ್ ಮನೆಗೆ ಆಗಮಿಸಿ ರಘು ಅವರನ್ನು ಆಚೆ ಕರೆದುಕೊಂಡು ಹೋಗಿದ್ದಾರೆ. ಕನ್ನಡ ಬಿಗ್ ಬಾಸ್ ಸೀಸನ್-12 ರ ಅಂತಿಮ 6 ಸ್ಪರ್ಧಿಗಳ ಪೈಕಿಯಲ್ಲಿ ಮ್ಯೂಟಂಟ್ ರಘು ಕೂಡ ಒಬ್ಬರಾಗಿದ್ದರು. ಗಿಲ್ಲಿ ನಟ, ರಕ್ಷಿತಾ ಶೆಟ್ಟಿ, ಅಶ್ವಿನಿ ಗೌಡ, ಕಾವ್ಯ ಶೈವ, ಧನುಷ್ ಗೌಡ ಫೈನಲಿಸ್ಟ್ ಸ್ಪರ್ಧಿಗಳಾಗಿದ್ದರು. ಇದೀಗ ಧನುಷ್ 6ನೇ ಸ್ಥಾನ ಪಡೆದುಕೊಂಡ್ರೆ, ರಘು ಅವರು ಐದನೇ ಸ್ಥಾನಕ್ಕೆ ತೃಪ್ತಿ ಪಟ್ಟುಕೊಂಡಿದ್ದಾರೆ. ಮ್ಯೂಟೆಂಟ್ ರಘು ಅವರು 'ಬಿಗ್ ಬಾಸ್ ಕನ್ನಡ ಸೀಸನ್ 12 ಶೋಗೆ ವೈಲ್ಡ್ ಕಾರ್ಡ್ ಸ್ಪರ್ಧಿಯಾಗಿ ಬಂದರು. ಮ್ಯುಟೆಂಟ್ ರಘು ಅವರ ಪೂರ್ಣ ಹೆಸರು ರಾಘವೇಂದ್ರ ಎಸ್ ಹೊಂಡಕೇರಿ. ಇತ್ತೀಚೆಗಷ್ಟೆ ಕಲರ್ಸ್ ಕನ್ನಡದ ಕ್ವಾಟ್ಲೆ ಕಿಚನ್ ಶೋನಲ್ಲಿ ಇವರು ವಿನ್ನರ್ ಆಗಿದ್ದರು. ಅಲ್ಲಿಂದ ಅವರು ಬಿಗ್ ಬಾಸ್ ಮನೆ ಪ್ರವೇಶ ಮಾಡಿದ್ದರು.

### 3ನೇ ಸ್ಥಾನಕ್ಕೆ ಬಿಗ್ ಬಾಸ್ ಜರ್ನಿ ಎಂಡ್

ಅಶ್ವಿನಿ ಗೌಡ ಅವರು ಬಿಗ್ ಬಾಸ್ ಸೀಸನ್ 12ರ ಸೆಕೆಂಡ್ ರನ್ನರ್ ಅಪ್? ಆಗಿ ಹೊರ ಹೊಮ್ಮಿದ್ದಾರೆ. ಬಿಗ್ ಬಾಸ್ ಫಿನಾಲೆ ಅದ್ದೂರಿಯಾಗಿ ನಡೆದಿದ್ದು, ಗಿಲ್ಲಿ ನಟ ವಿನ್ನರ್ ಆಗಿದ್ದಾರೆ. ರಕ್ಷಿತಾ ಶೆಟ್ಟಿ ರನ್ನರ್ ಅಪ್ ಆದ್ರೆ, ಅಶ್ವಿನಿ ಗೌಡ ಅವರು ಸೆಕೆಂಡರ್ ರನ್ನರ್ ಅಪ್ ಆಗಿದ್ದಾರೆ. ಅಶ್ವಿನಿ ಗೌಡ ಕನ್ನಡ ಚಿತ್ರರಂಗದಲ್ಲಿ ಗುರುತಿಸಿಕೊಂಡಿರುವ ನಟಿ, ನಿರ್ಮಾಪಕಿ ಮತ್ತು ಕರ್ನಾಟಕ ರಕ್ಷಣಾ ವೇದಿಕೆ ಪ್ರಮುಖ ಕಾರ್ಯದರ್ಶಿ. ಇವರು ಕನ್ನಡಪರ ಹೋರಾಟಗಳಿಂದ ಗುರುತಿಸಿಕೊಂಡಿದ್ದಾರೆ. ಇದೀಗ ಅವರ ಬದುಕಿಗೆ ಬಿಗ್ ಬಾಸ್ ಹೊಸ ಆಯಮವನ್ನೇ ಕೊಟ್ಟಿದೆ. ಕನ್ನಡ ಬಿಗ್ ಬಾಸ್ ಸೀಸನ್-12 ರ ಅಂತಿಮ 6 ಸ್ಪರ್ಧಿಗಳ ಪೈಕಿಯಲ್ಲಿ ಅಶ್ವಿನಿ ಗೌಡ ಕೂಡ ಒಬ್ಬರಾಗಿದ್ದರು. ಗಿಲ್ಲಿ ನಟ, ರಕ್ಷಿತಾ ಶೆಟ್ಟಿ, ಅಶ್ವಿನಿ ಗೌಡ, ಮ್ಯೂಟಂಟ್ ರಘು, ಧನುಷ್ ಗೌಡ ಹಾಗೂ ಕಾವ್ಯ ಶೈವ ಫೈನಲಿಸ್ಟ್‌ಗಳಾಗಿದ್ದರು. ಇದೀಗ ಧನುಷ್ 6ನೇ ಸ್ಥಾನ ಪಡೆದುಕೊಂಡ್ರೆ, ರಘು ಅವರು ಐದನೇ ಸ್ಥಾನಕ್ಕೆ ತೃಪ್ತಿ ಪಟ್ಟುಕೊಂಡಿದ್ದಾರೆ. ಇದೀಗ ಕಾವ್ಯ ಅವರು ನಾಲ್ಕನೇ ಸ್ಥಾನ ಪಡೆದಿದ್ದಾರೆ. ಅಶ್ವಿನಿ ಗೌಡ ಮೂರನೇ ಸ್ಥಾನ ಪಡೆದರು.

### ಮೂರನೇ ರನ್ನರ್ ಅಪ್ ಆದ ಕಾವ್ಯ ಶೈವ

ಬಿಗ್ ಬಾಸ್ ಫಿನಾಲೆ ಪ್ರವೇಶ ಮಾಡಿದ್ದ ಕಾವ್ಯ ಶೈವ ಮೂರನೇ ರನ್ನರ್ ಅಪ್ ಆಗಿ ಹೊರ ಹೊಮ್ಮಿದ್ದಾರೆ. ವೀಕ್ಷಕರ ಬಹುಮತದ ಆಯ್ಕೆ ಪ್ರಕಾರ, ಕಾವ್ಯ ನಾಲ್ಕನೇ ಸ್ಥಾನ ಪಡೆದುಕೊಂಡಿದ್ದಾರೆ. ಮನೆಯಿಂದ ಎವಿಕ್ಟ್ ಆಗ್ತಿರುವ ಸ್ಪರ್ಧಿ ಯಾರು ಅಂತಾ ವೀಕ್ಷಕರಿಗೆ ತಿಳಿಸಿಕೊಡಲು ಕ್ರೇಜಿ ಸ್ಟಾರ್ ಬಿಗ್ ಬಾಸ್ ಮನೆಗೆ ಬಂದಿದ್ದರು. ಎಲಿಮಿನೇಷನ್ ಪ್ರಕ್ರಿಯೆ ಮುಗಿದ ಬಳಿಕ ಕಾವ್ಯ ಶೈವ, ರವಿ ಮಾಮಾ ಜೊತೆ ಬಿಗ್ ಬಾಸ್ ವೇದಿಕೆಗೆ ಆಗಮಿಸಿದರು. ಕಿಚ್ಚ ಸುದೀಪ್ ಕಾವ್ಯ ಅವರನ್ನು ಆತ್ಮೀಯವಾಗಿ ಸ್ವಾಗತಿಸಿದರು. ಕನ್ನಡ ಬಿಗ್ ಬಾಸ್ ಸೀಸನ್-12 ರ ಅಂತಿಮ 6 ಸ್ಪರ್ಧಿಗಳ ಪೈಕಿಯಲ್ಲಿ ಕಾವ್ಯ ಶೈವ ಕೂಡ ಒಬ್ಬರಾಗಿದ್ದರು. ಗಿಲ್ಲಿ ನಟ, ರಕ್ಷಿತಾ ಶೆಟ್ಟಿ, ಅಶ್ವಿನಿ ಗೌಡ, ಮ್ಯೂಟಂಟ್ ರಘು, ಧನುಷ್ ಗೌಡ ಫೈನಲಿಸ್ಟ್ ಸ್ಪರ್ಧಿಗಳಾಗಿದ್ದರು. ಇದೀಗ ಧನುಷ್ 6ನೇ ಸ್ಥಾನ ಪಡೆದುಕೊಂಡ್ರೆ, ರಘು ಅವರು ಐದನೇ ಸ್ಥಾನಕ್ಕೆ ತೃಪ್ತಿ ಪಟ್ಟುಕೊಂಡಿದ್ದಾರೆ. ಕಾವ್ಯ ಶೈವ ಕನ್ನಡ ಕಿರುತೆರೆಯ ನಟಿ. ಕಲರ್ಸ್ ಕನ್ನಡ ವಾಹಿನಿಯಲ್ಲಿ ಪ್ರಸಾರವಾಗುತ್ತಿರುವ ಕೆಂಡಸಂಪಿಗೆ ಧಾರಾವಾಹಿಯಲ್ಲಿ ಸುಮನಾ ಪಾತ್ರದ ಮೂಲಕ ಜನಪ್ರಿಯತೆ ಪಡೆದಿದ್ದರು.

### ಗಿಲ್ಲಿ ನಟನಿಗೆ ಕಿಚ್ಚ ಸುದೀಪ್‌ರಿಂದ ಭರ್ಜರಿ ಉಡುಗೊರೆ

ಕೊನೆಗೂ ಗಿಲ್ಲಿ ನಟ ಕನ್ನಡದ ಬಿಗ್‌ಬಾಸ್ ಸೀಸನ್ 12ರ ವಿನ್ನರ್ ಆಗಿ ಹೊರ ಹೊಮ್ಮಿದ್ದಾರೆ. ವಿನ್ನರ್ ಆಗಿ ಹೊರ ಹೊಮ್ಮಿದ ಗಿಲ್ಲಿ ನಟನಿಗೆ ಭರ್ಜರಿ ಉಡುಗೊರೆಗಳನ್ನು ನೀಡಲಾಗಿದೆ. ವಿಶೇಷ ಏನೆಂದರೆ ಕಿಚ್ಚ ಸುದೀಪ್ ಅವರು ವೇದಿಕೆ ಮೇಲೆ ಗಿಲ್ಲಿ ನಟನಿಗೆ ಪ್ರೀತಿಯಿಂದ ರೂ.10 ಲಕ್ಷ ಕೊಡುತ್ತಿದ್ದೇನೆ ಎಂದು ಘೋಷಿಸಿದ್ದಾರೆ. ಆ ಕೂಡಲೇ ಖುಷಿಯಿಂದ ಗಿಲ್ಲಿ ನಟ ಕಿಚ್ಚ ಸುದೀಪ್ ಅವರ ಕಾಲಿಗೆ ಬಿದ್ದು ಬಿಟ್ಟಿದ್ದಾರೆ. ಈಗಾಗಲೇ ವಿನ್ನರ್ ಆಗಿರುವ ಗಿಲ್ಲಿ ನಟನಿಗೆ ಬಿಗ್‌ಬಾಸ್ ತಂಡ ಟ್ರೋಫಿ ಜೊತೆಗೆ ರೂ. 50 ಲಕ್ಷ ಹಾಗೂ ಮಾರುತಿ ಸುಜುಕಿ ಎಸ್‌ಯುವಿ ವಿಕ್ಟೋರಿಯಸ್ ಕಾರನ್ನು ಬಹುಮಾನದ ರೂಪದಲ್ಲಿ ನೀಡಲಾಗಿದೆ.

# ಡಿಕೆ ಶಿವಕುಮಾರ್ ದಾವೋಸ್ ಪ್ರವಾಸ ದಿಢೀರ್ ರದ್ದು, ದಿಲ್ಲಿಯಲ್ಲೇ ಠಿಕಾಣಿ

## • ನಾಯಕತ್ವ ಗೊಂದಲದ ವಿಚಾರದಲ್ಲಿ ರಾಹುಲ್ ಗಾಂಧಿ ಅವರ ತೀರ್ಮಾನಕ್ಕೆ ಡಿ.ಕೆ. ಶಿವಕುಮಾರ್ ಒತ್ತಾಯ

• ಉದಯವಾಹಿನಿ ಬೆಂಗಳೂರು


ನಾಯಕತ್ವದ ಸರದಿ ವಿಚಾರದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ತಮ್ಮ ಹಕ್ಕೊತ್ತಾಯವನ್ನು ಕಾಂಗ್ರೆಸ್ ವರಿಷ್ಠ ನಾಯಕ ರಾಹುಲ್ ಗಾಂಧಿ ಎದುರು ಪ್ರಸ್ತಾಪಿಸಿದ್ದಾರೆ. ಆದರೆ, ಈ ವಿಚಾರದಲ್ಲಿ ಡಿಸಿಎಂ ಬೇಡಿಕೆಯನ್ನು ರಾಹುಲ್ ಸಮಾಧಾನದಿಂದಲೇ ಆಲಿಸಿದ್ದಾರಾದರೂ ಮುಂದಿನ ತೀರ್ಮಾನವೇನು ಎಂಬುದರ ಸ್ಪಷ್ಟತೆ ಸಿಕ್ಕಿಲ್ಲ. ಇದರ ನಡುವೆ ಡಿಸಿಎಂ ಅವರು ದಿಲ್ಲಿಯಲ್ಲಿ ಸಕ್ರಿಯರಾಗಿರುವುದು ಕುತೂಹಲ ಕೆರಳಿಸಿದೆ. ರಾಜ್ಯದ ಆಡಳಿತಾರೂಢ ಕಾಂಗ್ರೆಸ್‌ನೊಳಗಿನ

ನಾಯಕತ್ವ ಗೊಂದಲದ ವಿಚಾರದಲ್ಲಿ ರಾಹುಲ್ ಗಾಂಧಿ ಅವರ ತೀರ್ಮಾನಕ್ಕೆ ಡಿ.ಕೆ. ಶಿವಕುಮಾರ್ ಒತ್ತಾಯಿಸಿದ್ದಾರೆ. ಸರಕಾರ ರಚನೆ ಸಂದರ್ಭದಲ್ಲಿ ನಡೆದಿದೆ ಎನ್ನಲಾದ ಒಪ್ಪಂದದ ಅನ್ವಯ ಕೊಟ್ಟ ಮಾತು ಈಡೇರಿಸುವಂತೆ ಕೋರಿದ್ದಾರೆ. ಡಿಸಿಎಂ ಬೇಡಿಕೆ ಹಾಗೂ ಹಕ್ಕೊತ್ತಾಯವನ್ನು ರಾಹುಲ್ ಗಾಂಧಿ ಕೇಳಿಸಿಕೊಂಡಿದ್ದು, ಸೂಕ್ತ ನಿರ್ಧಾರದ ಭರವಸೆ ನೀಡಿದ್ದಾರೆ ಎಂದು ತಿಳಿದು ಬಂದಿದೆ.

- ರಾಹುಲ್ ಎದುರು ನಾಯಕತ್ವದ ವಾರಸುದಾರಿಕೆ ಮಂಡಿಸಿದ ಡಿಸಿಎಂ
- ದಾವೋಸ್ ಪ್ರವಾಸ ದಿಢೀರ್ ರದ್ದು, ರಾಜಧಾನಿ ದಿಲ್ಲಿಯಲ್ಲೇ ವಾಸ್ತವ್ಯ
- ಕಾಂಗ್ರೆಸ್ ಹೈಕಮಾಂಡ್ ಅಂಗಳದಲ್ಲಿ ಶಿವಕುಮಾರ್ ಚಟುವಟಿಕೆ ಬಿರುಸು

### ದಿಲ್ಲಿಯಲ್ಲೇ ವಾಸ್ತವ್ಯ

ವಿಶ್ವ ಆರ್ಥಿಕ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ರಾಜ್ಯ ಸರಕಾರದ ಉನ್ನತ ಮಟ್ಟದ ನಿಯೋಗದೊಂದಿಗೆ ಭಾನುವಾರ ಬೆಳಗ್ಗೆ ದಾವೋಸ್‌ಗೆ ಡಿ.ಕೆ. ಶಿವಕುಮಾರ್ ತೆರಳಬೇಕಿತ್ತು. ಅದರಂತೆ ಡಿಸಿಎಂ ಶನಿವಾರ ಸಂಜೆ ದಿಲ್ಲಿಯಿಂದ ಬೆಂಗಳೂರಿಗೆ ವಾಪಸಾಗಿ ವಿದೇಶ ಪ್ರವಾಸಕ್ಕೆ ತೆರಳುವುದು ನಿಗದಿಯಾಗಿತ್ತು. ಆದರೆ ದಿಢೀರನೆ ತಮ್ಮ ದಾವೋಸ್ ಪ್ರವಾಸ ರದ್ದುಪಡಿಸಿ ದಿಲ್ಲಿಯಲ್ಲಿ ಉಳಿದಿರುವುದು ಕುತೂಹಲಕ್ಕೆ ಕಾರಣವಾಗಿದೆ.



### ಕುತೂಹಲ ಮೂಡಿಸಿದೆ ಡಿಸಿಎಂ ನಡೆ

ಡಿ.ಕೆ. ಶಿವಕುಮಾರ್ ಅಸ್ಸಾಂ ವಿಧಾನಸಭೆ ಚುನಾವಣೆ ವೀಕ್ಷಕರಾಗಿದ್ದು, ದಿಲ್ಲಿಯಲ್ಲಿ ಸಂಜೆ ಈ ಸಂಬಂಧ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಿವಾಸದಲ್ಲಿ ಸಭೆ ನಡೆಯಿತು. ಈ ವೇಳೆ ರಾಹುಲ್ ಗಾಂಧಿ ಅವರೊಂದಿಗೆ ಸುಮಾರು 15 ನಿಮಿಷಗಳ ಕಾಲ ಪ್ರತ್ಯೇಕವಾಗಿ ಒನ್ ಟು ಒನ್ ಚರ್ಚೆ ನಡೆಸಿದ್ದು, ಈ ಸಂದರ್ಭದಲ್ಲಿ ತಮ್ಮ ಬೇಡಿಕೆ ಮಂಡಿಸಿದ್ದಾರೆ. ಈ ಭೇಟಿ ಮತ್ತು ಮಾತುಕತೆ ಬಳಿಕ ಡಿಸಿಎಂ ಹೆಚ್ಚು ಚಟುವಟಿಕೆಯಲ್ಲಿ ಇರುವುದು ಗಮನ ಸೆಳೆದಿದೆ.

ಮಾಜಿ ಸಚಿವ ಭೀಮಣ್ಣ ಖಂಡ್ರೆ ನಿಧನರಾದ ಹಿನ್ನೆಲೆಯಲ್ಲಿ ಡಿ.ಕೆ. ಶಿವಕುಮಾರ್ ಹೈದರಾಬಾದ್ ಮೂಲಕ ಬೀದರ್‌ಗೆ ವಿಶೇಷ ವಿಮಾನದಲ್ಲಿ ಆಗಮಿಸಿದರು. ಮೃತರ ಅಂತಿಮ ದರ್ಶನ ಪಡೆದು ಸಂಜೆಯೇ ಹೈದರಾಬಾದ್ ಮೂಲಕ ದಿಲ್ಲಿಗೆ ಮರಳಿದ್ದಾರೆ. ರಾಷ್ಟ್ರ ರಾಜಧಾನಿಯಲ್ಲೇ ವಾಸ್ತವ್ಯ ಹೂಡಿರುವ ಡಿಸಿಎಂ ಅವರು ಎಐಸಿಸಿ ಅಂಗಳದಲ್ಲಿ ಮತ್ತಷ್ಟು ಕ್ರಿಯಾಶೀಲರಾಗಿರುವುದು ಗಮನ ಸೆಳೆದಿದೆಸ. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಸೂಚನೆಯಂತೆ ಡಿ.ಕೆ. ಶಿವಕುಮಾರ್ ರಾತ್ರಿ ಮತ್ತೆ ದಿಲ್ಲಿ ತಲುಪಿದ್ದು, ಎಐಸಿಸಿ ನಾಯಕರೊಂದಿಗೆ ಸಭೆಯಲ್ಲಿ ಭಾಗವಹಿಸಿದ್ದಾರೆ.

ಮನರೇಗಾ ಬಚಾವೋ ಹೋರಾಟ, ಅಸ್ಸಾಂ ಚುನಾವಣೆ ತಯಾರಿ ಸೇರಿ ವರಿಷ್ಠರು ನೀಡಿರುವ ಹಲವು ಜವಾಬ್ದಾರಿಗಳಿಗೆ ಡಿ.ಕೆ. ಶಿವಕುಮಾರ್ ಹೆಚ್ಚು ಆಸಕ್ತಿಯಿಂದ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಹಾಗಾಗಿ ಡಿ.ಕೆ. ಶಿವಕುಮಾರ್ ಅವರ ಮಹತ್ವಾಕಾಂಕ್ಷೆಯ ಮುಖ್ಯಮಂತ್ರಿ ಹುದ್ದೆ ಬೇಡಿಕೆಗೆ ಹೈಕಮಾಂಡ್ ಕಡೆಯಿಂದ ಕೊನೆಗೂ ಖಚಿತ ಭರವಸೆ ಸಿಕ್ಕಿತೇ ಎಂಬ ಕುತೂಹಲವನ್ನು ಹೆಚ್ಚಿಸಿದೆ.

**ಈ ದಿನದ ದರ** ಪೆಟ್ರೋಲ್: 102.62 ₹/L | ಡೀಸೆಲ್ : 91.67 ₹/L | ಬಂಗಾರ: ₹14,378/Gram(24ct) ₹13,180/Gram(22ct) | ಬೆಳ್ಳಿ: ₹295.00/Gram

# ಜಿಬಿಎ ಉತ್ತರ ನಗರ ಪಾಲಿಕೆ: ಅನಧಿಕೃತ ಕಟ್ಟಡಗಳ ತೆರವು

• ಉದಯವಾಹಿನಿ, ಬೆಂಗಳೂರು

ಉತ್ತರ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಅನಧಿಕೃತ ಇಲ್ಲವೇ ನಕ್ಷೆಗೆ ವಿರುದ್ಧವಾಗಿ ನಿರ್ಮಿಸಿದ ಕಟ್ಟಡ. ಹೆಚ್ಚುವರಿಯಾಗಿ ನಿರ್ಮಿಸಿದ ಅಂತಸ್ತುಗಳನ್ನು ತೆರವುಗೊಳಿಸುವ ಕಾರ್ಯ ಮುಂದುವರಿಯಿತು.ಹೆಬ್ಬಾಳ ವಿಭಾಗದ ಜೆ.ಸಿ. ನಗರ ಉಪನಗರ ವಿಭಾಗದಲ್ಲಿ ದೊಡ್ಡಮ್ಮ ಬಡಾವಣೆಯ ಮನೋರಾಯನಪಾಳ್ಯದಲ್ಲಿ ನಿರ್ಮಿಸುತ್ತಿದ್ದ ಕಟ್ಟಡ, ವಿದ್ಯಾರಣ್ಯಪುರ ವಿಭಾಗದ ವ್ಯಾಪ್ತಿಯ ಕೊಡಿಗೇಹಳ್ಳಿ ಉಪ ವಿಭಾಗದ ಕಾಟೇರಮ್ಮ ದೇವಸ್ಥಾನ ಹತ್ತಿರದ ನಿವೇಶನದಲ್ಲಿದ್ದ ಕಟ್ಟಡ, ರಾಜೀವ್ ಗಾಂಧಿನಗರದ ಕೊಡಿಗೇಹಳ್ಳಿಯ ನಿವೇಶನದ ಕಟ್ಟಡ, ಕುವೆಂಪುನಗರ ಉಪ ವಿಭಾಗದ ಡಿಫೆನ್ಸ್ ಬಡಾವಣೆಯ ನಿವೇಶನದ ಕಟ್ಟಡಗಳ ಹೆಚ್ಚುವರಿ ಭಾಗ ತೆರವುಗೊಳಿಸಲಾಯಿತು. ಯಲಹಂಕ ವಿಭಾಗದ ಶಿವನಹಳ್ಳಿ ಗ್ರಾಮದ ಕಟ್ಟಡ, ಎ.ಎಂ.ಎಸ್ ಬಡಾವಣೆಯ ಎರಡು ಕಟ್ಟಡ, ಬ್ಯಾಟರಾಯನಪುರ ವಿಭಾಗದ ಕೋಗಿಲು ಉಪವಿಭಾಗದ ಕಟ್ಟಿಗೇಹಳ್ಳಿಯ ರೇವಾ ಕಾಲೇಜಿನ ಎದುರಿನ ಕಟ್ಟಡ, ಜಕ್ಕೂರು ಉಪ-ವಿಭಾಗದ ಸಹಕಾರನಗರದ ಕಟ್ಟಡಗಳ ಹೆಚ್ಚುವರಿ ಭಾಗಗಳನ್ನು ತೆರವು ಮಾಡಲಾಯಿತು. ಉತ್ತರ ನಗರ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ನಿರ್ದೇಶನದಂತೆ ಕಾರ್ಯಪಾಲಕ ಇಂಜಿನಿಯರ್ ನೇತೃತ್ವದಲ್ಲಿ ತೆರವು ಕಾರ್ಯಾಚರಣೆ ನಡೆಯಿತು. ತೆರವಿಗೆ ತಗಲುವ ವೆಚ್ಚವನ್ನು ದಂಡದ ಸಮೇತ ಮಾಲೀಕರಿಂದ ವಸೂಲಿ ಮಾಡಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಶ್ರೀ ಗುರುರಾಯರ ಸನ್ನಿಧಿಯಲ್ಲಿ

## ಶ್ರೀ ಪುರಂದರದಾಸರ ಆರಾಧನಾ ಮಹೋತ್ಸವ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮ ಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶ ಅನುಗ್ರಹದೊಂದಿಗೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಶ್ರೀ ಪುರಂದದಾಸರ ಆರಾಧನಾ ಮಹೋತ್ಸವವು ಕೆಂಗೇರಿ ಚಂದ್ರಿಕಾ ಭಜನಾ ಮಂಡಳಿಯವರಿಂದ ಹರಿಭಜನೆ, ಕಡಪ ವಸುದೇಂದ್ರ ಆಚಾರ್ಯರಿಂದ ಪ್ರವಚನ, ಮತ್ತು ವಿಶೇಷ ಉತ್ಸವದೊಂದಿಗೆ ಕಾರ್ಯಕ್ರಮವು ನೆರವೇರಿತು ಎಂದು ಪುರೋಹಿತರಾದ ಶ್ರೀ ನಂದಕಿಶೋರಾಚಾರ್ಯರು ತಿಳಿಸಿದರು. ಈ ಸಂದರ್ಭದಲ್ಲಿ ಭಕ್ತಾದಿಗಳಿಗೆ ಅನ್ನಸಂತರ್ಪಣೆ ಕಾರ್ಯಕ್ರಮವು ನೆರವೇರಿತು.

# ನಡುರಸ್ತೆಯಲ್ಲೇ ಧಗಧಗನೇ ಹೊತ್ತಿ ಉರಿದ ಕಾರು

• ಉದಯವಾಹಿನಿ, ಬೆಂಗಳೂರು

ಚಲಿಸುತ್ತಿದ್ದ ಕಾರು ನಡುರಸ್ತೆಯಲ್ಲೇ ಹೊತ್ತು ಉರಿದು ಕರಕಲಾಗಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ನಡುರಸ್ತೆಯಲ್ಲೇ ಬೆಳಗ್ಗೆ 7:30 ರ ಸುಮಾರಿಗೆ ವರ್ಣ ಕಾರು ಧಗಧಗನೆ ಬೆಂಕಿಗೆ ಆಹುತಿಯಾಗಿದೆ. ಯಶವಂತಪುರದಿಂದ ಟಾಟಾ ಇನ್ಸ್ಟಿಟ್ಯೂಟ್ ಕಡೆಗೆ ಹೋಗುವ ರಸ್ತೆಯಲ್ಲಿ ಘಟನೆ ನಡೆದಿದೆ. ಕಾರಿನಲ್ಲಿದ್ದ ಮೂವರು ಅದೃಷ್ಟವಶಾತ್ ಅಪಾಯದಿಂದ ಪಾರಾಗಿದ್ದಾರೆ. ಬೆಂಕಿಗಾಹುತಿಯಾದ ವೈಟ್ ಬೋರ್ಡ್ ವರ್ಣ ಕಾರಿನಲ್ಲಿ ಮೂವರು ಪ್ರಯಾಣಿಸುತ್ತಿದ್ದರು. ಕಾರನ್ನು ಸ್ಟಾರ್ಟ್ ಮಾಡಿ ಕೇವಲ ಒಂದು ಕಿಮೀ ದೂರ ಕ್ರಮಿಸಲಾಗಿತ್ತು. ಕಾರಿನ ಇಂಜಿನ್ ಭಾಗದಲ್ಲಿ ಬೆಂಕಿ, ಹೊಗೆ ಕಾಣಿಸೊಕೊಂಡಿದೆ. ಕೂಡಲೇ ಕಾರಿನಲ್ಲಿದ್ದವರು ಇಳಿದು ಬಚಾವ್ ಆಗಿದ್ದಾರೆ. ಬೆಂಕಿಯನ್ನ ನಂದಿಸಲು ಪ್ರಯತ್ನ ಪಟ್ಟರೂ ಸಾಧ್ಯವಾಗಿಲ್ಲ. ಅಗ್ನಿಶಾಮಕದಳ ಸ್ಥಳಕ್ಕೆ ಬರುವ ಹೊತ್ತಿಗೆ ಬೆಂಕಿ ಸಂಪೂರ್ಣ ಕಾರನ್ನು ಆವರಿಸಿತ್ತು. ಕೇವಲ 5 ನಿಮಿಷದಲ್ಲಿ ಸಂಪೂರ್ಣ ಕಾರು ಹೊತ್ತಿ ಉರಿದಿದೆ. ಕಾರು ಬೆಂಕಿಗೆ ಆಹುತಿಯಾಗಲು ಬ್ಯಾಟ್ರಿ ಶಾರ್ಟ್ ಸರ್ಕ್ಯೂಟ್ ಅಥವಾ ಇಂಜಿನ್ ಸಮಸ್ಯೆ ಕಾರಣ ಇರಬಹುದು ಎನ್ನಲಾಗಿದೆ. ಬೆಂಕಿಗೆ ಕಾರು ಆಹುತಿಯಾಗಲು ಕಾರಣವೇನು ಅಂತ ತನಿಖೆಯಿಂದಷ್ಟೇ ತಿಳಿಯಬೇಕಿದೆ. ಯಶವಂತಪುರ ಪೊಲೀಸರು ಸ್ಥಳಕ್ಕೆ ಬಂದು ಪ್ರಕರಣ ದಾಖಲು ಮಾಡಿಕೊಂಡಿದ್ದಾರೆ.

# ಪರಪ್ಪನ ಅಗ್ರಹಾರ ಜೈಲು ಸಿಬ್ಬಂದಿ ಮೇಲೆ ಕೈದಿಗಳಿಂದ ಹಲ್ಲೆ : ಕೇಸ್ ದಾಖಲು

• ಉದಯವಾಹಿನಿ, ಬೆಂಗಳೂರು

ಪರಪ್ಪನ ಅಗ್ರಹಾರ ಜೈಲಿನ ಅಸಿಸ್ಟೆಂಟ್ ಜೈಲರ್ ಮೇಲೆ ಕೈದಿಗಳು ಹಲ್ಲೆ ನಡೆಸಿರುವ ಆರೋಪ ಕೇಳಿ ಬಂದಿದೆ. ಶಿಕ್ಷಾ ಬಂಧಿಗಳಾದ ಆನಂದ (1489) ಮತ್ತು ಅಬ್ದುಲ್ ಘನಿ (18589) ಹಲ್ಲೆ ಸಿಬ್ಬಂದಿ ಮೇಲೆ ನಡೆಸಿದ್ದಾರೆ. ಇಬ್ಬರು ಸೇರಿ ಅನಾವಶ್ಯಕವಾಗಿ ಶಿಕ್ಷಾ ಬಂಧಿ ಕಚೇರಿಗೆ ನುಗ್ಗಲು ಯತ್ನಿಸಿದ್ದರು. ಇದನ್ನು ಅಸಿಸ್ಟೆಂಟ್ ಜೈಲರ್ ತಡೆಯಲು ಮುಂದಾದಾಗ ಕಾಲಿನಿಂದ ಒದ್ದು ಹಲ್ಲೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಈ ಸಂಬಂಧ ಪ್ರಭಾರ ಅಧೀಕ್ಷಕರು ಪರಪ್ಪನ ಅಗ್ರಹಾರ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಕರ್ತವ್ಯ ನಿರ್ವಹಿಸಲು ಭಯದ ವಾತಾವರಣ ಸೃಷ್ಟಿಯಾಗಿದೆ. ಪರಿಸ್ಥಿತಿ ಕೈ ಮೀರುವ ಮೊದಲು ಸಿಬ್ಬಂದಿಯ ರಕ್ಷಣಾ ಕ್ರಮಕೈಗೊಳ್ಳುವಂತೆ ದೂರಿನಲ್ಲಿ ಮನವಿ ಮಾಡಿದ್ದಾರೆ. ಜ.7 ರಂದು ಮಧ್ಯಾಹ್ನ ಮೂರು ಗಂಟೆ ಸುಮಾರಿಗೆ ಈ ಘಟನೆ ನಡೆದಿದ್ದು, ಜ.17 ರಂದು ಪರಪ್ಪನ ಅಗ್ರಹಾರ ಠಾಣೆಗೆ ದೂರು ಸಿಬ್ಬಂದಿ ದೂರು ನೀಡಿದ್ದಾರೆ. ದೂರಿನ ಅನ್ವಯ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ಮರಣ ಪೂರ್ವ ಹೇಳಿಕೆ ವಿಶ್ವಾಸಾರ್ಹ ಮತ್ತು ಸತ್ಯ-ವಾದದ್ದು ಹೈಕೋರ್ಟ್

## ಮಹಿಳೆಯನ್ನು ಬೆಂಕಿ ಹಚ್ಚಿ ಕೊಂದ ಆರೋಪದ ಮೇಲೆ ಜೀವಾವಧಿ ಶಿಕ್ಷೆಗೆ ಗುರಿಯಾಗಿದ್ದ ಆರೋಪಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಮರಣ ಪೂರ್ವ ಹೇಳಿಕೆಗಳು ಮೃತರು ನೀಡುವ ನಿಖರವಾದ ಪದಗಳೊಂದಿಗೆ ಪ್ರಶ್ನೋತ್ತರ ರೂಪದಲ್ಲಿದ್ದು, ಸಂಕ್ಷಿಪ್ತವಾಗಿರಬೇಕು. ಅಂತಹ ಹೇಳಿಕೆ ಸಂಪೂರ್ಣ ವಿಶ್ವಾಸಾರ್ಹ ಮತ್ತು ಸತ್ಯವಾದದ್ದು ಎಂಬುದನ್ನು ಸಾಬೀತುಪಡಿಸು-ವಂತಿರಬೇಕು ಎಂದು ಹೈಕೋರ್ಟ್ ಆದೇಶಿಸಿದೆ. ಅಲ್ಲದೆ, ಮಹಿಳೆಯೊಬ್ಬರಿಗೆ ಬೆಂಕಿ ಹಚ್ಚಿ ಸುಟ್ಟು ಹಾಕಿದ ಆರೋಪದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿದ್ದ ಆರೋಪಿಯೊಬ್ಬರನ್ನು ಖುಲಾಸೆಗೊಳಿಸಿದೆ.

ಕೊಲೆ ಆರೋಪದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿದ್ದ ಸರ್ಜಾಪುರ ಹೋಬಳಿಯ ರಾಯಸಂದ್ರದ ಸೋಮಶೇಖರ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಚ್.ಪಿ. ಸಂದೇಶ್ ಮತ್ತು ನ್ಯಾಯಮೂರ್ತಿ ಟಿ.ವೆಂಕಟೇಶ್ ನಾಯಕ್ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ.

**ರಾಜ್ಯದಲ್ಲಿ ಅಧಿಕಾರಿಗಳ ಮೇಲೆ ರಾಜಕೀಯ ಪ್ರೇರಿತ ದಾಳಿ**

**ಆರೋಪಿಯನ್ನು ಖುಲಾಸೆ:** ಮರಣ ಪೂರ್ವ ಹೇಳಿಕೆ ಪ್ರಶ್ನೋತ್ತರ ರೂಪದಲ್ಲಿರಬೇಕು, ಸಂತ್ರಸ್ತರು ಹೇಳಿರುವ ಪದಗಳು ನಿಖರವಾಗಿರಬೇಕು. ಈ ಹೇಳಿಕೆ ಚಿಕ್ಕದಾಗಿ ಸಂಕ್ಷಿಪ್ತವಾಗಿ ಮತ್ತು ವಿಷಯಕ್ಕೆ ತಕ್ಕಂತೆ ಇರಬೇಕು. ಆದರೆ, ಈ ಪ್ರಕರಣದಲ್ಲಿ ಮರಣ ಪೂರ್ವ ಹೇಳಿಕೆ ಎರಡು ಪುಟಗಳಿದ್ದು, ಸಂಪೂರ್ಣ ವಿಶ್ವಾಸಾರ್ಹ-ದಿಂದ ಕೂಡಿಲ್ಲ. ಆದ್ದರಿಂದ ಆರೋಪಿಯನ್ನು ಖುಲಾಸೆಗೊಳಿಸಲಾಗುತ್ತಿದೆ ಮತ್ತು ಎಂದು ನ್ಯಾಯಪೀಠ ತಿಳಿಸಿದೆ.

**ಹೇಳಿಕೆ ದಾಖಲಿಸಿರುವ ವಿಧಾನ ಅನುಮಾನಸ್ಪದ:** ಜತೆಗೆ ಮುಖ, ತುಟಿ ಸೇರಿ ದೇಹದ ನಾನಾ ಭಾಗಗಳಲ್ಲಿ ವ್ಯಾಪಕ ಸುಟ್ಟ ಗಾಯಗಳಾಗಿರುವ ಸ್ಥಿತಿಯಲ್ಲಿ ಅವರ ಮರಣ ಪೂರ್ವ ಹೇಳಿಕೆ ದಾಖಲಿಸಲಾಗಿದೆ. ಈ ಹೇಳಿಕೆ ನೀಡಲು ಮೃತರು ಮಾನಸಿಕ ಮತ್ತು ದೈಹಿಕವಾಗಿ ಸಮರ್ಥರಿದ್ದರೇ ಎಂಬುದರ ಬಗ್ಗೆ ಸಂದೇಹವಿದೆ. ಮೃತರ ಹೇಳಿಕೆಯನ್ನು ಪ್ರಕರಣದಲ್ಲಿ ಸಾಕ್ಷಿಗಳಾಗಿರುವ ವೈದ್ಯರು ಮತ್ತು ತನಿಖಾಧಿಕಾರಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ದಾಖಲಿಸಿಕೊಂಡಿದ್ದು, ಹೇಳಿಕೆ ದಾಖಲಿಸಿರುವ ವಿಧಾನವು ಅನುಮಾನಾಸ್ಪದವಾಗಿದೆ, ಎಂದು ಪೀಠ ಹೇಳಿದೆ.

ಮರಣಪೂರ್ವ ಹೇಳಿಕೆಯೊಂದನ್ನೇ ಅಧರಿಸಿ ಆರೋಪಿಗೆ ಶಿಕ್ಷೆ ವಿಧಿಸುವುದಕ್ಕೆ ಸಾಧ್ಯವಿಲ್ಲವೆಂದು ಸುಪ್ರೀಂಕೋರ್ಟ್ ಆದೇಶಿಸಿದೆ. ಮರಣ ಪೂರ್ವ ಹೇಳಿಕೆ ದಾಖಲಿಸಿಕೊಳ್ಳುವ ಸಂದರ್ಭದಲ್ಲಿ ನಿಯಮ-ಬದ್ಧವಾಗಿ ಸಂಗ್ರಹಿಸಿಲ್ಲ. ಹಾಗಾಗಿ ಈ ಸಾಕ್ಷ್ಯವನ್ನು ತಿರಸ್ಕರಿಸ-ಲಾಗುತ್ತಿದೆ,' ಎಂದು ನ್ಯಾಯಪೀಠ ತಿಳಿಸಿದೆ.

### ಅಧಿಕಾರಿಗಳಿಗೆ ಬೆದರಿಕೆ, ಕಠಿಣ ಕ್ರಮಕ್ಕೆ ಆಗ್ರಹ

ರಾಜ್ಯದಲ್ಲಿ ಸರಕಾರಿ ಅಧಿಕಾರಿಗಳ ಮೇಲೆ ಪದೇ ಪದೆ ನಡೆಯುತ್ತಿರುವ ದೌರ್ಜನ್ಯ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಲು ಕ್ರಮ ಕೈಗೊಳ್ಳಬೇಕು ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಅವರು ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಮನವಿ ಮಾಡಿದ್ದಾರೆ. ಕಾಂಗ್ರೆಸ್ ಪುಂಡರು ಸರಕಾರಿ ಕಚೇರಿಧಿಗಳನ್ನು ಪಕ್ಷದ ಕಚೇರಿ ಮಾಡಿಕೊಂಡಿದ್ದಾರೆ. ಹಾಗಾಗಿ ಮುಖ್ಯ ಕಾರ್ಯದರ್ಶಿಯನ್ನು ಕಚೇರಿಗೆ ಕರೆಸಿ ಚರ್ಚಿಸಿ ಅವರಿಗೆ ನನ್ನ ವಿರೋಧವನ್ನು ತಿಳಿಸಿದ್ದೇನೆ. ಅಧಿಕಾರಿಗಳನ್ನು ರಕ್ಷಣೆ ಮಾಡುವುದು ನಿಮ್ಮ ಕರ್ತವ್ಯವೆಂದು ಅವರಿಗೆ ಹೇಳಿದ್ದೇನೆ, ಎಂದು ತಿಳಿಸಿದರು.

''ರಾಜ್ಯದಲ್ಲಿ ಅಧಿಕಾರಿಗಳ ಮೇಲೆ ರಾಜಕೀಯ ಪ್ರೇರಿತ ದಾಳಿ, ನಿಂದನೆ ಪ್ರಕರಣಗಳು ಹೆಚ್ಚಾಗುತ್ತಿರುವುದು ಕಳವಳಕಾರಿ ಸಂಗತಿ. ಶಿಡ್ಲಘಟ್ಟ ನಗರಸಭೆಯ ಪೌರಾಯುಕ್ತರಿಗೆ ಕಾಂಗ್ರೆಸ್ ಮುಖಂಡ ರಾಜೀವ್ ಗೌಡ ಅವರು ಜೀವ ಬೆದರಿಕೆ ಹಾಕಿರುವುದು ಆಘಾತಕಾರಿ ಘಟನೆಯಾಗಿದೆ.

ಇಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಧಿಬೇಕು ಎಂದು ಅವರು ಕೋರಿದ್ದಾರೆ. ಸರಕಾರಿ ಅಧಿಕಾರಿ, ಸಿಬ್ಬಂದಿ ಯಾವುದೇ ಬಾಹ್ಯ ಒತ್ತಡ ಅಥವಾ ರಾಜಕೀಯ ಹಸ್ತಕ್ಷೇಪವಿಲ್ಲದೆ, ನಿರ್ಭೀತಿ, ಪ್ರಾಮಾಣಿಕತೆಯಿಂದ ಕೆಲಸ ಮಾಡಬಲ್ಲ ಭಯಮುಕ್ತ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು, ಎಂದು ಆಗ್ರಹಿಸಿದ್ದಾರೆ.

# ಸಮರ್ಪಕ ಒಳಚರಂಡಿ ನಿರ್ಮಿಸಲು ಆಗ್ರಹ

• ಉದಯವಾಹಿನಿ, ಕೆ.ಆರ್.ಪುರ


ಉದಯವಾಹಿನಿ ಚಿತ್ರ

ಕೊಳಚೆ ನೀರು ಹಾಗೂ ದುರ್ವಾಸನೆಗೆ ಬೇಸತ್ತು ಸಮರ್ಪಕ ಚರಂಡಿ ನಿರ್ಮಿಸುವಂತೆ ಒತ್ತಾಯಿಸಿ ಮಂಜುನಾಥ್ ನಗರ ಮತ್ತು ಕಲ್ಕೆರೆ ನಿವಾಸಿಗಳು ಜಿಬಿಎ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.ಅಣ್ಣಯ್ಯಪ್ಪ ತೆಂಗಿನ

ತೋಟದ ಬಡಾವಣೆ ಸಮೀಪದ ಕಲ್ಕೆರೆಯಿಂದ ಮಂಜುನಾಥ್ ನಗರ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಕೆಲ ವರ್ಷಗಳಿಂದ ಸಮರ್ಪಕ ಒಳಚರಂಡಿ ವ್ಯವಸ್ಥೆ ಇಲ್ಲದೆ ಕೊಳಚೆ ನೀರು ರಸ್ತೆಯ ಮೇಲೆ ಹರಿಯುತ್ತಿದೆ. ಪ್ರತಿದಿನ ಸಾರ್ವಜನಿಕರು ದುರ್ವಾಸನೆಗೆ ಹೈರಾಣಾಗಿದ್ದಾರೆ. ನಿತ್ಯದ ಸಂಚಾರಕ್ಕೆ ಅಡಚಣೆಯಾಗಿ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ.

ಕೊಳಚೆ ನೀರು ಹರಿದು ರಸ್ತೆ ಸಂಪೂರ್ಣವಾಗಿ ಹಾಳಾಗಿದೆ. ವಾಹನ ಸವಾರರು ಹಾಗೂ ವಿದ್ಯಾರ್ಥಿಗಳು ಪ್ರತಿನಿತ್ಯ ಕಿರಿಕಿರಿ ಅನುಭವಿಸುತ್ತಿದ್ದಾರೆ. ಈ ಬಗ್ಗೆ ಶಾಸಕ ಭೈರತಿ ಬಸವರಾಜ ಮತ್ತು ಜಿಬಿಎ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಮಂಜುನಾಥ್ ನಗರ ನಿವಾಸಿ ಕೆ.ವಿ.ಶ್ರೀನಿವಾಸ್ ಅಸಮಾಧಾನ ವ್ಯಕ್ತಪಡಿಸಿದರು. ರಸ್ತೆಯಲ್ಲಿ ಗುಂಡಿಗಳು ನಿರ್ಮಾಣವಾಗಿದೆ.

ಅಕ್ಕ ಪಕ್ಕದಲ್ಲಿರುವ ನಾಲ್ಕೈದು ಮನೆಯವರು ಉದ್ದೇಶಪೂರ್ವಕವಾಗಿ ಚರಂಡಿ ನಿರ್ಮಿಸಲು, ಕಾವೇರಿ ಪೈಪಲೈನ್ ಅಳವಡಿಕೆಗೆ ಹಾಗೂ ಒಳಚರಂಡಿ ನಿರ್ಮಾಣಕ್ಕೆ ಅಡ್ಡಿಪಡಿಸುತ್ತಿದ್ದಾರೆ.

ವಿದ್ಯುತ್ ಕಂಬ ಹಾಕಲು ಬಿಡುತ್ತಿಲ್ಲ. ಸಾರ್ವಜನಿಕ ರಸ್ತೆಯನ್ನು ತಮಗೆ ಸೇರಿದ್ದು, ಯಾವುದೇ ಅಭಿವೃದ್ಧಿ ಕಾರ್ಯಗಳನ್ನು ಮಾಡುವಂತಿಲ್ಲ ಧಮ್ಕಿ ಹಾಕುತ್ತಿದ್ದಾರೆ ಎಂದು ಕಲ್ಕೆರೆ ನಿವಾಸಿ ಕೆ.ಪಿ.ಶಂಕರಪ್ಪ ದೂರಿದರು. ಆದಷ್ಟು ಬೇಗ ಚರಂಡಿ ನಿರ್ಮಾಣ ಮಾಡುವಂತೆ ಕಲ್ಕೆರೆ ನಿವಾಸಿ ಮೂರ್ತಿ, ಮುಖಂಡ ಬೀರಪ್ಪ ಆಗ್ರಹಿಸಿದರು.

# ಪಕ್ಷ ಸಂಘಟನೆಗೆ ಮನೆಮನೆಗೆ ಭೇಟಿ: ಶೋಭಾ ಕರಂದ್ಲಾಜೆ

• ಉದಯವಾಹಿನಿ, ಪೀಣ್ಯ ದಾಸರಹಳ್ಳಿ



ನಗರ ಪಾಲಿಕೆ ಚುನಾವಣೆಯಲ್ಲೂ ಪಕ್ಷ ಬಲವರ್ಧನೆಗೆ ಹೆಚ್ಚು ಕಾರ್ಯ ಪ್ರವೃತ್ತರಾಗಬೇಕು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು. ದಾಸರಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಶಾಸಕ ಎಸ್. ಮುನಿರಾಜು ಅವರೊಂದಿಗೆ ಬಿಜೆಪಿ ಕಾರ್ಯಕರ್ತರ ಮನೆಮನೆಗೆ ಭೇಟಿ ನೀಡಿ ಮಾತನಾಡಿದರು.

ಲೋಕಸಭೆ ಚುನಾವಣೆಯಲ್ಲಿ ನನಗೆ ಹೆಚ್ಚು ಮತ ಕೊಟ್ಟಿದ್ದೀರಿ. ಹಾಗೆಯೇ ನಗರ ಪಾಲಿಕೆ ಚುನಾವಣೆಯಲ್ಲೂ ಎಲ್ಲರೂ ಕೆಲಸ ನಿರ್ವಹಿಸಿ ಹೆಚ್ಚು ಮತಗಳನ್ನು ನೀಡಿ ಪಕ್ಷ ಗೆಲ್ಲುವಂತೆ ಮಾಡಬೇಕು ಎಂದರು.

ಶಾಸಕ ಎಸ್. ಮುನಿರಾಜು ಮಾತನಾಡಿ, ನಮ್ಮ ಕ್ಷೇತ್ರದಲ್ಲಿ ಈ ಹಿಂದೆ 8 ವಾರ್ಡ್‌ಗಳಲ್ಲಿ ಐದು ವಾರ್ಡ್ ನಲ್ಲಿ ಬಿಜೆಪಿ ಗೆದ್ದಿತ್ತು. ಈಗ ಪ್ರತಿ ವಾರ್ಡ್ ನಲ್ಲೂ ಬಿಜೆಪಿ ಗೆಲುವಿಗೆ ಎಲ್ಲರೂ ಶ್ರಮಿಸಬೇಕು' ಎಂದು ಮನವಿ ಮಾಡಿದರು. ಬಿಜೆಪಿ ಕಾರ್ಯಕರ್ತರಾದ ಚಿಕ್ಕಬಾಣಾವರದ ಶಾಂತಿನಗರ ಸುರೇಶ್ ಖಾಡೆ, ಸೌಂದರ್ಯ ಬಡಾವಣೆಯ ಶಂಕರಪ್ಪ ಎಬಿಬಿ, ಸಿಡೇದಹಳ್ಳಿಯ ಪಿ.ಎಚ್.ರಾಜು, ಎಂಇಐ ಬಡಾವಣೆಯ ನಾಯ್ಡು, ಬಾಗಲಗುಂಟೆ ಮಾರಮ್ಮ ದೇವಸ್ಥಾನ ಹತ್ತಿರದ ಮಹೇಶ್, ಹಾವನೂರು ಬಡಾವಣೆಯ ಹನುಮಂತರಾಯಪ್ಪ, ಭುವನೇಶ್ವರಿನಗರದ ವೆಂಕಟೇಶಯ್ಯ, ಮಲ್ಲಸಂದ್ರದ ಗಂಗರಾಜು, ಬಿಎಚ್ ಇಎಲ್ ಮಿನಿ ಕಾಲೋನಿಯ ಹುಚ್ಚರಂಗಯ್ಯ, ದಾಸರಹಳ್ಳಿಯ ಚಂದ್ರಣ್ಣ (ಮರಿಯಪ್ಪ), ಮತ್ತು ಡಿ.ಎಂ.ವೆಂಕಟೇಶ್ ಅವರ ಮನೆಗೆ ಕೇಂದ್ರ ಸಚಿವರು, ಶಾಸಕರು ಭೇಟಿ ನೀಡಿದರು. ದಾಸರಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಶಾಸಕ ಎಸ್. ಮುನಿರಾಜು ಅವರೊಂದಿಗೆ ಬಿಜೆಪಿ ಕಾರ್ಯಕರ್ತರ ಮನೆಮನೆಗೆ ಭೇಟಿ ನೀಡಿ ಮಾತನಾಡಿದರು.

ಲೋಕಸಭೆ ಚುನಾವಣೆಯಲ್ಲಿ ನನಗೆ ಹೆಚ್ಚು ಮತ ಕೊಟ್ಟಿದ್ದೀರಿ. ಹಾಗೆಯೇ ನಗರ ಪಾಲಿಕೆ ಚುನಾವಣೆಯಲ್ಲೂ ಎಲ್ಲರೂ ಕೆಲಸ ನಿರ್ವಹಿಸಿ ಹೆಚ್ಚು ಮತಗಳನ್ನು ನೀಡಿ ಪಕ್ಷ ಗೆಲ್ಲುವಂತೆ ಮಾಡಬೇಕು ಎಂದರು.

ಶಾಸಕ ಎಸ್. ಮುನಿರಾಜು ಮಾತನಾಡಿ, ನಮ್ಮ ಕ್ಷೇತ್ರದಲ್ಲಿ ಈ ಹಿಂದೆ 8 ವಾರ್ಡ್‌ಗಳಲ್ಲಿ ಐದು ವಾರ್ಡ್ ನಲ್ಲಿ ಬಿಜೆಪಿ ಗೆದ್ದಿತ್ತು. ಈಗ ಪ್ರತಿ ವಾರ್ಡ್‌ನಲ್ಲೂ ಬಿಜೆಪಿ ಗೆಲುವಿಗೆ ಎಲ್ಲರೂ ಶ್ರಮಿಸಬೇಕು' ಎಂದು ಮನವಿ ಮಾಡಿದರು.

# ಲಾಲ್‌ಬಾಗ್ ಪುಷ್ಪ ಪ್ರದರ್ಶನ: ತೆಂಗಿನ ಗರಿಗಳಲ್ಲಿ ಅರಳಿದ ಪೂರ್ಣಚಂದ್ರ ತೇಜಸ್ವಿ ಜೀಪು

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ತೆಂಗಿನ ಗರಿಗಳಲ್ಲಿ ಅರಳಿದ ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರ ಜೀಪು, ಸ್ಕೂಟರ್, ತರಕಾರಿಗಳಿಂದ ಮಾಡಿದ ನವಿಲು, ಹಂಸ, ನಿರುತ್ತರದ ಮನೆ ನೋಡುಗರ ಮನಸೂರೆಗೊಂಡವು. ತೇಜಸ್ವಿ ವಿಸ್ಮಯ ವಿಷಯಾಧಾರಿತ ಫಲಪುಷ್ಪ ಪ್ರದರ್ಶನದ ಅಂಗವಾಗಿ ಲಾಲ್‌ಬಾಗ್‌ನ ತೋಟಗಾರಿಕೆ ಮಾಹಿತಿ ಕೇಂದ್ರದಲ್ಲಿ ಆಯೋಜಿಸಿರುವ ಇಕೆಬಾನ, ಪುಷ್ಪಭಾರತಿ, ಪುಷ್ಪ ರಂಗೋಲಿ, ತರಕಾರಿ ಕೆತ್ತನೆ, ಡಚ್ ಹೂವಿನ ಜೋಡಣೆ, ಥಾಯ್ ಆರ್ಟ್ ಜಾನೂರು ಮತ್ತು ಬೋನ್ಸಾಯ್ ಗಿಡಗಳ ಪ್ರದರ್ಶನದಲ್ಲಿ ಕಂಡುಬಂದ ದೃಶ್ಯವಿದು. ಈ ಪ್ರದರ್ಶನಕ್ಕೆ ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರ ಪುತ್ರಿ ಕೆ.ಪಿ. ಈಶಾನ್ಯ ಚಾಲನೆ ನೀಡಿದರು. ಇಕೆಬಾನ ಹೂಗಳ ಪ್ರದರ್ಶನ ಚಿತ್ತಾಕರ್ಷಕವಾಗಿತ್ತು.

ಜನರು ತಮ್ಮ ಇಷ್ಟದ ಪ್ರದರ್ಶನಗಳ ಎದುರು ನಿಂತು ಫೋಟೊ ತೆಗೆಸಿಕೊಳ್ಳುತ್ತಿದ್ದರು. ತೇಜಸ್ವಿ ಅವರು ಕ್ಯಾಮೆರಾ ಹಿಡಿದುಕೊಂಡು ನಿಂತಿರುವ ಮಾದರಿಯನ್ನು ಬಾಳೆ ಎಲೆಯಲ್ಲಿ ಅದ್ಭುತವಾಗಿ ರಚಿಸಲಾಗಿದೆ. ಸಾರ್ವಜನಿಕರು ಇದರ ಮುಂಭಾಗದಲ್ಲಿ ನಿಂತುಕೊಂಡು ಸೆಲ್ಫಿ ತೆಗೆದುಕೊಳ್ಳುತ್ತಿದ್ದರು. ತೆಂಗಿನಗರಿಗಳಲ್ಲಿ ರಚಿಸಿದ ಆಮೆಯ ಮಾದರಿಗಳು ನೋಡಗರ ಗಮನ ಸೆಳೆದವು. ಇದರ ಜೊತೆಗೆ ಡಚ್ ಹೂವಿನ ಜೋಡಣೆ, ಬೋನ್ಸಾಯ್ ಗಿಡಗಳ ಪ್ರದರ್ಶನ ಆಕರ್ಷಕವಾಗಿತ್ತು.

ತೆಂಗಿನ ಗರಿಗಳಲ್ಲಿ ಮೂಡಗೆರೆಯ ವಾತಾವರಣವನ್ನು ರೂಪಿಸಿದ ಮಾದರಿ ಸಾರ್ವಜನಿಕರು ಕುತೂಹಲದಿಂದ ವೀಕ್ಷಿಸಿದರು. ತೋಟಗಾರಿಕೆ ಇಲಾಖೆಯ ನಿರ್ದೇಶಕ ಇಬ್ರಾಹಿಂ ಮೈಗೂರು ಉಪಸ್ಥಿತರಿದ್ದರು.

### 49 ಸಾವಿರ ಮಂದಿ ಭೇಟಿ

ಲಾಲ್‌ಬಾಗ್‌ನ ಗಾಜಿನ ಮನೆಯಲ್ಲಿ ನಡೆಯುತ್ತಿರುವ ತೇಜಸ್ವಿ ವಿಸ್ಮಯ ವಿಷಯಾಧಾರಿತ ಫಲಪುಷ್ಪ ಪ್ರದರ್ಶನ ವೀಕ್ಷಿಸಲು ಶನಿವಾರ 49721 ಜನ ಭೇಟಿ ನೀಡಿದ್ದು ರೂ.17.60 ಲಕ್ಷ ಪ್ರವೇಶ ಶುಲ್ಕ ಸಂಗ್ರಹವಾಗಿದೆ ಎಂದು ತೋಟಗಾರಿಕೆ ಇಲಾಖೆ ಹೆಚ್ಚುವರಿ ನಿರ್ದೇಶಕ ಎಂ. ಜಗದೀಶ್ ತಿಳಿಸಿದ್ದಾರೆ.

# ಕ್ಷೀರ ಸಂಜೀವಿನಿ ಯೋಜನೆ ದಶಮಾನೋತ್ಸವ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಕರ್ನಾಟಕದ ಹೈನೋದ್ಯಮದಲ್ಲಿ 9 ಲಕ್ಷ ಮಂದಿ ತೊಡಗಿಸಿಕೊಂಡಿದ್ದು, ಇದರಲ್ಲಿ ಮಹಿಳೆಯರ ಸಂಖ್ಯೆಯೇ 4.72 ಲಕ್ಷ. ಈ ಮೂಲಕ ಮಹಿಳೆಯರು ದೇಶ, ರಾಜ್ಯದ ಆರ್ಥಿಕ ಪ್ರಗತಿ, ತಲಾ ಆದಾಯ ವೃದ್ಧಿಗೆ ಕೊಡುಗೆ ನೀಡುತ್ತಿದ್ದಾರೆ ಎಂದು ಕರ್ನಾಟಕ ಹಾಲು ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕ ಬಿ.ಶಿವಸ್ವಾಮಿ ಹೇಳಿದರು.ಕರ್ನಾಟಕ ಹಾಲು ಮಹಾಮಂಡಳ, ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ, ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆ ನಗರದಲ್ಲಿ ಆಯೋಜಿಸಿದ್ದ ಕ್ಷೀರ ಸಂಜೀವಿನಿ ಯೋಜನೆಯ ದಶಮಾನೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು. ಕ್ಷೀರ ಸಂಜೀವಿನಿ ಹಂತ-1 ರಿಂದ 5ರ ಯೋಜನೆಯಡಿ ಹೈನುಗಾರಿಕೆ ಮೂಲಕ ಗ್ರಾಮೀಣ ಮಹಿಳೆಯರ ಸಾಮಾಜಿಕ-ಆರ್ಥಿಕ ಅಭಿವೃದ್ಧಿಗೆ ರೂ.75.93 ಕೋಟಿ ಮೀಸಲಿರಿಸಲಾಗಿದೆ. ಕ್ಷೀರ ಸಂಜೀವಿನಿ ಯೋಜನೆಯಡಿಯಲ್ಲಿ ಹೈನುಗಾರಿಕೆ ಮೂಲಕ ಗ್ರಾಮೀಣ ಮಹಿಳೆಯರ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಯ ಉದ್ದೇಶದಿಂದ ಆದ್ಯತಾ ಗುಂಪಿನ ಸದಸ್ಯರಿಗೆ ತರಬೇತಿ, ಬಡ್ಡಿ ರಹಿತ ಅಂಚಿನ ಹಣದ ಮೂಲಕ ಹೈನುಗಳನ್ನು ಕೊಡಿಸುವುದು ಹಾಗೂ ಅರಿವು ಕಾರ್ಯಕ್ರಮ ಕೈಗೊಳ್ಳಲಾಗಿದ್ದು, ಯೋಜನೆಯು ಪ್ರಗತಿಯಲ್ಲಿದೆ ಎಂದರು.

ಕೆಎಂಎಫ್ ಆಡಳಿತಾಧಿಕಾರಿ ಟಿ.ಎಚ್.ಎಂ.ಕುಮಾರ್, ರಾಷ್ಟ್ರೀಯ ಜೀವನೋಪಾಯ ಮಿಷನ್ ಯೋಜನಾ ನಿರ್ದೇಶಕಿ ಆರ್.ಸ್ನೇಹಲ್, ಕೋಲಾರ ಹಾಲು ಒಕ್ಕೂಟದ ಅಧ್ಯಕ್ಷ ನಂಜೇಗೌಡ, ಮೈಸೂರು ಹಾಲು ಒಕ್ಕೂಟದ ಅಧ್ಯಕ್ಷ ಈರೇಗೌಡ, ಮಂಡ್ಯ ಹಾಲು ಒಕ್ಕೂಟದ ಅಧ್ಯಕ್ಷ ಶಿವಕುಮಾರ್, ಚಾಮರಾಜನಗರ ಹಾಲು ಒಕ್ಕೂಟದ ಅಧ್ಯಕ್ಷ ನಂಜುಂಡಸ್ವಾಮಿ, ಶಿವಮೊಗ್ಗ ಹಾಲು ಒಕ್ಕೂಟದ ಅಧ್ಯಕ್ಷ ವಿದ್ಯಾಧರ್, ಬಾಗಲಕೋಟ ವಿಜಯಪುರ ಹಾಲು ಒಕ್ಕೂಟದ ಅಧ್ಯಕ್ಷ ಕರೇಗೌಡ, ಕಲಬುರಗಿ ಹಾಲು ಒಕ್ಕೂಟದ ಅಧ್ಯಕ್ಷ ಆರ್.ಕೆ.ಪಾಟೀಲ್, ದಕ್ಷಿಣ ಕನ್ನಡ ಹಾಲು ಒಕ್ಕೂಟದ ಅಧ್ಯಕ್ಷ ರವಿಚಂದ್ರ ಹೆಗ್ಡೆ ಉಪಸ್ಥಿತರಿದ್ದರು.

# ಅಬಕಾರಿ ಇಲಾಖೆ ಕರ್ಮಕಾಂಡ: ಸನ್ನದು ಪಡೆಯಲು

## 2.30 ಕೋಟಿ ಬೇಡಿಕೆ ಆರೋಪದ ಆಡಿಯೋ ವೈರಲ್

• ಉದಯವಾಹಿನಿ, ಬೆಂಗಳೂರು



CL-7 ಮತ್ತು ಮೈಕ್ರೋಬ್ರೆವರಿ ಸನ್ನದಿಗೆ 2.30 ಕೋಟಿ ರೂ. ಲಂಚ ಕೇಳಿದ್ದ ಅಬಕಾರಿ ಇಲಾಖೆಯ ಡಿಸಿ ಸೇರಿ ಮೂವರು ಲೋಕಾ ಬಲೆಗೆ ಬಿದ್ದ ಪ್ರಕರಣ ಸದ್ದು ಮಾಡ್ತಿದೆ. ಈ ಬೆನ್ನಲ್ಲೇ ಇನ್ನೊಂದು ಹಳೆಯ ಪ್ರಕರಣವೂ ಮುನ್ನೆಲೆಗೆ ಬಂದಿದ್ದು, ಜೆಡಿಎಸ್ ಶಾಸಕ ಹೆಚ್‌ಟಿ ಮಂಜು ದೂರಿನ ಬಗ್ಗೆ ಎಚ್ಚರಿಸಿದ್ದಾರೆ.ಕಳೆದ ವರ್ಷದ ಸೆಪ್ಟೆಂಬರ್‌ನಲ್ಲಿ ಶಾಸಕ ಹೆಚ್‌ಟಿ ಮಂಜು ದೂರು ಕೊಟ್ಟಿದ್ದರು.

ಈಗ ಮತ್ತೆ ಈ ಸಂಬಂಧ ನೆನಪಿಸಿದ್ದು, ಕ್ರಮ ಕೈಗೊಳ್ಳದಿದ್ರೆ ರಾಜ್ಯಪಾಲರ ಮೊರೆ ಹೋಗೋದಾಗಿ ಎಚ್ಚರಿಕೆ ಕೊಟ್ಟಿದ್ದಾರೆ.

**ಆರೋಪ ಏನು?:** ಅಬಕಾರಿ ಇಲಾಖೆಯಲ್ಲಿ ಸನ್ನದು ಮಂಜೂರಿಗೆ ಲಂಚದ ಬೇಡಿಕೆಯಿಟ್ಟಿದ ಆರೋಪದ ಆಡಿಯೋ ವೈರಲ್ ಆಗಿತ್ತು. ಲೈಸೆನ್ಸ್ ಪಡೆಯಲು ಅಬಕಾರಿ ಸಚಿವರನ್ನು ಹಾಗೂ ಅವರ ಪುತ್ರನನ್ನು ಹೋಗಿ ಕಾಣಬೇಕೆಂದು ಅಬಕಾರಿ ಅಧಿಕಾರಿಯೊಬ್ಬ, ಈ ಆಡಿಯೋ ಸಂಭಾಷಣೆಯಲ್ಲಿ ಹೇಳಿದ್ದಾರೆ.

ಅಬಕಾರಿ ಸಚಿವರು ಹಾಗೂ ಅವರ ಪುತ್ರನ ಹೆಸರು ಬಂದಿರೋ ಹಿನ್ನೆಲೆಯಲ್ಲಿ ಪ್ರಕರಣದ ತನಿಖೆಗೆ ಕೋರಿ ಸಿಎಂ ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಜೆಡಿಎಸ್ ಶಾಸಕ ಹೆಚ್‌ಟಿ ಮಂಜು ದೂರು ಸಲ್ಲಿಕೆ ಮಾಡಿದ್ದರು. ಈ ದೂರಿಗೆ ತಕ್ಷಣ ಸ್ಪಂದಿಸಿ ಅಬಕಾರಿ ಇಲಾಖೆ ಆಯುಕ್ತರಿಗೆ ಕಳೆದ ಡಿಸೆಂಬರ್‌ನಲ್ಲೇ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಪತ್ರ ಬರೆದಿದ್ದರು. ಪ್ರಕರಣದ ಕುರಿತು ಸಮಗ್ರ ಪರಿಶೀಲನೆ ನಡೆಸುವಂತೆ ಶಾಲಿನಿ ರಜನೀಶ್ ಸೂಚಿಸಿದ್ದರು. ಜೊತೆಗೆ, ಈವರೆಗೆ ಕೈಗೊಂಡಿರುವ ಕ್ರಮಗಳ ವಿವರವನ್ನು ಸಲ್ಲಿಸುವಂತೆ ಆಯುಕ್ತರಿಗೆ ಶಾಲಿನಿ ರಜನೀಶ್ ನಿರ್ದೇಶನ ಕೊಟ್ಟಿದ್ರು. ಸಚಿವ ಆರ್.ಬಿ. ತಿಮ್ಮಾಪುರ ಹಾಗೂ ಅವರ ಪುತ್ರನ ಮೇಲೆಯೇ ಆರೋಪ ಬಂದ ಹಿನ್ನೆಲೆಯಲ್ಲಿ ಈ ಪ್ರಕರಣ ಗಮನ ಸೆಳೆದಿದೆ.

### ಆಡಿಯೋದಲ್ಲಿ ಏನಿದೆ?

ವೈರಲ್ ಆಗಿದ್ದ ಆಡಿಯೋದಲ್ಲಿ ಅಬಕಾರಿ ಸನ್ನದು ಮಂಜೂರು ಮಾಡುವ ವಿಚಾರವಾಗಿ ಹಣಕ್ಕೆ ಬೇಡಿಕೆಯಿಟ್ಟಿದ್ದಾರೆ ಎನ್ನಲಾಗಿದೆ. ಸಂಭಾಷಣೆಯ ಮಧ್ಯೆ ಸಚಿವ ತಿಮ್ಮಾಪುರ ಅವರ ಪುತ್ರನ ಹೆಸರು ಬಳಕೆಯಾಗಿದ್ದು, ಸಚಿವರ ಪುತ್ರನಿಗೆ ಕರೆ ಮಾಡಿ ಮಾತನಾಡಿ ಎಂಬ ಸೂಚನೆಗಳು ಆಡಿಯೋದಲ್ಲಿ ಇದೆ ಎನ್ನಲಾಗಿದೆ.

# ಹೊಸ ಪರಿಹಾರ ಪ್ಯಾಕೇಜ್‌ಗೆ ಬಿಡಿಎ ಮುಂದು; ಪ್ರತಿ ಎಕರೆಗೆ 16 ಕೋಟಿ ರೂ.!

## • ಬಿಸಿನೆಸ್ ಕಾರಿಡಾರ್‌ನ ಭೂ ಪರಿಹಾರದ ವಿಚಾರದಲ್ಲಿ ಮಹತ್ವದ ಬದಲಾವಣೆ • ಭೂಸ್ವಾಧೀನ ತ್ವರಿತಗೊಳಿಸಿ ಕಾಮಗಾರಿ ಟೆಂಡರ್ ಆಹ್ವಾನಿಸಲು ಸಿದ್ಧತೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬಿಡಿಎ ಪ್ರಮುಖ ಯೋಜನೆಯಾದ ಬೆಂಗಳೂರು ಬಿಸಿನೆಸ್ ಕಾರಿಡಾರ್‌ನ ಭೂ ಪರಿಹಾರದ ವಿಚಾರದಲ್ಲಿ ಕೆಲ ಗ್ರಾಮಗಳಲ್ಲಿ ಪ್ರತಿ ಎಕರೆಗೆ 16 ಕೋಟಿ ರೂ.ವರೆಗೂ ಮಾತುಕತೆ ಮೂಲಕ ಪರಿಹಾರ ನೀಡಲು ಸರ್ಕಾರ ಮುಂದಾಗಿದೆ.

ಹಳೆಯ ಭೂ ಸ್ವಾಧೀನದ ಆದೇಶಗಳು ಈಗಿನ ಭೂಮಿಯ ಬೆಲೆ ಏರಿಕೆಯೊಂದಿಗೆ ಹೊಂದಿಕೆಯಾಗುತ್ತಿಲ್ಲ. ಹೀಗಾಗಿ ಬಿಡಿಎ ಸಹಾಯಧನ ಪ್ಯಾಕೇಜ್ ರೂಪದಲ್ಲಿ ಪರಿಹಾರ ನೀಡಲು ನಿರ್ಧರಿಸಿದೆ. ಈ ಮೂಲಕ ಭೂಸ್ವಾಧೀನ ತ್ವರಿತಗೊಳಿಸಿ ಕಾಮಗಾರಿ ಟೆಂಡರ್ ಆಹ್ವಾನಿಸಲು ಸಿದ್ಧತೆ ನಡೆಸಿದೆ.

ಈ ಯೋಜನೆಯನ್ನು ಹಿಂದೆ ಪೆರಿಫೆರಲ್ ರಿಂಗ್ ರೋಡ್ ಎಂದು ಕರೆಯಲಾಗುತ್ತಿತ್ತು. 2008 - 09 ರಲ್ಲಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿತ್ತು. ಆಗ ಬಿಡಿಎ 948 ಎಕರೆ 14.5 ಗುಂಟೆ ಭೂಮಿಗೆ ಪ್ರತಿ ಎಕರೆಗೆ 20 - 30 ಲಕ್ಷ ರೂಪಾಯಿ ಪರಿಹಾರ ನೀಡುವುದಾಗಿ ಆದೇಶ ಹೊರಡಿಸಿತ್ತು. ಇದು ಮೊದಲ ಹಂತದಲ್ಲಿ ಅಧಿಸೂಚನೆಗೊಂಡ 1,810 ಎಕರೆ ಭೂಮಿಯ ಒಂದು ಭಾಗವಾಗಿದೆ. ಆದರೆ, ರೈತರ ವಿರೋಧದಿಂದಾಗಿ ಸುಮಾರು 15 ವರ್ಷಗಳಿಂದ ಯೋಜನೆ ಸ್ಥಗಿತಗೊಂಡಿತ್ತು. ಇದರಿಂದ ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿರಲಿಲ್ಲ. ಈಗ ಕಾಂಗ್ರೆಸ್ ಸರ್ಕಾರ ಈ ಕಾರಿಡಾರ್ ಅನ್ನು ನಗರದ ಟ್ರಾಫಿಕ್ ಸಮಸ್ಯೆಯನ್ನು ಕಡಿಮೆ ಮಾಡುವ ಪ್ರಮುಖ ಯೋಜನೆಯಾಗಿ ಪರಿಗಣಿಸಿದೆ. ಹೀಗಾಗಿ ಭೂ ಸ್ವಾಧೀನ ಪ್ರಕ್ರಿಯೆ ವೇಗ ಪಡೆದುಕೊಂಡಿದೆ. ಆದರೆ, ಹಳೆಯ ಆದೇಶವು ಕಾನೂನು ತೊಡಕನ್ನು ಸೃಷ್ಟಿಸಿದೆ. ಆದೇಶ ಹೊರಡಿಸಿದ ನಂತರ, ಕಾನೂನಿನ ಪ್ರಕಾರ ಅದನ್ನು ಹಿಂಪಡೆಯಲು ಸಾಧ್ಯವಿಲ್ಲ, ಪರ್ಯಾಯ ಪರಿಹಾರ ಯೋಜನೆಗಳನ್ನು ಕೇವಲ ಸಹಾಯಧನ ಆಗಿ ಪರಿಗಣಿಸಬಹುದು ಮತ್ತು ಅಂತಿಮ ನಿರ್ಧಾರ ರೈತರ ಕೈಯಲ್ಲಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ ಎಂದು ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ.

**ಪ್ರತಿ ಎಕರೆಗೆ 16 ಕೋಟಿ ರೂವರೆಗೂ ಪರಿಹಾರ:** ಇದೇ ವೇಳೆ, ಭೂಮಿಯ ಬೆಲೆ ಗಗನಕ್ಕೇರಿದೆ. ವಿಶೇಷವಾಗಿ ವರ್ತೂರು ಮತ್ತು ಗುಂಜೂರು ಪ್ರದೇಶಗಳಲ್ಲಿ ಪ್ರತಿ ಎಕರೆಗೆ 15 ಕೋಟಿ ರೂಪಾಯಿಗಳಿಂದ 40 ಕೋಟಿ ರೂಪಾಯಿಗಳವರೆಗೆ ಬೇಡಿಕೆ ಇದೆ. ಈ ಹಿನ್ನೆಲೆಯಲ್ಲಿ, ಬಿಡಿಎ ಹೊಸ ನಿಯಮಗಳ ಅಡಿಯಲ್ಲಿ ಮಾತುಕತೆ ಮೂಲಕ ಭೂಮಿ ಸ್ವಾಧೀನಪಡಿಸಿಕೊಳ್ಳಲು ಪ್ರಾರಂಭಿಸಿದೆ. ಕೆಲವು ಗ್ರಾಮಗಳಲ್ಲಿ ಪ್ರತಿ ಎಕರೆಗೆ 15.6 ಕೋಟಿ ರೂಪಾಯಿಗಳವರೆಗೆ ಪರಿಹಾರ ನೀಡುತ್ತಿದೆ. ಹಲವಾರು ರೈತರು ಈಗಾಗಲೇ ಒಪ್ಪಿಗೆ ನೀಡಿದ್ದಾರೆ. ಇದರಿಂದ ಬಿಡಿಎ ಸುಮಾರು 100 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಮುಂದಾಗಿದೆ.

**ಟೆಂಡರ್ ಕುರಿತು ಸರ್ಕಾರಕ್ಕೆ ಬಿಡಿಎ ಪತ್ರ:** ಯೋಜನೆಯ ಪರಿಷ್ಕೃತ ವಿವರವಾದ ಯೋಜನಾ ವರದಿ ಸಿದ್ಧವಾಗುತ್ತಿದೆ. ಪ್ರಸ್ತುತ ನಿಯಮಗಳ ಪ್ರಕಾರ, ಶೇಕಡಾ 80 ರಷ್ಟು ಭೂ ಸ್ವಾಧೀನ ಪೂರ್ಣಗೊಂಡ ನಂತರವೇ ಟೆಂಡರ್‌ಗಳನ್ನು ಕರೆಯಬಹುದು. ಆದರೆ, ಶೇಕಡಾ 60 ರಷ್ಟು ಭೂ ಸ್ವಾಧೀನ ಪೂರ್ಣಗೊಂಡ ನಂತರ ಟೆಂಡರ್‌ಗಳನ್ನು ಕರೆಯಲು ಅನುಮತಿ ನೀಡಬೇಕೆಂದು ಬಿಡಿಎ ಸರ್ಕಾರಕ್ಕೆ ಪತ್ರ ಬರೆದಿದೆ.

**ನಾಲ್ಕು ಜಿಲ್ಲಾಧಿಕಾರಿಗಳ ನೇಮಕ:** ನಗದು, ನಿವೇಶನಗಳು, ವಾಣಿಜ್ಯ ನಿವೇಶನಗಳು, ವರ್ಗಾವಣೆ ಅಭಿವೃದ್ಧಿ ಹಕ್ಕುಗಳು ಅಥವಾ ಮಹಡಿ ವಿಸ್ತೀರ್ಣ ಅನುಪಾತ ಸೇರಿ ರೈತರಿಗೆ ಐದು ರೀತಿಯ ಪರಿಹಾರ ಆಯ್ಕೆಗಳನ್ನು ನೀಡಲಾಗಿದೆ. ಮಾತುಕತೆ ಮೂಲಕ ನೀಡಲಾಗುವ ನಗದು ಪರಿಹಾರ, ಟಿಡಿಆರ್ ಮತ್ತು ಎಫ್‌ಎಆರ್ ಕುರಿತಾದ ಗ್ರಾಮವಾರು ವಿವರಗಳನ್ನು ಬಿಡಿಎ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಪ್ರಕ್ರಿಯೆಯನ್ನು ತ್ವರಿತಗೊಳಿಸಲು ನಾಲ್ಕು ಜಿಲ್ಲಾಧಿಕಾರಿಗಳನ್ನು ನೇಮಿಸಲಾಗಿದೆ. ರೈತರಿಂದ ಒಪ್ಪಿಗೆ ಪತ್ರಗಳು ಬಂದ ತಕ್ಷಣ ಭೂ ಸ್ವಾಧೀನ ಪ್ರಕ್ರಿಯೆ ಆರಂಭಿಸಲಾಗುತ್ತಿದೆ.

### ರೈತರ ಆಯ್ಕೆ ಏನು?

ಬೆಂಗಳೂರು ಬಿಸಿನೆಸ್ ಕಾರಿಡಾರ್ ಯೋಜನೆ ಅಧ್ಯಕ್ಷ ಎಲ್‌ಕೆ ಅಥೀಕ್ ಮಾತನಾಡಿ, ಹೆಚ್ಚಿನ ಭೂಮಾಲೀಕರು ಪರ್ಯಾಯ ಸಹಾಯಧನ ಪ್ಯಾಕೇಜ್‌ಗೆ ಒಪ್ಪುತ್ತಾರೆ ನಿರೀಕ್ಷಿಸಲಾಗಿದೆ. ಯೋಜನೆಯ ಅಭಿವೃದ್ಧಿ ಪ್ಯಾಕೇಜ್‌ಗಳೊಂದಿಗೆ ಇತರ ಭೂ ಸ್ವಾಧೀನ ಸಮಸ್ಯೆಗಳನ್ನು ಪರಿಹರಿಸಲಾಗುವುದು. ಅನೇಕ ಭೂಮಾಲೀಕರು ಕಾರಿಡಾರ್ ಉದ್ದಕ್ಕೂ ವಾಣಿಜ್ಯ ನಿವೇಶನಗಳನ್ನು 65:35 ರ ಅನುಪಾತದಲ್ಲಿ (ಪ್ರತಿ ಎಕರೆಗೆ 8,385 ಚದರ ಅಡಿ) ಟಿಡಿಆರ್ ಜೊತೆಗೆ ಆಯ್ಕೆ ಮಾಡಿಕೊಳ್ಳುತ್ತಿದ್ದಾರೆ ಎಂದರು.

ಅಂತರಾಳದಿಂದ.. EDITORIAL

# ಮಾನ ಕಳೆದುಕೊಂಡ ಶಾಂತಿ ನೊಬೆಲ್ ಬಹುಮಾನ


ಶಾಂತಿ ನೊಬೆಲ್ ಪ್ರಶಸ್ತಿಯನ್ನು ಪಡೆದ ಜಗತ್ತಿನ 'ಶಾಂತಿ ದೂತರೆಲ್ಲ ಅಶಾಂತಿಯಿಂದ ಕನಲುವಂತೆ ಮಾಡಿದ್ದಾರೆ 2025ರ ಶಾಂತಿ ನೊಬೆಲ್ ಪ್ರಶಸ್ತಿ ವಿಜೇತ ಮರಿಯಾ ಮಚಾದೊ, ಶಾಂತಿ ನೊಬೆಲ್ ಪ್ರಶಸ್ತಿಯ ಕುರಿತಂತೆ ಜಗತ್ತಿಗೆ ಇದ್ದ ಎಲ್ಲಾ ಅನುಮಾನಗಳನ್ನು ನಿಜ ಮಾಡುವಂತೆ ತಮಗೆ ಸಿಕ್ಕಿದ ಗೌರವವನ್ನು ಅವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪಾದತಳಕ್ಕೆ ಅರ್ಪಿಸಿದ್ದಾರೆ. ಈವರೆಗೆ ಈ ಶಾಂತಿ ಪ್ರಶಸ್ತಿ ಗೋಸುಂಬೆಯಂತೆ ಬಣ್ಣ ಬದಲಿಸುತ್ತಿತ್ತು. ಆದರೆ ಈ ಬಾರಿ ಅದು ತನ್ನ ಅಸಲಿ ಬಣ್ಣವನ್ನು ಜಗತ್ತಿಗೆ ಸ್ಪಷ್ಟಪಡಿಸಿದೆ. ನೊಬೆಲ್ ಪ್ರಶಸ್ತಿಗೆ ಇಂತಹದೊಂದು ದಯನೀಯ ಸ್ಥಿತಿ ಎದುರಾಗುತ್ತದೆ ಎಂದಾಗಿದ್ದರೆ ಅಲ್ಫ್ರೆಡ್ ನೊಬೆಲ್ ಖಂಡಿತವಾಗಿಯೂ ತನ್ನ ಸಂಪತ್ತನ್ನು ನೊಬೆಲ್ಗಾಗಿ ಮುಡಿಪಾಗಿಡುತ್ತಿರಲಿಲ್ಲವೇನೋ, ಹಾಗೆ ನೋಡಿದರೆ ಅಲ್ಫ್ರೆಡ್ ತನ್ನ ಜೀವಮಾನದಲ್ಲಿ ಸಂಪತ್ತನ್ನು ಸಂಗ್ರಹಿಸಿದ್ದೇ ಸ್ಫೋಟಕಗಳ ಉತ್ಪಾದನೆಯಿಂದ.

> **ಜಗತ್ತಿನ ಯುದ್ಧವನ್ನು ಇನ್ನಷ್ಟು ಭಯಾನಕವಾಗಿಸಿದ್ದು ಅಲ್ಫ್ರೆಡ್ ಅವರ ಸಂಶೋಧನೆಗಳು. ಅವರ ಡೈನಾಮೈಟ್‌ಗಳು ತಪ್ಪು ಕಾರಣಗಳಿಗಾಗಿಯೇ ಹೆಚ್ಚು ಬಳಕೆಯಾಗುತ್ತಾ ಬಂದಿವೆ ಸ್ಫೋಟಕ ಮತ್ತು ತೈಲ ಕ್ಷೇತ್ರಗಳಿಂದ ಅವರು ಅಪಾರ ದುಡ್ಡನ್ನು ಬಾಚಿಕೊಂಡರು ಅವರ ಮರಣದ ಬಳಿಕ ಅದೇ ದುಡ್ಡು ಜಗತ್ತಿನ ಶಾಂತಿ ನೊಬೆಲ್ ಪ್ರಶಸ್ತಿಯನ್ನು ನೀಡಲು ಬಳಕೆಯಾಗುತ್ತಿರುವುದು ಒಂದು ವ್ಯಂಗ್ಯವೇ ಆಗಿದೆ. ಸ್ಫೋಟಕಗಳು ಮತ್ತು ಶಾಂತಿ ಹೇಗೆ ಜೊತೆಯಾಗಿ ಸಾಗಲಾರದೋ ಅದೇ ರೀತಿಯಲ್ಲಿ ಶಾಂತಿ ನೊಬೆಲ್ ಶಾಂತಿಗೂ ಯಾವುದೇ ಸಂಬಂಧವಿಲ್ಲ ಎನ್ನುವುದನ್ನು ಮರಿಯಾ ಮಹಾದೋ ಅವರು ತನ್ನ ನಿರ್ಧಾರದಿಂದ ಸ್ಪಷ್ಟಪಡಿಸಿದ್ದಾರೆ.**

ನೊಬೆಲ್‌ನ ನಿಜ ಮುಖವನ್ನು ಜಗತ್ತಿನ ಮುಂದೆ ತೆರೆದಿಟ್ಟದ್ದಕ್ಕಾಗಿ ಮರಿಯಾ ಅಭಿನಂದನಾರ್ಹರು. ಜಗತ್ತಿನನಾಯಿಯನ್ನು ಕೊಂದು ಹಾಕುವ ಉದ್ದೇಶವಿದ್ದರೆ ಮೊದಲು ಅದನ್ನು ಹುಚ್ಚುನಾಯಿ ಎಂದು ಘೋಷಿಸಲಾಗುತ್ತದೆ.

ಒಂದು ದೇಶದಲ್ಲಿ ಅಶಾಂತಿಯಿದೆ ಎಂದು ಘೋಷಿಸುವುದಕ್ಕಾಗಿಯೇ ಇತ್ತೀಚಿನ ದಿನಗಳಲ್ಲಿ ಶಾಂತಿ ನೊಬೆಲ್‌ನ್ನು ದುರುಪಯೋಗ ಪಡಿಸಿಕೊಂಡು ಬರಲಾಗುತ್ತಿದೆ. ಅಮೆರಿಕದಂತಹ ಬಲಿಷ್ಠ ದೇಶಗಳ ಪಿತೂರಿಯಿಂದಾಗಿ ಸಣ್ಣ ದೇಶಗಳಲ್ಲಿ ಮೊದಲು ಅರಾಜಕತೆ ಸೃಷ್ಟಿಯಾಗುತ್ತದೆ ಅಮೆರಿಕದ ಹಿತಾಸಕ್ತಿಗೆ ಪೂರಕವಾಗಿರುವ ಸ್ಥಳೀಯರನ್ನು ಗುರುತಿಸಿ ಶಾಂತಿ ಪ್ರಶಸ್ತಿಯನ್ನು ನೀಡಲಾಗುತ್ತದೆ. ಇವೆಲ್ಲವೂ ದುರ್ಬಲ ದೇಶಗಳ ಮೇಲೆ ಬಲಿಷ್ಠ ದೇಶಗಳು ಎರಗುವುದಕ್ಕೆ ಮಾಡಿಕೊಳ್ಳುವ ಸಿದ್ಧತೆಗಳಾಗಿವೆ. ವೆನೆಝುವೆಲಾದಲ್ಲಿ ಅದು ಮತ್ತೊಮ್ಮೆ ಸಾಬೀತಾಗಿದೆ. ತೈಲ ಸಂಪತ್ತನ್ನು ತಮ್ಮಲ್ಲೇ ಉಳಿಸಿಕೊಳ್ಳಲು ವೆನೆಝುವೆಲಾ ಅತ್ಯಂತ ಕಠಿಣ ಕ್ರಮಗಳನ್ನು ಕೈಗೊಳ್ಳುತ್ತಾ ಬಂದಿದೆ. ಈ ಕಾರಣದಿಂದಾಗಿ ಪಶ್ಚಿಮದ ದೇಶಗಳು, ಖಾಸಗಿ ಸಂಸ್ಥೆಗಳಿಗೆ ಅಲ್ಲಿನ ತೈಲ ನಿಕ್ಷೇಪಗಳ ಮೇಲೆ ಅಧಿಕಾರ ಸ್ಥಾಪಿಸಲು ಸಾಧ್ಯವಾಗಿಲ್ಲ. ತೈಲದ ರಕ್ಷಣೆಗಾಗಿ ಹಿಂದಿನ ಅಧ್ಯಕ್ಷ ಹೂಗೋ ಚಾವೆಝ್ ಅವರು ಅತ್ಯಂತ ಕಠಿಣ ನೀತಿಗಳನ್ನು ಜಾರಿಗೊಳಿಸಿದ್ದರು. ಇದು ಅಮೆರಿಕವೂ ಸೇರಿದಂತೆ ಪ್ರಬಲ ದೇಶಗಳಿಗೆ ನುಂಗಲಾರದ ತುತ್ತಾಗಿತ್ತು. ಅಮೆರಿಕಕ್ಕೆ ವೆನೆಜುವೆಲಾ ಸದ್ದು ಹೊಡೆಯುತ್ತಲೇ ಬಂದಿತ್ತು ಎಲ್ಲಿಯವರೆಗೆ ಎಂದರೆ, 2015ರಲ್ಲಿ ನೊಬೆಲ್ ಶಾಂತಿ ಪ್ರಶಸ್ತಿಗೆ ಪರ್ಯಾಯವಾಗಿ ಹೂಗೋ ಚಾವಝ್ ಸ್ಮರಣಾರ್ಥ ಶಾಂತಿ ಪ್ರಶಸ್ತಿಯೊಂದನ್ನು ನಿಕೋಲಸ್ ಮಡುರೋ ಅವರು ಘೋಷಿಸಿದ್ದರು. ಕೊಲಂಬಿಯಾದ ಅಧ್ಯಕ್ಷ ಜುಯಾನ್ ಮ್ಯಾನುವೆಲ್ ಅವರು ನೊಬೆಲ್ ಶಾಂತಿ ಪ್ರಶಸ್ತಿಗೆ ಆಯ್ಕೆಯಾಗಿದ್ದಾಗ, ವೆನೆಝುವೆಲಾ ದೇಶವು ಹೂಗೋ ಚಾವೆಜ್ ಪ್ರಶಸ್ತಿಯನ್ನು ವ್ಲಾದಿಮಿರ್ ಪುಟಿನ್ ಅವರಿಗೆ ನೀಡಿತ್ತು. ವಿಪರ್ಯಾಸವೆಂದರೆ ಅದೇ ಪುಟಿನ್ ಅವರು ಉಕ್ರೇನ್ ವಿರುದ್ಧ ಕ್ಷಿಪಣಿಗಳನ್ನು ಸುರಿಸುತ್ತಿದ್ದಾರೆ ಮತ್ತು ತನಗೆ ಶಾಂತಿ ಪ್ರಶಸ್ತಿಯನ್ನು ನೀಡಿದ ನಿಕೋಲಸ್ ಮದುರೊ ಅವರನ್ನು ಅಮೆರಿಕ ಅಕ್ರಮವಾಗಿ ಬಂಧಿಸಿದಾಗಲೂ ಅದರ ವಿರುದ್ಧ ಮಾತನಾಡುವ ನೈತಿಕತೆಯನ್ನು ಪ್ರದರ್ಶಿಸುತ್ತಿಲ್ಲ. ದುರ್ಬಲ ರಾಜ್ಯಗಳ ಮೇಲೆ ದಾಳಿ ಮಾಡುವ ಹಕ್ಕುಗಳನ್ನು ಅಮೆರಿಕ ನಿಕೋಲಸ್ ಆಡಳಿತದಲ್ಲಿ ವೆನೆಝುವೆಲಾದಲ್ಲಿ ಆರ್ಥಿಕತೆ ಜರ್ಜರಿತವಾಗಿತ್ತು ನಿಜ. ಆ ದೇಶದ ಮೇಲೆ ಹೇರಲಾಗಿದ್ದ ನಿಷೇಧಗಳೂ ಅದಕ್ಕೆ ಕಾರಣವಾಗಿದ್ದವು. ತೈಲ ನಿಕ್ಷೇಪಗಳನ್ನು ಹೊರ ತೆಗೆಯುವ ಆಧುನಿಕ ಸವಲತ್ತುಗಳ ಕೊರತೆಗಳು ಮತ್ತು ಆರ್ಥಿಕ ಕೊರತೆಗಳು ವೆನೆಝುವೆಲಾವನ್ನು ಇನ್ನಷ್ಟು ದುರ್ಬಲಗೊಳಿಸಿದ್ದವು. ಕಚ್ಚಾ ತೈಲದ ಬೆಲೆ ಇಳಿಕೆ ಗಾಯಗಳ ಮೇಲೆ ಎಳೆದ ಬರೆಯಾಗಿತ್ತು. ಇಂತಹ ಸಂದರ್ಭದಲ್ಲಿ ಸಹಜವಾಗಿಯೇ ದೇಶದಲ್ಲಿ ಆರ್ಥಿಕತೆಗಾಗಿ ಅಕ್ರಮ ದಾರಿಗಳು ತೆರೆದುಕೊಳ್ಳುತ್ತವೆ. ಡ್ರಗ್ಸ್ ಮಾಫಿಯಾಗಳು ಈ ಸಂದರ್ಭವನ್ನು ಬಳಸಿಕೊಂಡವು. ಸರಕಾರ ಅದರ ವಿರುದ್ಧ ಕಠಿಣ ಕ್ರಮವನ್ನು ತೆಗೆದುಕೊಳ್ಳಲಿಲ್ಲ ಹೂಗೋ ಚಾವೆಝುಗಿದ್ದ ಧೈರ್ಯ, ದೂರದೃಷ್ಟಿ ನಿಕೋಲಸ್ ಅವರಿಗಿರಲಿಲ್ಲ. ನಿಕೋಲಸ್ ಮದುರೋ ಅವರ ಆಡಳಿತದ ವಿರುದ್ಧ ದೇಶದೊಳಗೆ ಜಾಗೃತಿ ಮೂಡಿಸಿ ಜನಾಂದೋಲನವನ್ನು ಹುಟ್ಟುಹಾಕುವ ಅವಕಾಶ ವಿರೋಧ ಪಕ್ಷದ ನಾಯಕಿ ಮರಿಯಾ ಮಚಾದೋ ಅವರಿಗಿತ್ತು. ಅದರೆ ಅವರು ಹೂಗೋ ಜಾವೆಝ್ ಕಾಲದಿಂದಲೂ, ಅಮೆರಿಕದ ಸೂತ್ರದ ಗೊಂಬೆಯಾಗಿ ಬಳಕೆಯಾದರು.

ಖಾಸಗೀಕರಣ, ಉದಾರೀಕರಣವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ವೆನೆಯುವೆಲಾವನ್ನು ಮೇಲೆತ್ತಲು ಸಾಧ್ಯ ಎಂದು ಅವರು ನಂಬಿಕೊಂಡು ಬಂದಿದ್ದರು. ಅಷ್ಟೇ ಅಲ್ಲ ಬಹಿರಂಗವಾಗಿ ಅಮೆರಿಕದ ಸೇನೆಯ ನೆರವನ್ನು ಅಪೇಕ್ಷಿಸಿದರು. ಇಡೀ ಜಗತ್ತು ನೋಡು ನೋಡುತ್ತಿದ್ದಂತೆಯೇ ಅಮೆರಿಕ ವೆನೆಝುವೆಲಾದ ಮೇಲೆ ಎರಗಿ, ಅಲ್ಲಿನ ಅಧ್ಯಕ್ಷರನ್ನು ಬಂಧಿಸಿದಾಗಲಾದರೂ ತನ್ನ ನಿಲುವಿನಿಂದ ಮರಿಯಾ ಅವರು ಹಿಂದೆ ಸರಿಯಬಹುದಿತ್ತು. ಆದರೆ ಇದೀಗ ಅಮೆರಿಕದ ಕೃತ್ಯವನ್ನು ಬಹಿರಂಗವಾಗಿ ಸಮರ್ಥಿಸುವ ಭಾಗವಾಗಿ ತನಗೆ ಸಿಕ್ಕಿದ ನೊಬೆಲ್ ಪ್ರಶಸ್ತಿಯನ್ನು ಡೊನಾಲ್ಡ್ ಟ್ರಂಪ್‌ಗೆ ಒಪ್ಪಿಸಿ ನೊಬೆಲ್ ಪ್ರಶಸ್ತಿಯನ್ನು ನಗೆಪಾಟಲಿಗೀಡು ಮಾಡಿದ್ದಾರೆ. ಇದರ ಜೊತೆ ಜೊತೆಗೇ ಮರಿಯಾ ಮಚಾದೊ ಅವರು ವೆನೆಝುವೆಲಾದಲ್ಲಿ ಪ್ರಜಾಸತ್ತೆಗಾಗಿ ನಡೆಸಿದ ಹೋರಾಟ ಸಂಪೂರ್ಣ ಅರ್ಥಕಳೆದುಕೊಂಡಿದೆ. ಸ್ವತಃ ವೆನೆಜುವೆಲಾ ಜನರ ಪಾಲಿಗೇ ಅವರು ಅನ್ಯರಾಗಿದ್ದಾರೆ.



## ರಾಮಾಯಣ

ಶ್ರೀ ರಾಮನು ವಾಲಿಯ ಮೇಲೆ ಬಾಣವನ್ನು ಪ್ರಯೋಗಿಸಿದ್ದು

• ಹಿಂದಿನ ಸಂಚಿಕೆಯಿಂದ

### 120 ನೆಯ ಅಧ್ಯಾಯ

ಪರ್ವತವು ಸಮಸ್ತ ಗೈರಿಕಾದಿ ಧಾತುಗಳಿಗೂ ಸಮುದ್ರವು ಸಮಸ್ತ ರತ್ನಗಳಿಗೂ ಆಧಾರವಾದಂತೆ ಆತನು ಸಮಸ್ತ ಸದ್ಗುಣಗಳಿಗೂ ಆಧಾರವಾದವನಂತೆ. ಆದಕಾರಣ ಮಹಾತ್ಮನಾದ ಶ್ರೀರಾಮನೊಡನೆ ಯುದ್ಧವನ್ನು ಮಾಡುವುದು ನಿನಗುಚಿತವಲ್ಲ. ಪ್ರಾಣನಾಥ, ಶ್ರೀರಾಮನೊಡನೆ ವಿರೋಧಮಾಡುವ ಬುದ್ಧಿಯನ್ನು ಬಿಟ್ಟು ನನ್ನ ಮಾತನ್ನು ಕೇಳಿ ಹಿತವೆಂದು ವಿಚಾರಿಸು.

ಸುಗ್ರೀವನನ್ನು ಕರೆದು ಯುವರಾಜ ಪಟ್ಟವನ್ನು ಕಟ್ಟು. ನಿನ್ನ ತಮ್ಮನಾದ ಸುಗ್ರೀವನೊಡನೆ ಹಗೆತನವನ್ನು ಬೆಳಸಬೇಡ. ನಿನಗೆ ಶ್ರೀರಾಮನೊಡನೆ ಸ್ನೇಹಮಾಡಿಕೊಂಡಿರುವುದೇ ಯುಕ್ತ. ಸುಗ್ರೀವನೊಡನೆ ವೈರವನ್ನು ಬಿಟ್ಟು ಆತನನ್ನು ಸನ್ಮಾನಿಸು ಆತನಲ್ಲಿ ಪ್ರೀತಿಯನ್ನು ತೋರಿಸುವುದೇ ನಿನಗೆ ಯೋಗ್ಯ. ಸುಗ್ರೀವನು ಎಲ್ಲಿದ್ದರೂ ನಿನಗೆ ಹಿತನಾದ ಬಂಧುವೇ ಸರಿ. ಆತನಿಗಿಂತ ನಿನಗೆ ಶ್ರೇಷ್ಠ ಬಂಧುಗಳಿನ್ನಾರಿದ್ದಾರೆ? ನೀನು ಆತನಿಗೆ ಉಚಿತವಾದ ಮರ್ಯಾದೆಯಿಂದ ಸತ್ಕಾರವನ್ನು ಮಾಡಿ ನಿನ್ನಲ್ಲಿ ವಿಶ್ವಾಸವು ಹುಟ್ಟುವಂತೆ ಮಾಡಿಕೊ. ಆತನು ನಿನ್ನ ಮೇಲಿನ ವೈರವನ್ನು ಬಿಟ್ಟು ನಿನ್ನ ಸಮೀಪದಲ್ಲಿರಲಿ, ನಿನ್ನ ತಮ್ಮನಾದ ಸುಗ್ರೀವನೊಡನೆ ಸ್ನೇಹವನ್ನು ಬೆಳಸಿಕೊಂಡಿರುವುದಕ್ಕಿಂತ ನಿನಗೆ ಮತ್ತೊಂದು ಹೆಚ್ಚಿನ ಕಾರವಿಲ್ಲ. ನಿನ್ನ ಮನಸಿನಲ್ಲಿ ನಾನು ನಿನಗೆ ಹಿತಳಾದವಳೆಂದೆಣಿಸಿರುವ ಪಕ್ಷದಲ್ಲಿ ನಿನಗೆ ನನ್ನಲ್ಲಿ ಪ್ರೀತಿಯಿರುವ ಪಕ್ಷದಲ್ಲಿ ನನ್ನ ಮಾತನ್ನು ಕೇಳು. ನಾನು ನಿನಗೆ ಕೈ ಮುಗಿದು ಬೇಡಿಕೊಳ್ಳುವೆನು. ನಾನು ಹೇಳಿದ ಮಾತನ್ನು ಹಿತವೆಂದು ನಂಬಿ ಈ ರೋಷವನ್ನು ಬಿಡು. ಯಾವ ಪ್ರಕಾರದಲ್ಲಾದರೂ ಶ್ರೀರಾಮನೊಡನೆ ವಿರೋಧವನ್ನು ಮಾಡಿಕೊಳ್ಳುವುದು ನಿನಗೆ ಯೋಗ್ಯವಲ್ಲ ಎಂದು ಅನೇಕ ನೀತಿವಚನಗಳನ್ನು ನುಡಿದಳು.

**ಶ್ರೀ ರಾಮನು ವಾಲಿಯ ಮೇಲೆ ಬಾಣವನ್ನು ಪ್ರಯೋಗಿಸಿದ್ದು:** ಹೀಗೆ ಹಿತೋಪದೇಶವನ್ನು ಹೇಳುತ್ತಿದ್ದ ತಾರಾದೇವಿಯನ್ನು ಗದರಿಸಿವಾಲಿಯು ಎಲೇ ತಾರೇ, ಗರ್ಜಿಸುತ್ತಿರುವ ನನ್ನ ಶತ್ರುವಾದ ಸುಗ್ರೀವನ ಮೇಲಿರುವ ಕೋಪವನ್ನು ತಡೆಯಲಾರೆನು. ಯುದ್ಧರಂಗದಲ್ಲಿ ಹಿಮ್ಮೆಟ್ಟದೆ ಯುದ್ಧವನ್ನು ಮಾಡುವ ಪರಾಕ್ರಮಿಗಳಿಗೆ ಶತ್ರುಗಳು ಬೊಬ್ಬಿಡುವ ಧ್ವನಿಯನ್ನು ಕೇಳುವುದು ಅವಮಾನಕರವಾದದ್ದು. ಹಾಗಿರುವಲ್ಲಿ ಸುಗ್ರೀವನ ಕೋಲಾಹಲ ಧ್ವನಿಯನ್ನು ಹೇಗೆ ತಾನೆ ಸಹಿಸಿಕೊಂಡಿರಲಿ ? ಶತ್ರುಗಳ ಆರ್ದ್ದರಣೆಯನ್ನು ಸಹಿಸುವುದು ಪರಾಕ್ರಮಿ ಗಳಿಗೆ ಮರಣಾವಸ್ಥೆಯಾಗಿ ತೋರುವುದು. ಸುಗ್ರೀವನು ನನ್ನೊಡನೆ ಯುದ್ಧವನ್ನು ಮಾಡ ಬೇಕೆಂದು ಆರ್ಭಟಿಸಿ ಕೂಗುವ ಧ್ವನಿಯನ್ನು ನಾನು ಸಹಿಸಲಾರೆನು, ತಾರಾದೇವಿ, ನೀನು ಶ್ರೀರಾಮನೊಡನೆ ಹಗೆತನವು ಬೇಡವೆಂದು ಹೇಳಿದರೂ ಕೇಳದೆ ನಾನು ಹೋಗುತ್ತಿದ್ದೇನೆಂದು ಕೋಪಿಸಬೇಡ. ಶ್ರೀರಾಮನು ಧರ್ಮಿಷ್ಟ, ಕೃತಜ್ಞ, ಅಂಥವನು ನನ್ನಲ್ಲಿ ಪಾಪಬುದ್ಧಿಯನ್ನೆಣಿಸನು. ನೀನು ಅಂಜಬೇಡ. ಈ ಸ್ತ್ರೀಯರನ್ನು ಕರೆದುಕೊಂಡು ಹಿಂದಿರುಗು ನೀನು ಹೇಳಿದ ಮಾತು ಒಳ್ಳೆಯದಾಯಿತು.

ಮುಂದುವರಿಯುವುದು...

# ಬಾಂಗ್ಲಾದೇಶದಿಂದ ಭಾರತಕ್ಕೆ ಬರುತ್ತಿರುವ ನುಸಲುಕೋರರು

☛ ವಿಶ್ವಾಸ್.ಡಿ.ಗೌಡ





ಭಾರತ-ಬಾಂಗ್ಲಾದೇಶ ಗಡಿ ದಕ್ಷಿಣ ಏಷ್ಯಾದ ಅತಿ ಉದ್ದದ ಸಂಕೀರ್ಣ ಗಡಿಗಳಲ್ಲಿ ಒಂದಾಗಿದೆ. ಈ ಗಡಿಯ ಮೂಲಕ ಕಾನೂನು ಬಾಹಿರವಾಗಿ ಜನರು ಪ್ರವೇಶಿಸುವ ವಿಚಾರವು ಕಳೆದ ಹಲವು ದಶಕಗಳಿಂದ ರಾಜಕೀಯ, ಸಾಮಾಜಿಕ ಹಾಗೂ ಭದ್ರತಾ ಚರ್ಚೆಗಳ ಕೇಂದ್ರಬಿಂದುವಾಗಿದೆ. ಭಾರತ ಮತ್ತು ಬಾಂಗ್ಲಾದೇಶ ನಡುವಿನ ಭೌಗೋಳಿಕ ಸಮೀಪತೆ, ನದಿಗಳು, ಕಾಡುಗಳು ಮತ್ತು ಜನಸಾಂದ್ರತೆ ಈ ಸಮಸ್ಯೆಯನ್ನು ಇನ್ನಷ್ಟು ಸಂಕೀರ್ಣಗೊಳಿಸುತ್ತವೆ.

ಬಾಂಗ್ಲಾದೇಶದಿಂದ ಭಾರತಕ್ಕೆ ನುಸಲುಕೋರರು ಬರಲು ಹಲವು ಕಾರಣಗಳಿವೆ. ಪ್ರಮುಖವಾಗಿ ಆರ್ಥಿಕ ಅಸಮಾನತೆ, ಉದ್ಯೋಗಾವಕಾಶಗಳ ಕೊರತೆ, ಬಡತನ, ಹವಾಮಾನ ಬದಲಾವಣೆಗಳಿಂದ ಉಂಟಾಗುವ ಪ್ರವಾಹ ಮತ್ತು ಕೃಷಿ ನಷ್ಟ ಇವುಗಳನ್ನು ಉಲ್ಲೇಖಿಸಬಹುದು. ಕೆಲವು ಸಂದರ್ಭಗಳಲ್ಲಿ ಧಾರ್ಮಿಕ ಅಥವಾ ಸಾಮಾಜಿಕ ಅಸ್ಥಿರತೆಯೂ ಜನರನ್ನು ವಲಸೆ ಹೋಗುವಂತೆ ಮಾಡುತ್ತದೆ. ಗಡಿ ಹತ್ತಿರದ ಪ್ರದೇಶಗಳಲ್ಲಿ ಕುಟುಂಬ ಸಂಬಂಧಗಳು ಮತ್ತು ಭಾಷಾ-ಸಾಂಸ್ಕೃತಿಕ ಸಮೀಪತೆಯೂ ಅನಧಿಕೃತ ಪ್ರವೇಶಕ್ಕೆ ಕಾರಣವಾಗುತ್ತದೆ. ನುಸಲುಕೋರರ ಆಗಮನದಿಂದ ಸ್ಥಳೀಯ ಸಮಾಜದ ಮೇಲೆ ವಿವಿಧ ರೀತಿಯ ಪರಿಣಾಮಗಳು ಕಾಣಿಸಿಕೊಳ್ಳುತ್ತವೆ. ಒಂದು ಕಡೆ ಅಗ್ಗದ ಕಾರ್ಮಿಕ ಶಕ್ತಿಯಿಂದ ಕೆಲವೊಂದು ಉದ್ಯಮಗಳಿಗೆ ಲಾಭವಾಗಬಹುದು. ಆದರೆ ಮತ್ತೊಂದು ಕಡೆ ಸ್ಥಳೀಯ ಜನರ ಉದ್ಯೋಗಾವಕಾಶಗಳ ಮೇಲೆ ಒತ್ತಡ, ಕೂಲಿ ದರಗಳ ಇಳಿಕೆ, ಸಾರ್ವಜನಿಕ ಸೇವೆಗಳ ಮೇಲೆ ಹೆಚ್ಚುವರಿ ಭಾರ ಮತ್ತು ಸಾಮಾಜಿಕ ಉದ್ವಿಗ್ನತೆಗಳು ಉಂಟಾಗುತ್ತವೆ. ಕೆಲ ಪ್ರದೇಶಗಳಲ್ಲಿ ಜನಸಾಂಖ್ಯಿಕ ಸಮತೋಲನ ಬದಲಾಗುತ್ತಿರುವ ಬಗ್ಗೆ ಆತಂಕ ವ್ಯಕ್ತವಾಗುತ್ತದೆ.

ಭದ್ರತಾ ದೃಷ್ಟಿಯಿಂದಲೂ ಈ ವಿಷಯ ಮಹತ್ವದ್ದಾಗಿದೆ. ಕಾನೂನುಬಾಹಿರ ವಲಸೆಯ ಜೊತೆಗೆ ಕಳ್ಳಸಾಗಣೆ, ಮಾನವ ಸಾಗಣೆ, ನಕಲಿ ದಾಖಲೆಗಳ ಬಳಕೆ ಮುಂತಾದ ಅಪರಾಧ ಚಟುವಟಿಕೆಗಳ ಭೀತಿಯೂ ಇದೆ. ಆದ್ದರಿಂದ ಗಡಿ ನಿರ್ವಹಣೆ, ನಿಗಾ ವ್ಯವಸ್ಥೆಗಳು ಮತ್ತು ಗುಪ್ತಚರ ಸಮನ್ವಯವನ್ನು ಬಲಪಡಿಸುವ ಅಗತ್ಯವಿದೆ. ಗಡಿಯಲ್ಲಿನ ನದಿಗಳ ಹರಿವು ಮತ್ತು ಭೂಪ್ರಕೃತಿ ಬದಲಾಗುತ್ತಿರುವುದರಿಂದ ನಿಗಾ ಕಾರ್ಯ ಮತ್ತಷ್ಟು ಸವಾಲಿನಾಗಿದೆ.

ಭಾರತ ಸರ್ಕಾರ ಈ ಸಮಸ್ಯೆಯನ್ನು ಎದುರಿಸಲು ಹಲವು ಕ್ರಮಗಳನ್ನು ಕೈಗೊಂಡಿದೆ. ಗಡಿ ಬೇಲಿ ನಿರ್ಮಾಣ, ತಂತ್ರಜ್ಞಾನ ಆಧಾರಿತ ನಿಗಾ, ಗಸ್ತು ಹೆಚ್ಚಳ, ಹಾಗೂ ಕಾನೂನು ಪ್ರಕ್ರಿಯೆಗಳ ಮೂಲಕ ದಾಖಲೆ ಪರಿಶೀಲನೆ ಇವುಗಳಲ್ಲಿ ಪ್ರಮುಖವಾಗಿವೆ. ಜೊತೆಗೆ ಬಾಂಗ್ಲಾದೇಶದೊಂದಿಗೆ ರಾಜತಾಂತ್ರಿಕ ಮಾತುಕತೆಗಳ ಮೂಲಕ ಸಹಕಾರವನ್ನು ವೃದ್ಧಿಸಲು ಪ್ರಯತ್ನಿಸಲಾಗಿದೆ. ಎರಡು ದೇಶಗಳ ನಡುವಿನ ಸಂಯುಕ್ತ ಗಡಿ ಸಭೆಗಳು ಮತ್ತು ಮಾಹಿತಿಯ ವಿನಿಮಯ ಈ ದಿಕ್ಕಿನಲ್ಲಿ ಸಹಾಯಕವಾಗಿವೆ. ಆದರೆ ಕೇವಲ ಭದ್ರತಾ ಕ್ರಮಗಳು ಮಾತ್ರ ಶಾಶ್ವತ ಪರಿಹಾರವಾಗುವುದಿಲ್ಲ ಎಂಬ ಅಭಿಪ್ರಾಯವೂ ಇದೆ. ವಲಸೆಯ ಮೂಲ ಕಾರಣಗಳನ್ನು ನಿವಾರಿಸುವುದು ಅತ್ಯಗತ್ಯ.

**ಒಂದು ಸಮಗ್ರ ಅವಲೋಕನ**

ಬಾಂಗ್ಲಾದೇಶದಲ್ಲಿ ಆರ್ಥಿಕ ಅಭಿವೃದ್ಧಿ, ಉದ್ಯೋಗ ಸೃಷ್ಟಿ, ಹವಾಮಾನ ಹೊಂದಾಣಿಕೆ ಯೋಜನೆಗಳು ಮತ್ತು ಸಾಮಾಜಿಕ ಸ್ಥಿರತೆ ಬಲಪಡಿಸಿದರೆ ಅನಧಿಕೃತ ವಲಸೆ ಒತ್ತಡ ಕಡಿಮೆಯಾಗಬಹುದು. ಅಂತಾರಾಷ್ಟ್ರೀಯ ಸಹಕಾರ ಮತ್ತು ಪ್ರಾದೇಶಿಕ ಅಭಿವೃದ್ಧಿ ಕಾರ್ಯಕ್ರಮಗಳು ಇಲ್ಲಿ ಪ್ರಮುಖ ಪಾತ್ರವಹಿಸಬಹುದು. ಮಾನವೀಯ ಆಯಾಮವನ್ನೂ ಮರೆತರೆ ಆಗದು.

ಗಡಿದಾಟುವವರು ಎಲ್ಲರೂ ಅಪರಾಧಿಗಳು ಅಲ್ಲ; ಹಲವರು ಬದುಕು ಸಾಗಿಸಲು ಪರದಾಡುವ ಸಾಮಾನ್ಯ ಜನರು. ಆದ್ದರಿಂದ ಕಾನೂನು ಅನುಷ್ಠಾನ ಮತ್ತು ಮಾನವ ಹಕ್ಕುಗಳ ನಡುವಿನ ಸಮತೋಲನ ಅಗತ್ಯ. ಕಾನೂನು ಬಾಹಿರ ವಲಸೆಯನ್ನು ನಿಯಂತ್ರಿಸುವಾಗ ಮಾನವೀಯ ಮೌಲ್ಯಗಳು ಮತ್ತು ಸಂವಿಧಾನಾತ್ಮಕ ತತ್ವಗಳನ್ನು ಗೌರವಿಸುವುದು ಮುಖ್ಯ. ಒಟ್ಟಿನಲ್ಲಿ ಹಾಗೂ ಬಾಂಗ್ಲಾದೇಶದಿಂದ ಭಾರತಕ್ಕೆ ಬರುತ್ತಿರುವ ನುಸಲುಕೋರರ ವಿಚಾರ ಬಹುಆಯಾಮದ ಸಮಸ್ಯೆಯಾಗಿದೆ.

ಭದ್ರತೆ, ಆರ್ಥಿಕತೆ, ರಾಜತಂತ್ರ ಮತ್ತು ಮಾನವೀಯತೆ ಈ ಎಲ್ಲಾ ಆಯಾಮಗಳನ್ನು ಸಮನ್ವಯಗೊಳಿಸಿದ ಸಮಗ್ರ ನೀತಿಯೇ ದೀರ್ಘಕಾಲಿಕ ಪರಿಹಾರಕ್ಕೆ ದಾರಿ ಮಾಡಿಕೊಡಬಲ್ಲದು.

ಸಮಸ್ಯೆಯನ್ನು ರಾಜಕೀಯ ಘೋಷಣೆಗಳಷ್ಟರಲ್ಲಿ ಸೀಮಿತಗೊಳಿಸದೆ, ವಾಸ್ತವಾಧಾರಿತ, ಸಹಕಾರಮಯ ಮತ್ತು ಮಾನವ ಕೇಂದ್ರಿತ ದೃಷ್ಟಿಕೋನದಿಂದ ಎದುರಿಸುವುದು ಕಾಲದ ಅಗತ್ಯವಾಗಿದೆ.



# ಥೈರಾಯ್ಡ್ ಸಮಸ್ಯೆ ಇದ್ರೆ ಹೃದಯದ ಕಾಯಿಲೆಗೆ ಕಾರಣವಾಗುತ್ತಾ? ಡಾಕ್ಟರ್ ಏನಂತಾರೆ

> **ಹೃದಯ ಕಾಯಿಲೆ ಇರುವ ಜನರಿಗೆ ನಿಯಮಿತ ಆರೋಗ್ಯ ತಪಾಸಣೆ ಅಗತ್ಯವಾಗಬಹುದು, ಏಕೆಂದರೆ ಆಧಾರವಾಗಿರುವ ಥೈರಾಯ್ಡ್ ಸ್ಥಿತಿಯು 1ಅಂಶವಾಗಿರಬಹುದು. ಸಂಸ್ಕರಿಸದ ಥೈರಾಯ್ಡ್ ಸಮಸ್ಯೆಗಳು ಹೃದ್ರೋಗಕ್ಕೆ ಗಮನಾರ್ಹ ಮತ್ತು ಬದಲಾಯಿಸಬಹುದಾದ ಅಪಾಯಕಾರಿ ಅಂಶವಾಗಿದೆ. ಜಾಗೃತಿಯನ್ನು ಹೆಚ್ಚಿಸುವುದು, ಹೆಚ್ಚಿನ ಅಪಾಯದ ಗುಂಪುಗಳಲ್ಲಿ ನಿಯಮಿತ ತಪಾಸಣೆಗಳನ್ನು ಮಾಡುವುದು, ಸಕಾಲಿಕ ಚಿಕಿತ್ಸೆಯನ್ನು ಒದಗಿಸುವುದು ಅನಗತ್ಯ ಹೃದಯ ತೊಡಕುಗಳನ್ನು ತಡೆಯಲು ಸಹಾಯ ಮಾಡುತ್ತದೆ.**

ಥೈರಾಯ್ಡ್ ಸಮಸ್ಯೆಯನ್ನು ಆರಂಭದಲ್ಲೇ ಚಿಕಿತ್ಸೆ ನೀಡಿ ಕಂಟ್ರೋಲ್‌ನಲ್ಲಿಡದಿದ್ದರೆ ಅದು ಕ್ರಮೇಣ ಹೃದಯದ ಕಾಯಿಲೆಗೆ ಕಾರಣವಾಗಬಹುದು ಎನ್ನುತ್ತಾರೆ ವೈದ್ಯರು. ಮಹಿಳೆಯರು, ವೃದ್ಧರು, ಥೈರಾಯ್ಡ್ ಸಮಸ್ಯೆಗಳ ಕುಟುಂಬದ ಇತಿಹಾಸ ಹೊಂದಿರುವ ಜನರು ಮತ್ತು ತೂಕದಲ್ಲಿ ಬದಲಾವಣೆಗಳು, ಆಯಾಸ, ಹೃದಯ ಬಡಿತ ಅಥವಾ ಅಸಹಜ ಕೊಲೆಸ್ಟ್ರಾಲ್ ಇರುವವರು ಸೇರಿದಂತೆ ಕೆಲವು ಗುಂಪುಗಳು ಹೆಚ್ಚುವರಿ ಗಮನ ನೀಡಬೇಕು ಎಂದು ತಜ್ಞರು ಹೇಳುತ್ತಾರೆ. ಥೈರಾಯ್ಡ್ ಆರೋಗ್ಯದ ಬಗ್ಗೆ ನಮಗೆ ಹೆಚ್ಚು ಮುಕ್ತ ಸಂಭಾಷಣೆಗಳು ಬೇಕಾಗುತ್ತವೆ. ಭಯವಲ್ಲ, ಕೇವಲ ಮೂಲಭೂತ ತಿಳುವಳಿಕೆ ಮಾತ್ರ. ಏಕೆಂದರೆ ಜನರು ಚಿಹ್ನೆಗಳನ್ನು ಮೊದಲೇ ಗುರುತಿಸಿದಾಗ, ಅವರು ಬೇಗನೆ ಸಹಾಯ ಪಡೆಯಬಹುದು ಮತ್ತು ದೀರ್ಘಕಾಲೀನ ತೊಡಕುಗಳನ್ನು ತಪ್ಪಿಸಬಹುದು.

**ಹೃದಯದ ಮೇಲೂ ಪರಿಣಾಮ:** ಥೈರಾಯ್ಡ್ ಸಮಸ್ಯೆಗಳು, ಹೃದಯದ ಮೇಲೂ ಪರಿಣಾಮ ಬೀರುತ್ತದೆ ಎನ್ನುವುದು ನಿಮಗೆ ಗೊತ್ತಾ? ಹೃದಯ ಬಡಿತ, ರಕ್ತದೊತ್ತಡ, ನಮ್ಮ ದೇಹವು ಕೊಬ್ಬನ್ನು ಹೇಗೆ ಸಂಸ್ಕರಿಸುತ್ತದೆ ಮತ್ತು ರಕ್ತನಾಳಗಳ ಆರೋಗ್ಯವನ್ನು ನಿಯಂತ್ರಿಸಲು ಥೈರಾಯ್ಡ್ ಹಾರ್ಮೋನುಗಳು ನಿರ್ಣಾಯಕವಾಗಿವೆ ಎಂದು ಸರ್ ಎಚ್.ಎನ್. ರಿಲಯನ್ಸ್ ಫೌಂಡೇಶನ್ ಆಸ್ಪತ್ರೆಯ ಅಂತಃಸ್ರಾವಶಾಸ್ತ್ರ ಮತ್ತು ಮಧುಮೇಹಶಾಸ್ತ್ರದ ನಿರ್ದೇಶಕರಾದ ಡಾ. ಡೇವಿಡ್ ಚಾಂಡಿ ಹೇಳುತ್ತಾರೆ.

**ನಿಯಮಿತ ಆರೋಗ್ಯ ತಪಾಸಣೆ**

**ಅತಿಯಾಗಿ ಕಾರ್ಯನಿರ್ವಹಿಸುವ ಥೈರಾಯ್ಡ್ ಪರಿಸ್ಥಿತಿಗಳು ಹೃದಯದ ಮೇಲೆ ಪರಿಣಾಮ ಬೀರುತ್ತವೆ:** ಥೈರಾಯ್ಡ್ ಅಸ್ವಸ್ಥತೆಗಳು ರೋಗನಿರ್ಣಯ ಮಾಡದಿದ್ದರೆ ಅಥವಾ ಚಿಕಿತ್ಸೆ ನೀಡದಿದ್ದರೆ, ಅವು ಹೃದ್ರೋಗ ಮತ್ತು ದೀರ್ಘಕಾಲೀನ ಹೃದಯ ಸಮಸ್ಯೆಗಳ ಅಪಾಯವನ್ನು ಹೆಚ್ಚಿಸಬಹುದು ಎಂದು ಡಾ. ಡೇವಿಡ್ ವಿವರಿಸುತ್ತಾರೆ. ನಿಷ್ಕ್ರಿಯ ಮತ್ತು ಅತಿಯಾಗಿ ಕಾರ್ಯನಿರ್ವಹಿಸುವ ಥೈರಾಯ್ಡ್‌ಗಳು ಎರಡೂ ಗಂಭೀರ ಹೃದಯ ಸಮಸ್ಯೆಗಳಿಗೆ ಕಾರಣವಾಗಬಹುದು.

ನಿಷ್ಕ್ರಿಯ ಥೈರಾಯ್ಡ್‌ನಲ್ಲಿ (ಹೈಪೋಥೈರಾಯ್ಡಿಸಮ್), ಕಡಿಮೆ ಹಾರ್ಮೋನ್ ಮಟ್ಟಗಳು ಹೃದಯ ಬಡಿತವನ್ನು ನಿಧಾನಗೊಳಿಸುತ್ತವೆ, ಹೃದಯದ ಬಲವನ್ನು ಕಡಿಮೆ ಮಾಡುತ್ತವೆ ಮತ್ತು ರಕ್ತನಾಳಗಳ ಪ್ರತಿರೋಧವನ್ನು ಹೆಚ್ಚಿಸುತ್ತವೆ. ಈ ಸ್ಥಿತಿಯು ಅಸಹಜ ರಕ್ತದ ಲಿಪಿಡ್ ಮಟ್ಟಗಳಿಗೆ, ವಿಶೇಷವಾಗಿ ಹೆಚ್ಚಿನ ಕೊಲೆಸ್ಟ್ರಾಲ್ ಮತ್ತು ಟ್ರೈಗ್ಲಿಸರೈಡ್‌ಗಳಿಗೆ ನಿಕಟ ಸಂಬಂಧ ಹೊಂದಿದೆ, ಇದು ಅಪಧಮನಿ ಗಟ್ಟಿಯಾಗುವುದನ್ನು ವೇಗಗೊಳಿಸುತ್ತದೆ.

**ಹೈಪೋಥೈರಾಯ್ಡಿಸಮ್‌ನಿಂದ ಯಾವೆಲ್ಲಾ ಸಮಸ್ಯೆಗಳಾಗುತ್ತೆ:** ಹೈಪೋಥೈರಾಯ್ಡಿಸಮ್ ವಿಶೇಷವಾಗಿ ವಯಸ್ಸಾದವರಲ್ಲಿ ಪರಿಧಮನಿಯ ಕಾಯಿಲೆ, ಹೆಚ್ಚಿನ ಡಯಾಸ್ಟೊಲಿಕ್ ರಕ್ತದೊತ್ತಡ, ಹೃದಯ ವೈಫಲ್ಯದ ಹೆಚ್ಚಿನ ಅಪಾಯಕ್ಕೆ ಸಂಬಂಧಿಸಿವೆ. ಇದಕ್ಕೆ ವಿರುದ್ಧವಾಗಿ, ಅತಿಯಾದ ಥೈರಾಯ್ಡ್ ಹೃದಯವನ್ನು ತುಂಬಾ ಕಠಿಣವಾಗಿ ಕೆಲಸ ಮಾಡುತ್ತದೆ. ಹೆಚ್ಚಿನ ಥೈರಾಯ್ಡ್ ಹಾರ್ಮೋನುಗಳು ಹೃದಯ ಬಡಿತವನ್ನು ಹೆಚ್ಚಿಸುತ್ತವೆ, ಹೃದಯದ ಆಮ್ಲಜನಕದ ಅಗತ್ಯಗಳನ್ನು ಹೆಚ್ಚಿಸುತ್ತವೆ ಮತ್ತು ರಕ್ತದ ಹರಿವನ್ನು ಹೆಚ್ಚಿಸುತ್ತವೆ.

**ಲಕ್ಷಣಗಳು ಮತ್ತು ಚಿಕಿತ್ಸಾ ಆಯ್ಕೆಗಳು:** ಜನರು ಥೈರಾಯ್ಡ್‌ನ ಯಾವುದೇ ಸಾಮಾನ್ಯ ಲಕ್ಷಣಗಳಿಗೆ ಗಮನಹರಿಸಬೇಕು ಮತ್ತು ವೈದ್ಯಕೀಯ ಸಹಾಯವನ್ನು ಪಡೆಯಬೇಕೆಂದು ಒತ್ತಾಯಿಸುತ್ತಾರೆ. ಇದು ಹೃದಯ ಬಡಿತ, ಅನಿಯಮಿತ ಹೃದಯ ಬಡಿತ, ಎದೆ ನೋವು ಮತ್ತು ತೀವ್ರತರವಾದ ಪ್ರಕರಣಗಳಲ್ಲಿ ಹೃದಯ ವೈಫಲ್ಯದಂತಹ ಲಕ್ಷಣಗಳಿಗೆ ಕಾರಣವಾಗಬಹುದು. ಚಿಕಿತ್ಸೆ ನೀಡದ ಹೈಪರ್ ಥೈರಾಯ್ಡಿಸಮ್ ಹೊಂದಿರುವ ವಯಸ್ಸಾದ ರೋಗಿಗಳಲ್ಲಿ ಅನಿಯಮಿತ ಹೃದಯ ಬಡಿತವು ತುಂಬಾ ಸಾಮಾನ್ಯವಾಗಿದೆ ಮತ್ತು ಪಾರ್ಶ್ವವಾಯು ಮತ್ತು ರಕ್ತ ಹೆಪ್ಪುಗಟ್ಟುವಿಕೆಯ ಅಪಾಯವನ್ನು ಹೆಚ್ಚಿಸುತ್ತದೆ. ಥೈರಾಯ್ಡ್ ಸಮಸ್ಯೆಗಳು ಅಸ್ತಿತ್ವದಲ್ಲಿರುವ ಹೃದಯ ಕಾಯಿಲೆಯನ್ನು ಪ್ರಚೋದಿಸಬಹುದು ಮತ್ತು ಹದಗೆಡಿಸಬಹುದು. ಥೈರಾಯ್ಡ್ ಸಮಸ್ಯೆಗಳನ್ನು ಪರಿಹರಿಸದಿದ್ದರೆ ಹೃದ್ರೋಗ ಹೊಂದಿರುವ ರೋಗಿಗಳು ತಮ್ಮ ಎದೆ ನೋವು ಅಥವಾ ಹೃದಯ ವೈಫಲ್ಯವನ್ನು ಉಲ್ಬಣಗೊಳಿಸಬಹುದು ಎಂದು ಅವರು ಹೇಳುತ್ತಾರೆ.

**ಮೊದಲೇ ಪತ್ತೆಹಚ್ಚಿ ಚಿಕಿತ್ಸೆ ಪಡೆಯುವುದು ಉತ್ತಮ:** ಥೈರಾಯ್ಡ್ ಅಸ್ವಸ್ಥತೆಗಳನ್ನು ಮೊದಲೇ ಪತ್ತೆಹಚ್ಚಿ ಚಿಕಿತ್ಸೆ ನೀಡುವುದರಿಂದ ಈ ಅಪಾಯಗಳನ್ನು ಗಮನಾರ್ಹವಾಗಿ ಕಡಿಮೆ ಮಾಡಬಹುದು. ಥೈರಾಯ್ಡ್-ಉತ್ತೇಜಿಸುವ ಹಾರ್ಮೋನ್ ಮತ್ತು ಥೈರಾಯ್ಡ್ ಹಾರ್ಮೋನ್ ಮಟ್ಟಗಳಿಗೆ ಸರಳ ರಕ್ತ ಪರೀಕ್ಷೆಗಳು ತ್ವರಿತ ರೋಗನಿರ್ಣಯಕ್ಕೆ ಕಾರಣವಾಗಬಹುದು. ಹೈಪೋಥೈರಾಯ್ಡಿಸಮ್‌ಗೆ ಹಾರ್ಮೋನ್ ಬದಲಿ ಅಥವಾ ಹೈಪರ್ ಥೈರಾಯ್ಡಿಸಮ್‌ಗೆ ಔಷಧಿಗಳಂತಹ ಚಿಕಿತ್ಸೆಗಳು ಸರಿಯಾಗಿ ನಿರ್ವಹಿಸಿದಾಗ ಹೃದಯದ ಕಾರ್ಯ, ಲಿಪಿಡ್ ಮಟ್ಟಗಳು ಮತ್ತು ಒಟ್ಟಾರೆ ಹೃದಯದ ಆರೋಗ್ಯವನ್ನು ಸುಧಾರಿಸುತ್ತದೆ ಎಂದು ವೈದ್ಯರು ಹೇಳುತ್ತಾರೆ.

## ನೀವು ಪ್ಲಾಸ್ಟಿಕ್ ಬಾಟಲಿಯಲ್ಲಿ ನೀರು ಕುಡಿತಿದ್ದೀರಾ?

ನಾವು ದಿನನಿತ್ಯ ನೀರು ಕುಡಿಯುವಾಗ ಮಾಡುವ ಕೆಲವೊಂದು ತಪ್ಪುಗಳು ನಿಮ್ಮ ಆರೋಗ್ಯವನ್ನು ಹದಗೆಡಿಸಬಹುದು. ಅಂತಹ ತಪ್ಪುಗಳು ಯಾವುವು ತಿಳಿಯೋಣ. ನೀರು ನಮ್ಮ ದೇಹಕ್ಕೆ ಅತ್ಯಗತ್ಯ. ಪ್ರತಿದಿನ ಸರಿಯಾದ ಪ್ರಮಾಣದಲ್ಲಿ ನೀರಿನ ಸೇವನೆ ನಿಮ್ಮನ್ನು ಆರೋಗ್ಯವಾಗಿಡುತ್ತದೆ. ನೀರು ಹಲವಾರು ರೋಗಗಳಿಂದ ನಮ್ಮನ್ನು ಪಾರು ಮಾಡಬಹುದು. ಅನೇಕ ಜನರು ನೀರು ಕುಡಿಯುವಾಗ ತಪ್ಪುಗಳನ್ನು ಮಾಡುತ್ತಾರೆ, ಇದು ದೇಹದ ಮೇಲೆ ನೇರ ನಕಾರಾತ್ಮಕ ಪರಿಣಾಮ ಬೀರುತ್ತದೆ. ತಪ್ಪು ಸಮಯದಲ್ಲಿ ನೀರು ಕುಡಿಯುವುದು, ಬೇಗನೆ ನೀರು ಕುಡಿಯುವುದು ಮತ್ತು ಇತರ ಹಲವು ತಪ್ಪುಗಳನ್ನು 90% ಜನರು ತಿಳಿದೋ ತಿಳಿಯದೆಯೋ ಮಾಡುತ್ತಾರೆ.

ಈ ಸಂದರ್ಭದಲ್ಲಿ, ನಾವು ನೀರು ಕುಡಿಯುವಾಗ ಜನರು ಮಾಡುವ ನಾಲ್ಕು ಪ್ರಮುಖ ತಪ್ಪುಗಳ ಬಗ್ಗೆ ನಿಮಗೆ ತಿಳಿಸಲಿದ್ದೇವೆ. ಮಹಿಳಾ ಆರೋಗ್ಯ ಮತ್ತು ಪೌಷ್ಟಿಕಾಂಶ ತಜ್ಞೆ ಸಲೋನಿ ತಮ್ಮ ಇನ್‌ಸ್ಟಾಗ್ರಾಮ್ ವೀಡಿಯೋದಲ್ಲಿ ಯಾವ ರೀತಿ ನೀರು ಕುಡಿಯಬೇಕು, ಯಾವೆಲ್ಲಾ ತಪ್ಪನ್ನು ಮಾಡಬಾರದು ಎನ್ನುವುದರ ಬಗ್ಗೆ ಮಾಹಿತಿಯನ್ನು ಹಂಚಿಕೊಂಡಿದ್ದಾರೆ.

**ನೀರನ್ನು ಬೇಗನೆ ಕುಡಿಯುವುದು:** ಅನೇಕ ಜನರು ಒಂದೇ ಉಸಿರಿನಲ್ಲಿ ಒಂದು ಲೋಟ ನೀರನ್ನು ಕುಡಿಯುತ್ತಾರೆ. ಇದು ದೇಹಕ್ಕೆ ಮಿನಿ-ಶಾಕ್ ಉಂಟುಮಾಡಬಹುದು ಎಂದು ಪೌಷ್ಟಿಕಾಂಶ ತಜ್ಞೆ ಸಲೋನಿ ವಿವರಿಸುತ್ತಾರೆ. ನೀರನ್ನು ಬೇಗನೆ ಕುಡಿಯುವುದರಿಂದ ದೇಹವು ಅದನ್ನು ಸಂಸ್ಕರಿಸುವುದನ್ನು ತಡೆಯುತ್ತದೆ ಮತ್ತು ಜೀರ್ಣಕಾರಿ ಸಮಸ್ಯೆಗಳು, ಹೊಟ್ಟೆ ಉಬ್ಬುವುದು ಅಥವಾ ಆಮ್ಲೀಯತೆಗೆ ಕಾರಣವಾಗಬಹುದು. ಆದ್ದರಿಂದ, ನೀರು ಕುಡಿಯಲು ಸರಿಯಾದ ಮಾರ್ಗವೆಂದರೆ ಒಂದು ಸಿಪ್ ನೀರು ಕುಡಿಯುವುದು ಮತ್ತು 2-3 ಸೆಕೆಂಡುಗಳ ನಂತರ ನುಂಗುವುದು. ಇದು ದೇಹದ ಮೇಲೆ ಹೆಚ್ಚುವರಿ ಒತ್ತಡವನ್ನು ತಡೆಯುತ್ತದೆ.

**ತಾಪಮಾನದ ಬಗ್ಗೆ ಎಚ್ಚರವಿರಲಿ:** ಅನೇಕ ಜನರು ರೆಫ್ರಿಜರೇಟರ್ ಅಥವಾ ಕೆಟಲ್‌ನಿಂದ ತುಂಬಾ ಬಿಸಿ ಅಥವಾ ತಣ್ಣನೆಯ ನೀರನ್ನು ತಕ್ಷಣ ಕುಡಿಯುತ್ತಾರೆ. ಪೌಷ್ಟಿಕಾಂಶ ತಜ್ಞೆ ಸಲೋನಿ ಪ್ರಕಾರ, ಇದು ದೊಡ್ಡ ತಪ್ಪಾಗಿರಬಹುದು. ಅತ್ಯಂತ ತಣ್ಣನೆಯ ಅಥವಾ ಬಿಸಿನೀರನ್ನು ಸರಿಯಾಗಿ ಹೀರಿಕೊಳ್ಳುವ ಮೊದಲು ದೇಹವು ಅದರ ತಾಪಮಾನವನ್ನು ಸರಿಹೊಂದಿಸಲು ಹೆಚ್ಚುವರಿ ಶಕ್ತಿಯನ್ನು ವ್ಯಯಿಸಬೇಕಾಗುತ್ತದೆ. ಆದ್ದರಿಂದ ನೀರನ್ನು ಯಾವಾಗಲೂ ಕೋಣೆಯ ಉಷ್ಣಾಂಶದಲ್ಲಿ ಸೇವಿಸಬೇಕು.



# ಸೂರ್ಯನ ಬಿಸಿಲು ಬೀಳದಿದ್ದರೆ ಮೂಳೆಯ ಮೇಲೆ ನೇರ ಪರಿಣಾಮ ಬೀರುತ್ತದೆ ಎಚ್ಚರ!



ವಿಟಮಿನ್ ಡಿ ಕೊರತೆಯಾದ್ರೆ, ಅದು ನಮ್ಮ ಮೂಳೆಯ ಮೇಲೆ ಪ್ರಭಾವ ಬೀರುತ್ತದೆ. ಇದರಿಂದ ಯಾವೆಲ್ಲಾ ಸಮಸ್ಯೆಗಳಾಗುತ್ತೆ, ಇದನ್ನು ಯಾವ ರೀತಿ ನಿವಾರಿಸಬಹುದು ಎನ್ನುವುದುನ್ನು ತಿಳಿಯೋಣ. ಚಳಿಗಾಲದಲ್ಲಿ ಅನೇಕ ಜನರು ಮನೆಯಿಂದ ಹೊರಬರಲು ಇಷ್ಟಪಡೋದಿಲ್ಲ. ಇದರಿಂದಾಗಿ ಸೂರ್ಯನ ಬೆಳಕಿಗೆ ದೇಹವನ್ನು ಒಡ್ಡಿಕೊಳ್ಳುವುದನ್ನು ಕಡಿಮೆ ಮಾಡುತ್ತಾರೆ.

ಪೂರ್ಣ ಬಟ್ಟೆಗಳನ್ನು ಧರಿಸುವುದು ಸಾಮಾನ್ಯವಾಗುತ್ತದೆ ಇದರಿಂದಾಗಿ ಸೂರ್ಯನ ಕಿರಣ ಸರಿಯಾಗಿ ದೇಹದ ಮೇಲೆ ಬೀಳೋದಿಲ್ಲ. ಇದು ನಮ್ಮ ದೇಹಕ್ಕೆ ಅಗತ್ಯವಾದ ವಿಟಮಿನ್ ಡಿ ಯನ್ನು ಕಳೆದುಕೊಳ್ಳುತ್ತದೆ. ಮೂಳೆಗಳನ್ನು ಬಲಪಡಿಸಲು, ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಮತ್ತು ಶಕ್ತಿಯನ್ನು ಕಾಪಾಡಿಕೊಳ್ಳಲು ವಿಟಮಿನ್ ಡಿ ನಿರ್ಣಾಯಕವಾಗಿದೆ.

**ವಿಟಮಿನ್ ಡಿ ಕೊರತೆ:** ದೇಹದಲ್ಲಿ ವಿಟಮಿನ್ ಡಿ ಕೊರತೆಯಿದ್ದಾಗ, ಮೂಳೆ ನೋವು, ದೌರ್ಬಲ್ಯ ಆಯಾಸದಂತಹ ಸಮಸ್ಯೆಗಳು ಉಂಟಾಗಲು ಪ್ರಾರಂಭಿಸುತ್ತವೆ. ಆಹಾರದಲ್ಲಿ ವಿಟಮಿನ್ ಡಿ-ಭರಿತ ಆಹಾರಗಳ ಕೊರತೆ ಅಥವಾ ವಯಸ್ಸಾದಂತೆ ದೇಹದಲ್ಲಿ ವಿಟಮಿನ್ ಡಿ ಉತ್ಪಾದನೆ ಕಡಿಮೆಯಾಗುವುದು. ಮೂಳೆಗಳ ಮೇಲೆ ಸೂರ್ಯನ ಬೆಳಕಿನ ಕೊರತೆಯ ಪರಿಣಾಮಗಳು ಮತ್ತು



ಈ ಸಮಸ್ಯೆಯನ್ನು ಹೇಗೆ ತಡೆಯುವುದು ಎಂಬುದನ್ನು ತಿಳಿಯೋಣ.

**ಅಧ್ಯಯನಗಳು ಏನು ಹೇಳುತ್ತದೆ:** ಇತ್ತೀಚಿನ ಅಧ್ಯಯನಗಳು ವಿಟಮಿನ್ ಡಿ ಮುರಿತಗಳನ್ನು ತಡೆಗಟ್ಟುವಲ್ಲಿ ಅದರ ಪಾತ್ರವು ಸ್ನಾಯು ಕಾರ್ಯದ ಮೇಲೆ ಅದರ ಮಧ್ಯಸ್ಥಿಕೆಯ ಪರಿಣಾಮಗಳ ಮೂಲಕ ಮತ್ತು ಉರಿಯೂತದ ಮೂಲಕ ಆಗಿರಬಹುದು ಎಂದು ಸೂಚಿಸಿವೆ. ವಿಟಮಿನ್ ಡಿ ಪೂರಕವು ಸ್ನಾಯುವಿನ ಬಲವನ್ನು ಸುಧಾರಿಸುತ್ತದೆ ಎಂದು ಅಧ್ಯಯನಗಳು ತೋರಿಸಿವೆ. ಇದು ಮೂಳೆ ಮುರಿತದ ಸಂಭವಕ್ಕೆ ಅತಿದೊಡ್ಡ ಕೊಡುಗೆ ನೀಡುವ ಅಂಶಗಳಲ್ಲಿ ಒಂದಾಗಿದೆ.

**ವಿಟಮಿನ್ ಡಿ ಕೊರತೆ ನಿವಾರಿಸಲು ಟಿಪ್ಸ್:** ವಿಟಮಿನ್ ಡಿ ಕೊರತೆಯನ್ನು ತಪ್ಪಿಸಲು, ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ 15 ರಿಂದ 20 ನಿಮಿಷಗಳ ಕಾಲ ಸೂರ್ಯನ ಬೆಳಕಿನಲ್ಲಿ ಕಳೆಯುವುದು ಪ್ರಯೋಜನಕಾರಿ. ನಿಮ್ಮ ಆಹಾರದಲ್ಲಿ ನೇರ ಸೂರ್ಯನ ಬೆಳಕು ನಿಮ್ಮ ಮುಖ, ಕೈಗಳು ಮತ್ತು ಪಾದಗಳನ್ನು ತಲುಪುವಂತೆ ನೋಡಿಕೊಳ್ಳಿ. ಮೊಟ್ಟೆಯ ಹಳದಿ ಭಾಗ, ಹಾಲು ಮತ್ತು ಮೊಸರು, ಅಣಬೆಗಳು, ಮೀನು ಮತ್ತು ವಿಟಮಿನ್ ಡಿ-ಬಲವರ್ಧಿತ ಹಾಲನ್ನು ಸೇರಿಸಿ. ವಿಟಮಿನ್ ಡಿ ಕೊರತೆ ತೀವ್ರವಾಗಿದ್ದರೆ, ವೈದ್ಯರ ಸಲಹೆಯೊಂದಿಗೆ ವಿಟಮಿನ್ ಡಿ ಮಾತ್ರೆಗಳನ್ನು ತೆಗೆದುಕೊಳ್ಳಬಹುದು. ದೈನಂದಿನ ವಾಕಿಂಗ್, ಯೋಗ ಅಥವಾ ಲಘು ವ್ಯಾಯಾಮ ಮೂಳೆಗಳನ್ನು ಬಲವಾಗಿಡಲು ಮತ್ತು ದೇಹದಲ್ಲಿನ ಪೋಷಕಾಂಶಗಳು ಸರಿಯಾಗಿ ಕಾರ್ಯನಿರ್ವಹಿಸಲು ಸಹಾಯ ಮಾಡುತ್ತದೆ.

**ವಿಟಮಿನ್ ಡಿ ಕೊರತೆ ದೀರ್ಘಕಾಲದವರೆಗೆ ಮುಂದುವರಿದರೆ ಈ ಲಕ್ಷಣಗಳು ಕಾಣಿಸಿಕೊಳ್ಳಬಹುದು**

- ಮೂಳೆಗಳು, ಬೆನ್ನು ಮತ್ತು ಕೀಲುಗಳಲ್ಲಿ ನೋವು
- ತೋಳುಗಳು ಮತ್ತು ಕಾಲುಗಳಲ್ಲಿ ದೌರ್ಬಲ್ಯ
- ಆಯಾಸ
- ಆಗಾಗ್ಗೆ ಶೀತ, ಕೆಮ್ಮು ಅಥವಾ ಅನಾರೋಗ್ಯ
- ಖಿನ್ನತೆ ಅಥವಾ ಕಿರಿಕಿರಿ ಮನಸ್ಥಿತಿ
- ಮೂಳೆ ಮುರಿತದ ಅಪಾಯ
- ದುರ್ಬಲಗೊಂಡ ರೋಗನಿರೋಧಕ ಶಕ್ತಿ
- ಮಕ್ಕಳಲ್ಲಿ ಕಳಪೆ ಮೂಳೆ ಬೆಳವಣಿಗೆ

**ಮಕ್ಕಳು ಮತ್ತು ವೃದ್ಧರ ಮೂಳೆಗಳ ಬಗ್ಗೆ ವಿಶೇಷ ಕಾಳಜಿ ಅಗತ್ಯ:** ಪ್ರತಿದಿನ ಬಿಸಿಲಿನಲ್ಲಿ ಸ್ವಲ್ಪ ಸಮಯ ಕಳೆಯುವುದನ್ನು ಅಭ್ಯಾಸ ಮಾಡಿಕೊಳ್ಳಿ ಮತ್ತು ವಿಟಮಿನ್ ಡಿ ಭರಿತ ಆಹಾರವನ್ನು ನಿಮ್ಮ ಆಹಾರದಲ್ಲಿ ಸೇರಿಸಿ. ಆಯಾಸ, ಕೀಲು ನೋವು ಅಥವಾ ದೌರ್ಬಲ್ಯದಂತಹ ಲಕ್ಷಣಗಳು ಕಂಡುಬಂದರೆ, ತಕ್ಷಣ ವೈದ್ಯರನ್ನು ಸಂಪರ್ಕಿಸಿ. ಮಕ್ಕಳು ಮತ್ತು ವೃದ್ಧರ ಮೂಳೆಗಳ ಬಗ್ಗೆ ವಿಶೇಷ ಕಾಳಜಿವಹಿಸಿ. ಚಳಿಗಾಲದಲ್ಲಿ ಸ್ವಲ್ಪ ಎಚ್ಚರಿಕೆ ಮತ್ತು ನಿಯಮಿತವಾಗಿ ಸೂರ್ಯನ ಬೆಳಕಿಗೆ ಒಡ್ಡಿಕೊಳ್ಳುವುದರಿಂದ ನಿಮ್ಮ ಮೂಳೆಗಳು ಬಲವಾಗಿ ಉಳಿಯುತ್ತವೆ ಮತ್ತು ಅನಾರೋಗ್ಯವನ್ನು ತಡೆಗಟ್ಟಬಹುದು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ, ನಿಮಗೆ ಆತ್ಮವಿಶ್ವಾಸತರುತ್ತದೆ. ವ್ಯಾಪರದಲ್ಲಿ ಪ್ರಯೋಜನ ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು. ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ.

**ವೃಷಭ** ಪತ್ನಿ ನೀವು ಹುರಿದುಂಬಿಸಬಹುದು. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಸಂಬಂಧಿಗಳಿದ್ದಲ್ಲಿ ಸಣ್ಣ ಪ್ರಯಾಣ ನಿಮ್ಮ ದೈನಂದಿನ ಒತ್ತಡದ ಜೀವನದಿಂದ ನಿಮಗೆ ಸುಖ, ವಿಶ್ರಾಂತಿಯನ್ನು ತರುತ್ತದೆ ನಿಮ್ಮ ಸಿಹಿಯಾದ ಪ್ರೀತಿಯ ಜೀವನದಲ್ಲಿನ ಉತ್ಕಟತೆಯನ್ನು ಆನಂದಿಸುತ್ತೀರಿ.

**ಮಿಥುನ** ಖಂಡಿತವಾಗಿಯೂ ಆರೋಗ್ಯದ ಆರೈಕೆಯ ಅಗತ್ಯವಿದೆ. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ, ನಿಮ್ಮ ಸ್ನೇಹಿತರ ಜತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ. ನಿಮ್ಮ ಅತಿಥಿಗಳ ಜೊತ ಒರಟಾಗಿ ನಡೆದುಕೊಳ್ಳಬೇಡಿ. ನಿಮ್ಮ ವರ್ತನೆ ಸಂಬಂಧಗಳಲ್ಲೂ ಶೂನ್ಯತೆಯನ್ನು ತರಬಹುದು.

**ಕರ್ಕಾಟಕ** ಸೃಜನಶೀಲ ಕೆಲಸ ನಿಮ್ಮನ್ನು ಶಾಂತವಾಗಿರಿಸುತ್ತವೆ. ಇಂದಿನವರೆಗೂ ಅಗತ್ಯವಿಲ್ಲದೆ ಹಣವನ್ನು ಖರ್ಚು ಮಾಡುತ್ತಿದ್ದ ಜನರು, ತನ್ನನ್ನು ನಿಯಂತ್ರಿಸಬೇಕು, ಹಣವನ್ನು ಉಳಿಸಬೇಕು. ಈ ಅವಧಿ ನಿಮ್ಮ ಹೊಸ ಯೋಜನೆಗಳು, ಆಲೋಚನೆಗಳ ಬಗ್ಗೆ ನಿಮ್ಮ ಪೋಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಒಳ್ಳೆಯದಾಗಿದೆ.

**ಸಿಂಹ** ಧಾರ್ಮಿಕ, ಆಧ್ಯಾತ್ಮಿಕ ಆಸಕ್ತಿಗಳನ್ನು ಅನುಸರಿಸಲೂ ಒಂದು ಒಳ್ಳೆಯ ದಿನ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಾಳೆ ಬಹಳ ತಡವಾಗಬಹುದಾದ್ದರಿಂದ ನಿಮ್ಮ ದೀರ್ಘಕಾಲದ ಜಗಳವನ್ನು ಪರಿಹರಿಸಿಕೊಳ್ಳಿ.

**ಕನ್ಯಾ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು, ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ದೂರದ ಸ್ಥಳದ ಸಂಬಂಧಿಗಳು ನಿಮ್ಮನ್ನು ಸಂಪರ್ಕಿಸಬಹುದು.

**ತುಲಾ** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಹಣ ನಿಮಗೆ ಅಗತ್ಯವಾಗಿದೆ ಆದರೆ ನಿಮ್ಮ ಸಂಬಂಧಗಳನ್ನು ಹಾಳುಮಾಡುವಷ್ಟು ಹಣದ ಬಗ್ಗೆ ಗಂಭೀರವಾಗಬೇಡಿ.

**ವೃಶ್ಚಿಕ** ಮನೆಯಲ್ಲಿ ಒತ್ತಡ ನಿಮಗೆ ಸಿಟ್ಟು ತರಿಸಬಹುದು. ಅವುಗಳನ್ನು ದಮನಗೊಳಿಸುವುದು ಕೇವಲ ದೈಹಿಕ ಸಮಸ್ಯೆಯನ್ನು ಹೆಚ್ಚಿಸುತ್ತದೆ. ದೈಹಿಕ ಚಟುವಟಿಕೆಯೊಂದಿಗೆ ಇದನ್ನು ತೊಡೆದುಹಾಕಿ. ಕಿರಿಕಿರಿಯುಂಟುಮಾಡುವ ಪರಿಸ್ಥಿತಿಯಿಂದ ಹೊರಬರುವುದು ಉತ್ತಮ. ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು.

**ಧನಸ್ಸು** ಲಸದ ನಡುವೆ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ ಮತ್ತು ತಡರಾತ್ರಿ ಕೆಲಸ ಮಾಡುವುದನ್ನು ತಪ್ಪಿಸಿ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ.

**ಮಕರ** ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡು ಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ. ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ. ನೀವು ಅವರ ಸಲುವಾಗಿ ಕಾಳಜಿ ತೆಗೆದುಕೊಳ್ಳುತ್ತೀರೆಂದು ಅವರಿಗೆ ಅರ್ಥವಾಗುವ ಹಾಗೆ ಅವರ ಸಂತೋಷವನ್ನು ಹಂಚಿಕೊಳ್ಳಿ.

**ಕುಂಭ** ಆರೋಗ್ಯ ಚೆನ್ನಾಗಿರುತ್ತದೆ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ನಿಮ್ಮ ಮಕ್ಕಳ ಸಮಸ್ಯೆಗಳನ್ನು ನಿಭಾಯಿಸಲು ಸ್ವಲ್ಪ ಸಮಯ ತೆಗೆದುಕೊಳ್ಳಿ. ಸ್ಪಷ್ಟವಾಗಿ ಅರ್ಥಮಾಡಿಕೊಳ್ಳುವ ಮೂಲಕ ಮಾತ್ರ ನೀವು ನಿಮ್ಮ ಪತ್ನಿಗೆ ಭಾವನಾತ್ಮಕ ಬೆಂಬಲ ನೀಡಬಹುದು.

**ಮೀನ** ನಿಮ್ಮ ಅಪಾರ ವಿಶ್ವಾಸ, ಸುಲಭದ ಕೆಲಸದ ವೇಳಾಪಟ್ಟಿ ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಆಸ್ತಿ ವ್ಯವಹಾರಗಳು ಅಸಾಧಾರಣ ಲಾಭ ತರುತ್ತವೆ. ಹಾಜರಾಗುವ ಒಂದು ಸಾಮಾಜಿಕ ಸಮಾರಂಭದಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ. ಸ್ನೇಹ ಕಳೆದುಕೊಳ್ಳುವ ಸಾಧ್ಯತೆಗಳು ಹೆಚ್ಚಾಗಿರುವುದರಿಂದ ಎಚ್ಚರಿಕೆಯಿಂದಿರಿ.

# ಒಪಿಎಸ್ ಪಡೆದೇ ತೀರುತ್ತೇವೆ; ಕರ್ನಾಟಕ ಬಂದ್‌ಗೆ ರೆಡಿ

• ಉದಯವಾಹಿನಿ, ದಾವಣಗೆರೆ:

ಕರ್ನಾಟಕದಲ್ಲಿ ರಾಷ್ಟ್ರೀಯ ಪಿಂಚಣಿ ಯೋಜನೆ ರದ್ದು ಮಾಡಿ ಹಳೇ ಪಿಂಚಣಿ ಯೋಜನೆ ಜಾರಿ ಮಾಡದಿದ್ದರೆ ಕರ್ನಾಟಕ ಬಂದ್ ನಡೆಸುವುದು ಅನಿವಾರ್ಯವಾಗಲಿದೆ ಎಂದು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿಎಸ್ ಷಡಕ್ಷರಿ, ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ನಗರದ ಕುವೆಂಪು ಕನ್ನಡ ಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಅಖಿಲ ಕರ್ನಾಟಕ ಎನ್‌ಪಿಎಸ್ ನೌಕರರ ಸಂಘದ 2ನೇ ರಾಜ್ಯ ಕಾರ್ಯಕಾರಿಣಿ ಸಭೆ ಉದ್ಘಾಟಿಸಿ ಮಾತನಾಡಿ, ಒಪಿಎಸ್ ಜಾರಿಗೊಳಿಸುವಂತೆ ನಾವು ಹೋರಾಟ ಮಾಡುತ್ತಲೇ ಬಂದಿದ್ದೇವೆ. ಆದರೆ, ಪ್ರಯೋಜನ ಆಗಿಲ್ಲ.ಕಾರಣ, ಕರ್ನಾಟಕವನ್ನು ಬಂದ್‌ಮಾಡಿ ಆದರೂ ಒಪಿಎಸ್ ಪಡೆದೇ ತೀರುತ್ತೇವೆ ಎಂದು ಸ್ಪಷ್ಟಪಡಿಸಿದರು.



**ಸರಕಾರಿ ನೌಕರಿಯಿಂದ ತೆಗೆಯಲಿಕ್ಕೆ ಯಾರಿಗೂ ಅಧಿಕಾರವಿಲ್ಲ:** ಈ ನಿಮ್ಮ ರಾಜ್ಯಾಧ್ಯಕ್ಷ ಷಡಕ್ಷರಿಯನ್ನು ಅರೆಸ್ಟ್ ಮಾಡ್ತಾರೆ, ಜೈಲಿಗೆ ಕಳಿಸುತ್ತಾರೆ, ಕೆಲಸದಿಂದ ಸಸ್ಪೆಂಡ್ ಮಾಡ್ತಾರೆ ಎಂದು ಯಾರೂ ಹೆದರಿಕೊಳ್ಳಬೇಡಿ. ನಾವು ಇಂತಹ ಬೆದರಿಕೆಗಳನ್ನೆಲ್ಲಾ ಹಿಂದೆ ಸಾಕಷ್ಟು ನೋಡಿದ್ದೇವೆ. ನಾವು ಯಾರೂ ಹೆದರಿಕೊಳ್ಳುವ ಅಗತ್ಯವೇ ಇಲ್ಲ. ದೇವರು ನಮಗೆ ಜೀವ, ಜೀವನ ಕೊಟ್ಟಿದ್ದಾನೆ. ನನ್ನ ಸ್ವಸಾಮರ್ಥ್ಯದ ಆಧಾರದಲ್ಲಿ ಸರಕಾರಿ ಕೆಲಸ ಸಿಕ್ಕಿದೆ. ನನ್ನನ್ನು ಸರಕಾರಿ ನೌಕರಿಯಿಂದ ತೆಗೆಯಲಿಕ್ಕೆ ಯಾರಿಗೂ ಅಧಿಕಾರವಿಲ್ಲ. ನಾವು ಯಾವುದೇ ಬೆದರಿಕೆಗಳಿಗೆ ಹೆದರುವುದಿಲ್ಲ ಎಂದರು.

**ಸರಕಾರಿ ನೌಕರರು ಯಾರೂ ಕೆಲಸಕ್ಕೆ ಬರುತ್ತಿಲ್ಲ ಎನ್ನಬೇಕು:** ಈ ನಿಟ್ಟಿನಲ್ಲಿ ನಮ್ಮ ಹೋರಾಟದ ತೀವ್ರತೆ ಚಂಡಮಾರುತದ ರೀತಿ ಇರಬೇಕು. ಕರ್ನಾಟಕ ಬಂದ್ ಹೇಗಿರಬೇಕು ಅಂದರೆ, ಸರ್ ಇಡೀ ಕರ್ನಾಟಕ ಬಂದ್ ಆಗಿದೆ, ಸರಕಾರಿ ನೌಕರರು ಯಾರೂ ಕೆಲಸಕ್ಕೆ ಬರುತ್ತಿಲ್ಲ ಎಂದು ಗುಪ್ತಚರ ಇಲಾಖೆಯವರು ಮುಖ್ಯಮಂತ್ರಿಗಳಿಗೆ ವರದಿ ನೀಡಬೇಕು.

ಬಂದ್ ವೇಳೆ ಯಾರಾದರೂ ಕೆಲಸ ಮಾಡುತ್ತಿದ್ದರೆ, ಜಿಲ್ಲಾಧ್ಯಕ್ಷರು, ತಾಲ್ಲೂಕು ಅಧ್ಯಕ್ಷರು ಕಚೇರಿ ಒಳಗೆ ಹೋಗಿ ಅವರನ್ನು ಎಳೆದು ಹೊರಗೆ ಕರೆತರಬೇಕು. ನಮ್ಮ ಜೀವನ, ನಮ್ಮ ಭವಿಷ್ಯ ಮುಖ್ಯವೇ ಹೊರತು ನಿನ್ನ ಕೆಲಸವಲ್ಲವೆಂದು ಅವರಿಗೆ ತಿಳಿಸಬೇಕು ಎಂದರು.

# ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಕಾರ್ಯಕ್ರಮಕ್ಕೆ ಚಾಲನೆ

## ಮಕ್ಕಳಿಗೆ ರಸ್ತೆ ಸುರಕ್ಷತೆ ಬಗ್ಗೆ ಮಾಹಿತಿ ವಿಶೇಷ ಮಾಹಿತಿ ನೀಡಲಾಯಿತು

• ಉದಯವಾಹಿನಿ, ಚಿತ್ರದುರ್ಗ



ಉದಯವಾಹಿನಿ ಚಿತ್ರ

ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಅಂಗವಾಗಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ವತಿಯಿಂದ ಚಿತ್ರದುರ್ಗ ತಾಲ್ಲೂಕಿನ ಸಜ್ಜನಕೆರೆ ಗ್ರಾಮದ ಸ.ಹಿ.ಪ್ರಾ.ಶಾಲೆಯಲ್ಲಿ ಸಂಭ್ರಮ ಕಾರ್ಯಕ್ರಮದಡಿಯಲ್ಲಿ ಮಕ್ಕಳಿಗೆ ರಸ್ತೆ ಸುರಕ್ಷತೆ ಬಗ್ಗೆ ಮಾಹಿತಿ ವಿಶೇಷ ಮಾಹಿತಿ ನೀಡಲಾಯಿತು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಶಾಲೆಯ ಮುಖ್ಯ ಶಿಕ್ಷಕ ವೆಂಕಟೇಶ್‌ಮಾತನಾಡಿ ಪ್ರತಿಯೊಬ್ಬರೂ ವಾಹನಗಳನ್ನು ಚಲಾಯಿಸುವಾಗ ಸ್ವಯಂ ಶಿಸ್ತು, ಜವಾಬ್ದಾರಿಯೊಂದಿಗೆ ನಿಧಾನಗತಿಯಲ್ಲಿ ರಸ್ತೆ ನಿಯಮಗಳ ಪಾಲನೆಯೊಂದಿಗೆ ವಾಹನ ಅಪಘಾತಗಳನ್ನು ಕಡಿಮೆ ಮಾಡಿ ನಮ್ಮ ಹಾಗೂ ಇತರರ ಜೀವನವನ್ನು ಸುರಕ್ಷಿತವಾಗಿರಿಸೋಣ ಎಂದು ಮಕ್ಕಳಲ್ಲಿ ರಸ್ತೆ ಸುರಕ್ಷತೆ ಬಗ್ಗೆ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಅಧ್ಯಕ್ಷ, ಯೋಗ ಚಿಕಿತ್ಸಕ ರವಿ ಕೆ.ಅಂಬೇಕರ್ ಮಾತನಾಡಿ ಪ್ರಪಂಚದಲ್ಲಿ ಅತಿ ಹೆಚ್ಚು ರಸ್ತೆ ಅಪಘಾತಗಳು ಸಂಭವಿಸುವ ದೇಶಗಳಲ್ಲಿ ಭಾರತವೂ ಸಹ ಒಂದು. ಅಪಘಾತ ನಿಯಂತ್ರಣಕ್ಕೆ ಸರ್ಕಾರ ಹಲವು ಕಠಿಣ ಕ್ರಮಗಳನ್ನು ಜಾರಿಗೆ ತಂದರೂ ಪ್ರಾಣ ನಷ್ಟ ಸ್ವಲ್ಪಮಟ್ಟಿಗೆ ಕಡಿಮೆ ಆಗಿದೆಯಾದರೂ ಅಪಘಾತ ಪ್ರಕರಣಗಳು ಮಾತ್ರ ಕಡಿಮೆ ಆಗಿಲ್ಲ ರಸ್ತೆ ಅಪಘಾತಗಳನ್ನು ನೋಡಿದಾಗ ಮೊಬೈಲ್ ಗಳಲ್ಲಿ ವೀಡಿಯೊ ಮಾಡದೆ ಜವಾಬ್ದಾರಿಯುತ ನಾಗರೀಕರಾಗಿ ನಾವು ಅಪಘಾತವಾದ ವಾಹನದಲ್ಲಿರುವವರಿಗೆ ಅಗತ್ಯ ಸಹಾಯ ಮಾಡಬೇಕು ತಕ್ಷಣಕ್ಕೆ 108 ಆ್ಯಂಬುಲೆನ್ಸ್ ಹಾಗೂ 102 ತುರ್ತು ಪೋಲಿಸ್ ಸಹಾಯ ಸಂಖ್ಯೆಗೆ ಕರೆಮಾಡಬೇಕು ರಕ್ತಸ್ರಾವವಾಗುತ್ತಿದ್ದರೆ ಆ ಜಾಗಕ್ಕೆ ಬಿಗಿಯಾಗಿ ಬಟ್ಟೆಯನ್ನು ಸುತ್ತಿ ರಕ್ತಸ್ರಾವ ಆಗುದನ್ನು ತಪ್ಪಿಸಿ, ಯಾವುದೇ ಕಾರಣಕ್ಕೂ ತಕ್ಷಣಕ್ಕೆ ನೀರನ್ನು ಕುಡಿಸಬೇಡಿ ಅಪಘಾತಕ್ಕೊಳಗಾದವರ ಕುತ್ತಿಗೆ, ಸೊಂಟಭಾಗದ ಬಟ್ಟೆಗಳನ್ನು ಸಡಿಲಮಾಡಿ ಆ್ಯಂಬುಲೆನ್ಸ್ ಬರುವವರೆಗೂ ಸರಾಗ ಉಸಿರಾಟ ಆಗುವಂತೆ ನೋಡಿಕೊಳ್ಳಬೇಕು ಎಂದು ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಶಾಲಾ ಮಕ್ಕಳಿಗೆ ಸಹಶಿಕ್ಷಕಿ ಶ್ರೀಲಕ್ಷ್ಮೀ ರಸ್ತೆ ಸುರಕ್ಷತಾ ಪ್ರತಿಜ್ಞಾವಿಧಿ ಬೋಧಿಸಿದರು ಕಾರ್ಯಕ್ರಮದಲ್ಲಿ ಸಹ ಶಿಕ್ಷಕರಾದ, ಅನಸೂಯ ನಿರ್ಮಲಮ್ಮ, ಕೆಇಬಿ ರವಿ ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷ ನಿಂಗಪ್ಪ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

**ಭಾರತವೂ ಸಹ ಒಂದು**

> **ದೈಹಿಕ ಶಿಕ್ಷಕರಾದ ಸತೀಶ್ ರಸ್ತೆ ನಿಯಮಗಳ ಬಗ್ಗೆ ಮಾಹಿತಿ ನೀಡುತ್ತಾ ಮಕ್ಕಳು ರಸ್ತೆ ದಾಟುವ ಮುಂಚೆ ನಿಂತು ಬಲಕ್ಕೆ-ಎಡಕ್ಕೆ-ಮತ್ತೊಮ್ಮೆ ಬಲಕ್ಕೆ ನೋಡಿ, ಸುರಕ್ಷಿತವೆಂದು ಖಚಿತಪಡಿಸಿಕೊಂಡು ಮಾತ್ರ ದಾಟಬೇಕು ಚಿಕ್ಕ ಮಕ್ಕಳಿಗೆ ರಸ್ತೆ ನಿಯಮಗಳು ಅರ್ಥವಾಗದ ಕಾರಣ ಸಾಧ್ಯವಾದಷ್ಟು ಹಿರಿಯ ಮಾರ್ಗದರ್ಶನದಲ್ಲಿ ರಸ್ತೆಯಲ್ಲಿ ನಡೆದಾಡುವುದು ಸೂಕ್ತ.**
>
> **– ರವಿ ಕೆ.ಅಂಬೇಕರ್ ಯೋಗ ಚಿಕಿತ್ಸಕ**

# ಶಾಲಾಮಕ್ಕಳಿಗೆ ನೋಟ್ ಬುಕ್ ಪೆನ್ನು ವಿತರಣೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ಪಟ್ಟಣದ ಚಂದಾಪುರದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ದಿ.ಜಗನ್ನಾಥ ಪಾಟೀಲರ 15ನೇ ವರ್ಷದ ಪುಣ್ಯತಿಥಿ ಅಂಗವಾಗಿ ಅವರ ಸುಪುತ್ರ, ಸಂಜೀವಕುಮಾರ ಪಾಟೀಲ ನೇತೃತ್ವದಲ್ಲಿ ಪ್ರತಿ ವರ್ಷದಂತೆ ಈವರ್ಷವು ಕೂಡ ಶಾಲೆಯ ಮಕ್ಕಳಿಗೆ ನೋಟ್ ಬುಕ್ ಪೆನ್ನು ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಗ್ರೇಡ್2 ತಹಶೀಲ್ದಾರ್ ವೆಂಕಟೇಶ್ ದುಗ್ಗನ್, ಗೋಪಾಲರಾವ ಕಟ್ಟಿಮನಿ, ರಮೇಶ ಪಡಶೆಟ್ಟಿ ಐನಾಪುರ,ಪ್ರದೀಪ್ ದೇಶಮುಖ, ವೀರೇಶ ದೇಸಾಯಿ, ಶಿವಶರಣಪ್ಪ ಡಂಗಿ, ನರಸಪ್ಪ, ಉಮೇಶ ಪೂಜಾರಿ, ಮಲ್ಲಿನಾಥ ಮೇಲಗಿರಿ, ಕೃಷ್ಣ ಕೊಳೂರ, ಮುಖ್ಯಗುರು ಗೋಪಾಲ ಯಂಪಳ್ಳಿ, ಸೇರಿದಂತೆ ಅನೇಕರಿದ್ದರು.

# ರೈಲಿನಲ್ಲಿ ನೀರಿಲ್ಲದ್ದಕ್ಕೆ ಆಕ್ರೋಶ

• ಉದಯವಾಹಿನಿ, ಕಲಬುರಗಿ

ಸೊಲ್ಲಾಪೂರ ಹಾಸನ ಬಸವ ಎಕ್ಸ್‌ಪ್ರೆಸ್ ರೈಲಿನಲ್ಲಿ ನೀರಿನ ವ್ಯವಸ್ಥೆ ಇರದೇ ಜನ ಶೌಚಕ್ಕಾಗಿ ಪರಿತಪಿಸುವಂತಾಯಿತು ಎಂದು ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯ ಹೋರಾಟ ಸಮಿತಿ ಅಧ್ಯಕ್ಷ ಎಂ ಎಸ್ ಪಾಟೀಲ್ ನರಿಬೋಳ ತಿಳಿಸಿದ್ದಾರೆ ರೈಲು ಭೋಗಿ ಸಂಖ್ಯೆ ಎಸ್4, ಎಸ್5ರಲ್ಲಿ ನೀರಿನ ವ್ಯವಸ್ಥೆ ಇರದ ಕಾರಣ ಜನ ಶೌಚಾಲಯಕ್ಕೆ ತೆರಳಲು, ಊಟ ಮಾಡಿ ಕೈತೊಳೆಯಲು ಪರದಾಡಿದರು. ಕೊನೆಗೆ ಕುಡಿಯುವ ನೀರಿನ ಬಾಟಲಿಗಳನ್ನು ಖರೀದಿಸಿ ನಿತ್ಯ ಕರ್ಮ ಪೂರೈಸುವಂತಾಯಿತು ಎಂದು ಬೇಸರ ವ್ಯಕ್ತಪಡಿಸಿದರು.


ಈ ಅವ್ಯವಸ್ಥೆಯನ್ನು ಖಂಡಿಸಿರುವ ಅವರು, ರೈಲ್ವೆ ಇಲಾಖೆ ಮುಂದೆ ಇಂತಹ ತಪ್ಪುಗಳನ್ನು ಆಗದಂತೆ ವ್ಯವಸ್ಥೆ ಸರಿಪಡಿಸಬೇಕು ಮತ್ತು ಇಂದಿನ ಅವ್ಯವಸ್ಥೆಗೆ ಕಾರಣರಾದವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

# ಬೆಳೆ ಸಮೀಕ್ಷಕರಿಂದ ರೈತರಿಗೆ ಮೋಸ

• ಉದಯವಾಹಿನಿ, ಹುಣಸಗಿ

ತಾಲ್ಲೂಕಿನ ಸದಬ ಗ್ರಾಮದಲ್ಲಿ ಸರಿಯಾಗಿ ಬೆಳೆ ಸಮೀಕ್ಷೆ ಮಾಡದೆ ಇರುವುದರಿಂದ ಹಲವಾರು ರೈತರಿಗೆ ಬೆಳೆ ಪರಿಹಾರವು ಬಂದಿಲ್ಲ. ಬೇಕಾಬಿಟ್ಟಿಯಾಗಿ ಬೆಳೆ ಸಮೀಕ್ಷೆ ಮಾಡಿ ತಮಗೆ ಬೇಕಾದವರ ಅಥವಾ ಹಣ ನೀಡಿದವರ ಹೊಲಗಳಿಗೆ ಹೋಗಿ ಸರಿಯಾಗಿ ಸಮೀಕ್ಷೆ ಮಾಡಿದ್ದರಿಂದ ರೈತರ ಖಾತೆಗೆ ಹಣ ಜಮಾಆಗಿದೆ ಎಂದು ಸದಬ ಗ್ರಾಮದ ರೈತರು ಆರೋಪ ವ್ಯಕ್ತ ಪಡಿಸಿದರು.

ಸದಬ ಗ್ರಾಮದ ಸರ್ವೆ ನಂಬರ್ 45 / ಸರ್ವೆ ನಂಬರ್ 44 / ರಲ್ಲಿ ಯಾವುದೇ ಬೆಳೆ ಇಲ್ಲದಿದ್ದರೂ. ಹತ್ತಿ ಬೆಳೆ ಇದೆ ಎಂದು ಸಮೀಕ್ಷೆ ಮಾಡಿ ಬೆಳೆ ಪರಿಹಾರ ಹಣ ಬರುವಂತೆ ಮಾಡಿದ್ದಾರೆ. ಅದೇ ಗ್ರಾಮದ ಸರ್ವೆ ನಂಬರ್ 71/1 ರಲ್ಲಿ ಹತ್ತಿ ಬೆಳೆ ಇದ್ದರೂ ಕೂಡ ಭತ್ತ ಇದೆ ಎಂದು ತಪ್ಪಾಗಿ ಬೆಳೆ ಸಮೀಕ್ಷೆ ಮಾಡಿರುತ್ತಾರೆ ಮತ್ತು ಸರ್ವೆ ನಂಬರ್ 40/ರಲ್ಲಿ ಬೆಳೆ ಸಮೀಕ್ಷೆನೆ ಮಾಡಿರುವುದಿಲ್ಲ.




ಉದಯವಾಹಿನಿ ಚಿತ್ರ

ಹೀಗಾಗಿ ಸರಿಯಾಗಿ ಬೆಳೆ ಸಮೀಕ್ಷೆ ಮಾಡದೆ ಇರುವುದರಿಂದ ಯಾವುದೇ ರೀತಿಯಾದ ಪರಿಹಾರ ಬಂದಿರುವುದಿಲ್ಲ.ಎಂದು ಸದಬ ಗ್ರಾಮದ ರೈತರಾದ ಸೋಮರಾಯ ತಂದೆ ಹಣಮಂತರಾಯ ದೇಸಾಯಿ ರವರು ಆರೋಪ ವ್ಯಕ್ತಪಡಿಸಿದರು. ಶೀಘ್ರವಾಗಿ ಇದಕ್ಕೆ ಸಂಬಂಧಪಟ್ಟ ಮೇಲಾಧಿಕಾರಿಗಳು ಸೂಕ್ಷ್ಮವಾಗಿ ಪರಿಶೀಲನೆ ಮಾಡಿ.ಈ ಒಂದು ಅಕ್ರಮದಲ್ಲಿ ಭಾಗಿಯಾದವರಿಗೆ ಹಾಗೂ ಸದಬ್ ಗ್ರಾಮದ ಬೇಳೆ ಸಮೀಕ್ಷೆಗಾರನಾದ ಸಿದ್ದಪ್ಪ ತಂದೆ ಮಾನಪ್ಪ ಚೌದ್ರಿ, ಮೇಲೆ ಸೂಕ್ತವಾದ ಕಾನೂನು ಕ್ರಮ ಕೈಗೊಳ್ಳಬೇಕು. ರೈತರಿಗೆ ಮೋಸ ಮಾಡಿ ಹಾಗೂ ಸರ್ಕಾರಕ್ಕೆ ವಂಚನೆ ಮಾಡುತ್ತಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ತಾಲ್ಲೂಕಿನ ಸದಬ ಗ್ರಾಮದ ಗ್ರಾಮ ಆಡಳಿತಾಧಿಕಾರಿ ಶೀಘ್ರವಾಗಿ ಸಂಬಂಧಪಟ್ಟ ಮೇಲಾಧಿಕಾರಿಗಳಿಗೆ ಹಾಗೂ ಸರ್ಕಾರದ ಗಮನಕ್ಕೆ ತಂದು ಬೆಳೆ ಪರಿಹಾರ ಬರದೇ ಇರುವ ರೈತರ ಮಾಹಿತಿ ನೀಡಿ ಪರಿಹಾರ ಹಣ ಜಮಾ ಆಗುವಂತೆ ಮಾಡಬೇಕು. ಎಂದು ರೈತರು ಮನವಿ ಮಾಡಿಕೊಂಡರು.

# ಲಕ್ಕುಂಡಿಯಲ್ಲಿ ಬೃಹತ್ ಹಾವು ಪ್ರತ್ಯಕ್ಷ

• ಉದಯವಾಹಿನಿ, ಗದಗ

ನಿಧಿಗಳ ಪತ್ತೆಗಾಗಿ ಲಕ್ಕುಂಡಿಯಲ್ಲಿ ನಡೆಯುತ್ತಿರುವ ಉತ್ಖನನದ ವೇಳೆ ಭಾನುವಾರ ಬೃಹತ್ ಸರ್ಪವೊಂದು ಕಾಣಿಸಿಕೊಂಡಿದ್ದು, ಅಲ್ಲಿದ್ದವರು ಬೆಚ್ಚಿಬಿದ್ದಿದ್ದಾರೆ ಲಕ್ಕುಂಡಿಯಲ್ಲಿ ದೇವಸ್ಥಾನ, ಚಿನ್ನದ ನಾಣ್ಯಗಳನ್ನು ಮುದ್ರಿಸುತ್ತಿದ್ದ ಟಂಕಶಾಲೆ ಸೇರಿದಂತೆ ಹಲವು ಐತಿಹಾಸಿಕ ತಾಣಗಳಿದ್ದು, ಅದು ಮಣ್ಣಿನಲ್ಲಿ ಹೂತುಕೊಂಡಿದೆ ಎಂದು ಹೇಳಿದ್ದರು.

ಅದರಂತೆ ಹಲವಾರು ಹಿಂದಿನ ಕಾಲದ ಪರಿಕರಗಳು ಪತ್ತೆಯಾಗುತ್ತಿವೆ. ಭಾನುವಾರ ಅಗೆಯುವ ವೇಳೆ ದೊಡ್ಡ ಹಾವು ಕಾಣಿಸಿಕೊಂಡು ಎಲ್ಲರೂ ಅಲ್ಲಿಂದ ಓಡಿ ಹೋಗಿದ್ದಾರೆ. ನಿಧಿಯನ್ನು ಸರ್ಪ ಕಾಯುತ್ತಿದೆ ಎಂದು ಗ್ರಾಮಸ್ಥರು ಹೇಳುತ್ತಿದ್ದರು. ಅದು ಈಗ ಸಾಬೀತಾಗಿದೆ ಎಂದು ಕೆಲವರು ತಿಳಿಸಿದ್ದಾರೆ. ಮಳೆಗಾಲದ ಸಂದರ್ಭದಲ್ಲಿ ಚಿನ್ನದ ತುಂಡುಗಳು ಕಾಣಿಸಿಕೊಳ್ಳುತ್ತಿದ್ದು, ಅದರ ಹಿಂದೆ ಹೋದವರು ರಕ್ತ ಕಾರಿ ಸಾಯುತ್ತಿದ್ದರು ಎಂದು ಗ್ರಾಮದ ಹಿರಿಯರು ಹೇಳುತ್ತಿದ್ದು, ಈಗ ಸರ್ಪ ಕಂಡಿರುವುದರಿಂದ ವಿವಿಧ ಅಭಿಪ್ರಾಯಗಳು ವ್ಯಕ್ತವಾಗಿವೆ. ಭಾನುವಾರ ಬೆಳಗ್ಗೆ ಏಕಾಏಕಿ ದೊಡ್ಡ ಗಾತ್ರದ ಸರ್ಪ ಕಾಣಿಸಿಕೊಂಡಿದ್ದರಿಂದ ಸ್ವಾಭಾವಿಕವಾಗಿ ಗ್ರಾಮಸ್ಥರು ಆತಂಕಗೊಂಡಿದ್ದಾರೆ. ಜೆಸಿಬಿ ಚಾಲಕ ಇದನ್ನು ನೋಡಿದ ತಕ್ಷಣ ಇತರರನ್ನು ಎಚ್ಚರಿಸಿ ಅಲ್ಲಿಂದ ಗಾಬರಿಗೊಂಡು ಓಡಿದ್ದಾನೆ. ಈ ದೃಶ್ಯ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ.

# ಬಾಲ್ಯವಿವಾಹ ಶಿಕ್ಷಾರ್ಹ ಅಪರಾಧ

• ಉದಯವಾಹಿನಿ, ನವಲಗುಂದ

ಬಾಲ್ಯ ವಿವಾಹವು ಶಿಕ್ಷಾರ್ಹ ಅಪರಾಧವಾಗಿದೆ, ಈ ಕಾಯ್ದೆಯ ಪ್ರಕಾರ, ಹೆಣ್ಣುಮಕ್ಕಳಿಗೆ ಕನಿಷ್ಠ 18 ವರ್ಷ ಮತ್ತು ಗಂಡು ಮಕ್ಕಳಿಗೆ 21 ವರ್ಷ ಪೂರ್ಣಗೊಳ್ಳುವ ಮೊದಲು ಮದುವೆ ಮಾಡುವುದು ಕಾನೂನು ಬಾಹಿರವಾಗಿದೆ ಎಂದು ಧಾರವಾಡ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಮಾಜ ಕಾರ್ಯಕರ್ತ ಕರೆಪ್ಪ ಕೌಜಲಗಿ ಅಭಿಪ್ರಾಯ ವ್ಯಕ್ತಪಡಿಸಿದರು. ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂಬರ-3ರಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ವಿವಿಧ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಬಾಲ್ಯ ವಿವಾಹ ಮುಕ್ತ ಭಾರತ ಅಭಿಯಾನ ಹಾಗೂ ಭೇಟಿ ಭಚಾವೋ ಭೇಟಿ ಪಡಾವೋ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು ಬಾಲ್ಯ ವಿವಾಹದಲ್ಲಿ ಭಾಗವಹಿಸುವವರು, ಮಾಡುವವರು, ಪ್ರೋತ್ಸಾಹಿಸುವವರು 2 ವರ್ಷ ಜೈಲು ಶಿಕ್ಷೆ ಅಥವಾ ಒಂದು ಲಕ್ಷ ದಂಡ ಅಥವಾ ಎರಡಕ್ಕೂ ಗುರಿಯಾಗುತ್ತಾರೆ, ಬಾಲ್ಯ ವಿವಾಹ ತಪ್ಪಿಸಲು ಮಕ್ಕಳ ಸಹಾಯವಾಣಿ 1098ಕ್ಕೇ ಕರೆ ಮಾಡಿ ಮಾಹಿತಿ ನೀಡಬಹುದು ಎಂದರು.

ಎಸ್.ಡಿ.ಎಂ.ಸಿ ಸದಸ್ಯ ಮಾಬುಸಾಬ ಯರಗುಪ್ಪಿ ಮಾತನಾಡಿ ಹದಿನೆಂಟು ವರ್ಷದೊಳಗಿನ ಹೆಣ್ಣು ಮಕ್ಕಳನ್ನು ಲೈಂಗಿಕ ದೌರ್ಜನ್ಯ, ಕಿರುಕುಳ ಮತ್ತು ಶೋಷಣೆಯಿಂದ ರಕ್ಷಿಸಲು ಸರ್ಕಾರ ಪೋಕ್ಸೋದಂತಹ ಕಾನೂನು ಜಾರಿಗೆ ತಂದಿದ್ದು, ಅದು ಅಪರಾಧಿಗಳಿಗೆ ಕಠಿಣ ಶಿಕ್ಷೆ ವಿಧಿಸುತ್ತದೆ ಮತ್ತು ಮಕ್ಕಳಿಗೆ ಸ್ನೇಹಪರವಾದ ವಾತಾವರಣವನ್ನು ಒದಗಿಸುತ್ತದೆ, ಹೆಣ್ಣು ಮಕ್ಕಳ ಸುರಕ್ಷತೆಗಾಗಿ ಶಿಕ್ಷಣ, ಜಾಗೃತಿ, ಕೌಶಲ್ಯ ತರಬೇತಿ ಮತ್ತು ಕಾನೂನಿನ ಅರಿವು ಅತ್ಯಗತ್ಯ, ಹೆಣ್ಣು ಮಕ್ಕಳ ಸುರಕ್ಷತೆ ಪ್ರತಿಯೊಬ್ಬರ ಜವಾಬ್ದಾರಿ ಆಗಿದೆ ಎಂದರು.



ಉದಯವಾಹಿನಿ ಚಿತ್ರ

# ಜಾಗತಿಕ ಮಾರುಕಟ್ಟೆಗೆ ಕೃತಕ ಬುದ್ಧಿಮತ್ತೆಯ ಸೇವೆ

• ಉದಯವಾಹಿನಿ, ಬಳ್ಳಾರಿ

ಜಾಗತಿಕ ವ್ಯವಹಾರ ಪರಿಸರದಲ್ಲಿ ಕೃತಕ ಬುದ್ಧಿಮತ್ತೆಯಂತಹ ತಂತ್ರಜ್ಞಾನಗಳ ಆವಿಷ್ಕಾರಗಳು ಉದಯೋನ್ಮುಖ ಮಾರುಕಟ್ಟೆಯಲ್ಲಿ ಪ್ರಮುಖವಾದ ಪಾತ್ರವನ್ನು ವಹಿಸುತ್ತವೆ ಎಂದು ಸತ್ಯಸಾಯಿ ಡೀಮ್ಡ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಸಾಯಿ ಗಿರಿಧರ್ ಅಭಿಪ್ರಾಯ ಪಟ್ಟರು. ನಗರದ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ರೂಸಾ ಅನುದಾನದಡಿಯಲ್ಲಿ ವಾಣಿಜ್ಯ, ನಿರ್ವಹಣಾಶಾಸ್ತ್ರ ವಿಭಾಗದ ವತಿಯಿಂದ ಆಯೋಜಿಸಿದ್ದ ಜಾಗತಿಕ ವ್ಯವಹಾರ ಪರಿಸರದಲ್ಲಿ ಪ್ರಮುಖ ಉದಯೋನ್ಮುಖ ಪ್ರವೃತ್ತಿಗಳು ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.

ಭಾರತ ಚೀನಾ ಮುಂತಾದ ದೇಶಗಳು ಅಂತರಾಷ್ಟ್ರೀಯ ವ್ಯಾಪಾರಕ್ಕೆ ಹೊಸ ಅವಕಾಶಗಳು ಸೃಷ್ಟಿಸುತ್ತಿವೆ, ನಾವಿನ್ಯತೆಗಳ ಕೇಂದ್ರಗಳಾಗಿವೆ ಎಂದ ಅವರು ಈ ಪ್ರವೃತ್ತಿಗಳು ವ್ಯವಹಾರಗಳಿಗೆ ಹೊಸ ಅವಕಾಶಗಳನ್ನು ನೀಡುವುದರ ಜೊತೆಗೆ ಸ್ಪರ್ಧಾತ್ಮಕವಾಗಿರಲು ಮತ್ತು ಬದಲಾಗುತ್ತಿರುವ ಜಾಗತಿಕ ಪರಿಸರಕ್ಕೆ ಹೊಂದಿಕೊಳ್ಳಲು ಸವಾಲುಗಳನ್ನು ಸಹ ಒಡ್ಡುತ್ತವೆ ಎಂದು ವಿಶ್ಲೇಷಿಸಿದರು.



ಉದಯವಾಹಿನಿ ಚಿತ್ರ

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ. ಸದೋಜಾತಪ್ಪ ಆರ್ಥಿಕವಾಗಿ ಸಬಲವಾದ ರಾಷ್ಟ್ರಗಳು ಇತರೆ ಸಣ್ಣ ಪುಟ್ಟ ರಾಷ್ಟ್ರಗಳನ್ನು ಬೆದರಿಸಿ ಸಾಮ್ರಾಜ್ಯ ಶಾಹಿ ಧೋರಣೆ ತೋರುತ್ತವೆ. ಅಮೆರಿಕವು ಇತ್ತೀಚಿಗೆ ವೆನೆಜುವೆಲಾ ರಾಷ್ಟ್ರದ ಅಧ್ಯಕ್ಷರನ್ನು ಅಪಹರಿಸಿರುವುದನ್ನು ಗಮನಿಸಬಹುದು ಎಂದರು. ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲ ಡಾ.ಜಿ.ಪ್ರಹ್ಲಾದ್ ಚೌದ್ರಿ, ಇಂತಹ ವಿಚಾರ ಸಂಕಿರಣಗಳು ವಿದ್ಯಾರ್ಥಿಗಳಿಗೆ ಅಂತರಾಷ್ಟ್ರೀಯ ಮಟ್ಟದ ಆರ್ಥಿಕ ವ್ಯವಹಾರಗಳ ಆಲೋಚನಾಕ್ರಮಗಳನ್ನು ತಿಳಿಯಲು ನೆರವಾಗುತ್ತವೆ ಎಂದರು.

# ಮರಳು ದಂಧೆಗೆ ಬ್ರೇಕ್ ಹಾಕಿದ ಎಸಿ ರಾಜೇಶ್

• ಉದಯವಾಹಿನಿ, ಬಳ್ಳಾರಿ

ಇತ್ತೀಚೆಗೆ ನಗರದ ಲಾಲ ಕಮಾನ್ ಸ್ಟೋರ್‌ನಲ್ಲಿ ರಾತ್ರಿವೇಳೆ ನಡೆಯುತ್ತಿದ್ದ ಅಕ್ರಮ ಅಕ್ಕಿ ದಂಧೆ ಮೇಲೆ ದಾಳಿ ಮಾಡಿದ್ದ ಕಂದಾಯ ಇಲಾಖೆಯ ಎಸಿ ರಾಜೇಶ್ ಹೆಚ್.ಡಿ.ಅವರು ರಾತ್ರಿ ಅಕ್ರಮ ಮರಳು ಸಾಗಾಣೆಯ ದಂಧೆ ಮೇಲೆ ದಾಳಿ ಮಾಡಿ 23 ಎತ್ತಿನ ಬಂಡಿ ಮತ್ತು ಒಂದು ಟ್ರ್ಯಾಕ್ಟರ್ ಸೀಜ್ ಮಾಡಿದ್ದಾರೆ. ತಾಲ್ಲೂಕಿನ ಮೋಕ, ಮತ್ತು ರೂಪನಗುಡಿ ಗ್ರಾಮದ ಬಳಿ ಹಗರಿ ನದಿಯಿಂದ ಬಳ್ಳಾರಿಗೆ ಎತ್ತಿನ ಬಂಡಿಗಳಲ್ಲಿ ಅಕ್ರಮವಾಗಿ ಮರಳು ಸಾಗಾಣಿಕೆ ನಡೆಯುತ್ತಿತ್ತು. ಇದು ಕಳೆದ ಅನೇಕ ತಿಂಗಳಿಂದಲೂ ನಡೆಯುತ್ತಿತ್ತು. ಈ ಮೊದಲು ಎತ್ತಿನ ಬಂಡಿಯಲ್ಲಿ ಹಗರಿ ನದಿ ದಂಡೆಯ ಗ್ರಾಮಗಳ ಕೆಲ ಜನತೆ ತಮ್ಮ ಗ್ರಾಮಗಳಿಗೆ ತಂದು ಸಂಗ್ರಹಿಸಿಕೊಂಡು 500 ರೂ ಗೆ ಒಂದು ಬಂಡಿಯಂತೆ ಮಾರಾಟ ಮಾಡುತ್ತಿದ್ದರು. ಇದು ಹಗಲು ವೇಳೆಯಲ್ಲಿಯೇ ಸಣ್ಣದಾಗಿ ನಡೆಯುತ್ತಿತ್ತು. ಇದಕ್ಕೆ ಅಧಿಕಾರಿಗಳಿಂದ ಆಕ್ಷೇಪ ಬರದ ಕಾರಣ ಇದನ್ನೇ ದಂಧೆಯಾಗಿ ಜನಪ್ರತಿನಿಧಿಗಳ ಬೆಂಬಲಿಗರು ಮರಳನ್ನು ಬಳ್ಳಾರಿ ನಗರದ ಸುತ್ತಮುತ್ತಲ ಪ್ರದೇಶಕ್ಕೆ ತರುವಂತೆ ಮಾಡಿ. ಒಂದು ಬಂಡಿಗೆ 2 ವರೆ ಸಾವಿರದಿಂದ 3 ಸಾವಿರ ರೂಗೆ ನೀಡ ತೊಡಗಿದರು. ಈ ಮೊದಲು ಹಗಲು ವೇಳೆ ನಡೆಯುತ್ತಿದ್ದುದು. ದಿನಕ್ಕ ಎರೆಡು ಮೂರು ಬಂಡಿ ಸಾಗಾಣೆ ಮಾಡಲು ಈ ದಂಧೆ ರಾತ್ರಿ ಶುರುವಾಯ್ತು. ಇದರಿಂದ ಹಳ್ಳಿ ಜನತೆ ದುಡಿಮೆ ಹೆಚ್ಚಿಸಿಕೊಂಡರು.



ಉದಯವಾಹಿನಿ ಚಿತ್ರ

ಬಳ್ಳಾರಿ ಸುತ್ತಮುತ್ತ ತಂದು ಹಾಕುತ್ತಿದ್ದ ಮರಳನ್ನು ದಂಧೆ ಕೋರರು ನಂತರ ನಗರಕ್ಕೆ ಸಾಗಾಟ ಮಾಡುತ್ತಿದ್ದರು. ಹಾಗೆ ಮಾಡುವಾಗ ಕೆಳಗಡೆ ಮರಳು ಹಾಕಿ ಮೇಲ್ಭಾಗದ ಒಂದು ಪದರು ಮಾತ್ರ ಸ್ಟೋನ್‌ಡಸ್ಟ್ ಹಾಕಿರುತ್ತಿದ್ದರು. ಲಾಭದಾಯಕವಾಗಿ ನಡೆಯುತ್ತಿದ್ದ ಈ ದಂಧೆಯನ್ನು ಪ್ರಶ್ನಿಸಿ ಮೋಕಾ ಮತ್ತು ಹಗರಿ ಪೊಲೀಸ್ ಠಾಣೆಯ ಪೊಲೀಸರು ತಮಗಿಷ್ಟು ಎಂದು ನಿಗಧಿ ಮಾಡಿಕೊಂಡರು.

ಎಗ್ಗಿಲ್ಲದೆ ನಡೆಯುತ್ತಿದ್ದ ಈ ಅಕ್ರಮ ದಂಧೆಗೆ ಜಮೀನಿನಲ್ಲಿ ದುಡಿಯಬೇಕಾದ ಎತ್ತುಗಳನ್ನು ಬಳಸಿ ಅವುಗಳಿಗೂ ಹಿಂಸೆ ಮಾಡಲಾಗುತ್ತಿತ್ತು. ಈ ಬಗ್ಗೆ ಅರಿತುಕೊಂಡ ಎಸಿ ರಾಜೇಶ್ ಹೆಚ್.ಡಿ.ಅವರು ನಿನ್ನೆ ರಾತ್ರಿ ತಾಲ್ಲೂಕಿನ ಮೋಕಾ ರಸ್ತೆಯ ಟೋಲ್ ಬಳಿ ತಮ್ಮ ಸಿಬ್ಬಂದಿ ಜೊತೆ ದಾಳಿಮಾಡಿ. 23 ಎತ್ತಿನ ಬಂಡಿಗಳನ್ನು ಮತ್ತು ಒಂದು ಟ್ರ್ಯಾಕ್ಟರ್ ಅನ್ನು ಮರಳು ಸಮೇತ ಸೀಜ್ ಮಾಡಿದ್ದಾರೆ. ಎತ್ತಿನ ಬಂಡಿಯಲ್ಲಿ ಮರಳು ಸಾಗಾಟ ಮಾಡುತ್ತಿದ್ದವರನ್ನು ವಿಚಾರಿಸಿದರೆ ಸಿದ್ದಪ್ಪ, ಉಮೇಶ್ ಎಂಬುವವರು ಇದರ ಸೂತ್ರದಾರರು ಎಂದು ಹೇಳಿದ್ದಾರೆ.

# ಕಾಫಿ ತೋಟಕ್ಕೆ ನುಗ್ಗಿದ ಕಾಡುಕೋಣಗಳು



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಕ್ಕಮಗಳೂರು

ಕಾಫಿನಾಡಿನಲ್ಲಿ ದಿನದಿಂದ ದಿನಕ್ಕೆ ಕಾಡುಪ್ರಾಣಿಗಳ ಹಾವಳಿ ಮಿತಿಮೀರುತ್ತಿದ್ದು, ಕಾಫಿ ಬೆಳೆಗಾರರು ಹಾಗೂ ಗ್ರಾಮಸ್ಥರು ಅಕ್ಷರಶಃ ಹೈರಾಣಾಗಿದ್ದಾರೆ. ತಾಲ್ಲೂಕಿನ ಬೆಟ್ಟದಮಳಲಿ ಗ್ರಾಮದ ಕಾಫಿ ತೋಟವೊಂದರಲ್ಲಿ ಕಾಡುಕೋಣಗಳ ಹಿಂಡು ಪ್ರತ್ಯಕ್ಷವಾಗಿದ್ದು, ಆತಂಕ ಮನೆ ಮಾಡಿದೆ. ಕಾಡುಕೋಣಗಳು ಏಕಾಏಕಿ ತೋಟಕ್ಕೆ ಲಗ್ಗೆ ಇಟ್ಟಿರುವುದರಿಂದ ಕಾರ್ಮಿಕರು ಕೆಲಸಕ್ಕೆ ಹೋಗಲು ಭಯಪಡುವಂತಾಗಿದೆ. ಕಾಫಿ ಕೊಯ್ಲಿನ ಈ ಪ್ರಮುಖ ಸಮಯದಲ್ಲಿ ಕಾಡುಕೋಣಗಳು ತೋಟದಲ್ಲೇ ಬೀಡು ಬಿಟ್ಟಿರುವುದರಿಂದ ಬೆಳೆ ಹಾನಿಯಾಗುವ ಭೀತಿಯೂ ಎದುರಾಗಿದೆ.

ಈಗಾಗಲೇ ಜಿಲ್ಲೆಯ ಹಲವೆಡೆ ಕಾಡುಕೋಣಗಳ ದಾಳಿಯಿಂದ ಪ್ರಾಣಹಾನಿ ಸಂಭವಿಸಿರುವ ಬೆನ್ನಲ್ಲೇ, ಬೆಟ್ಟದಮಳಲಿ ಗ್ರಾಮದಲ್ಲಿ ಹಿಂಡು ಹಿಂಡಾಗಿ ಕಾಡುಕೋಣಗಳು ಕಾಣಿಸಿಕೊಂಡಿರುವುದು ಜನರನ್ನು ಆತಂಕದ ಸುಳಿಗೆ ದೂಡಿದೆ. ಅರಣ್ಯ ಇಲಾಖೆಯು ಕೂಡಲೇ ಎಚ್ಚೆತ್ತುಕೊಂಡು ಈ ಕಾಡುಕೋಣಗಳನ್ನು ಅರಣ್ಯಕ್ಕೆ ಅಟ್ಟಲು ಕ್ರಮ ಕೈಗೊಳ್ಳಬೇಕು ಹಾಗೂ ರೈತರ ಜೀವ ಮತ್ತು ಬೆಳೆಗೆ ರಕ್ಷಣೆ ನೀಡಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

## ಮುಚ್ಚುವ ಹಂತದಲ್ಲಿದ್ದ ಶಾಲೆಗಳಿಗೆ ಮಕ್ಕಳನ್ನು ಸೇರಿಸಿ ಕನ್ನಡ ಪ್ರೇಮ ಮೆರೆದ ಮುಸ್ಲಿಂ ಕುಟುಂಬಗಳು

# ಖಾಸಗಿ ಶಿಕ್ಷಣ ಸಂಸ್ಥೆಗಳ ಜತೆಗೆ ಪೈಪೋಟಿ

• ಉದಯವಾಹಿನಿ, ಹರಪನಹಳ್ಳಿ

ರಾಮನಗರ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸುವ ಮೂಲಕ ಹರಪನಹಳ್ಳಿ ತಾಲ್ಲೂಕಿನಲ್ಲೇ ಸತತ 2 ನೇ ಸ್ಥಾನ ಗಿಟ್ಟಿಸಿಕೊಂಡಿದೆ. ದಾಖಲಾತಿ ಕೊರತೆಯಿಂದ ಸರಕಾರಿ ಶಾಲೆ ಮುಚ್ಚುವ ಆತಂಕದ ನಡುವೆಯೂ ಈ ಕಿರಿಯ ಪ್ರಾಥಮಿಕ ಶಾಲೆಯೂ ಸಾಧನೆ ಮಾಡಿದೆ. ಶಾಲೆಯಲ್ಲಿ 1 ನೇ ತರಗತಿಯಿಂದ 5 ನೇ ತರಗತಿ ಮಕ್ಕಳು ಅಧ್ಯಯನ ಮಾಡುತ್ತಿದ್ದಾರೆ.

ಒಟ್ಟು 121 ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, ಶಾಲೆಯಲ್ಲಿ 7 ಶಿಕ್ಷಕರಿದ್ದಾರೆ. ಗುಣಮಟ್ಟದ ಶಿಕ್ಷಣ, ಕಟ್ಟಡ, ಉತ್ತಮ ವಾತಾವರಣದ ಮೂಲಕ ಖಾಸಗಿ ಶಿಕ್ಷಣ ಸಂಸ್ಥೆಗಳ ಜತೆಗೆ ಪೈಪೋಟಿ ನೀಡಿದೆ. ಮಕ್ಕಳನ್ನು ಆಕರ್ಷಿಸಲು ಖಾಸಗಿ ಶಾಲೆ ಮಕ್ಕಳಂತೆ ಸಮವಸ್ತ್ರ, ಶಿಸ್ತು, ಸಾಂಸ್ಕೃತಿಕ ಕಾರ್ಯಕ್ರಮದ ಜತೆಗೆ ಪಠ್ಯೇತರ ಚಟುವಟಿಕೆಗಳ ಮೂಲಕ ಗಮನಸೆಳೆದಿದೆ.

**ಸೌಲಭ್ಯ:** ಶಾಲೆಗೆ ಹೈಟೆಕ್ ಶೌಚಾಲಯ, ಪ್ರಯೋಗಾಲಯ, ಕೈ ತೋಟ, ಗಣಕಯಂತ್ರ, ಅತ್ಯಾಧುನಿಕ ತಂತ್ರಜ್ಞಾನ ಸೌಲಭ್ಯ ಹೊಂದುವ ಮೂಲಕ ಪೋಷಕರ ಗಮನಸೆಳೆದಿದೆ. ಶಾಲೆಯಲ್ಲಿದೇಣಿಗೆ ರೂಪದಲ್ಲಿ500 ಲೀಟರ್ ಸಾಮರ್ಥ್ಯದ ಟ್ಯಾಂಕರ್, 100 ಲೀಟರ್ ಸಾಮರ್ಥ್ಯದ ಶುದ್ಧ ಕುಡಿಯುವ ನೀರಿನ ಘಟಕ ಹೊಂದಿದೆ. ಶಾಲಾ ಕಾಂಪೌಂಡ್, ಕಲಿಕೆಗೆ ಆದ್ಯತೆ ನೀಡಲಾಗಿದೆ. ಶಾಲಾ ಆವರಣದಲ್ಲಿ ಮಾಜಿ ರಾಷ್ಟ್ರಪತಿ ಎಪಿಜೆ ಅಬ್ದುಲ್ ಕಲಾಂ ಪುತ್ಥಳಿ ಅನಾವರಣ ಹಾಗೂ ಹೈಟೆಕ್ ಅಡುಗೆ ಕೋಣೆ ನಿರ್ಮಿಸಲಾಗಿದೆ.

**ಕನ್ನಡ ಶಾಲಾ ಅಭಿಮಾನ :** ರಾಮನಗರ ಗ್ರಾಮದಲ್ಲಿ ಮುಸ್ಲಿಂ ಬಾಂಧವರ 180 ಕುಟುಂಬಗಳಿವೆ. ಆದರೆ ಉರ್ದು ಶಾಲೆಯ ಗೋಜಿಗೆ ಹೋಗದೆ, ಕನ್ನಡ ಶಾಲೆ ಪ್ರೇಮ ಮೆರೆದಿದ್ದಾರೆ. ಗ್ರಾಮದ ಸಮೀಪದಲ್ಲೇ ಉಚ್ಚಂಗಿದುರ್ಗ, ಅಣಜಿ, ದಾವಣಗೆರೆಯಲ್ಲಿ ಪ್ರತಿಷ್ಠಿತ ವಿದ್ಯಾಸಂಸ್ಥೆ, ಉರ್ದು ಶಾಲೆಗಳಿದ್ದರೂ ಪೋಷಕರು ಖಾಸಗಿ ಶಾಲೆಗೆ ಮಕ್ಕಳನ್ನು ದಾಖಲಿಸದೆ, ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ದಾಖಲಿಸುವ ಮೂಲಕ ಕನ್ನಡ ಶಾಲಾ ಅಭಿಮಾನ ಮೆರೆದಿದ್ದಾರೆ. ಹರಪನಹಳ್ಳಿ ತಾಲ್ಲೂಕಿನ ಚಿಗಟೇರಿ ಹೋಬಳಿಯ ಚಿಗಟೇರಿ ಮ್ಯಾಸರಹಟ್ಟಿ ದಾಖಲಾತಿ ಹೆಚ್ಚಳದಲ್ಲಿ ಪ್ರಥಮ ಸ್ಥಾನ ಪಡೆದುಕೊಂಡಿದ್ದರೆ, ರಾಮನಗರ ಸರಕಾರಿ ಶಾಲೆಯೂ 2ನೇ ಸ್ಥಾನ ಪಡೆದುಕೊಂಡಿದೆ.

### ಜಿಲ್ಲೆಯಲ್ಲಿ 2ನೇ ಸ್ಥಾನ

**ಹರಪನಹಳ್ಳಿ ತಾಲ್ಲೂಕಿನ ರಾಮನಗರ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ದಾಖಲಾತಿ ಹೆಚ್ಚಳದಲ್ಲಿ ಸತತ ಎರಡನೇ ಬಾರಿಗೆ ಜಿಲ್ಲೆಯಲ್ಲಿ 2ನೇ ಸ್ಥಾನ ಪಡೆದುಕೊಂಡಿದೆ. ಗುಣಮಟ್ಟದ ಶಿಕ್ಷಣ, ಆಧುನಿಕ ಸೌಲಭ್ಯಗಳು ಮತ್ತು ಗ್ರಾಮಸ್ಥರ ಸಹಭಾಗಿತ್ವದಿಂದ ಖಾಸಗಿ ಶಾಲೆಗಳೊಂದಿಗೆ ಸ್ಪರ್ಧಿಸಿ ಈ ಸಾಧನೆ ಮಾಡಿದೆ.**



ಉದಯವಾಹಿನಿ ಚಿತ್ರ

> **ಕಿರಿಯ ಪ್ರಾಥಮಿಕ ಶಾಲಾ ದಾಖಲಾತಿಯಲ್ಲಿ ರಾಮನಗರ ಶಾಲೆ 2ನೇ ಸ್ಥಾನದಲ್ಲಿದೆ. ಡಯಟ್ ಸರ್ವೆ ತಂಡ ಪ್ರಥಮ ಸ್ಥಾನ ನೀಡಿದ್ದು, ಶಾಲೆಯ ಮತ್ತೊಂದು ಗರಿ.**
>
> **-ಎಂ.ಎಂ.ಚಂದ್ರಪ್ಪ, ಶಿಕ್ಷಕರು, ಸರಕಾರಿ ಕಿರಿಯ ಪ್ರಾಥಮಿಕ ಶಾಲೆ, ರಾಮನಗರ**

> **ಗುಣಮಟ್ಟದ ಶಿಕ್ಷಣ, ಪುಸ್ತಕ ವಿತರಣೆ, ಬಿಸಿಯೂಟ ಯೋಜನೆ ಸೇರಿ ಮೂಲ ಸೌಲಭ್ಯ ಸಿಗುವುದರಿಂದ ಬೇರೆ ಶಾಲೆ ಅವಶ್ಯಕತೆ ಇಲ್ಲ. ಕನ್ನಡ ಶಾಲೆಯಲ್ಲಿ ಮಕ್ಕಳನ್ನು ಓದಿಸುತ್ತಿರುವುದು ಹೆಮ್ಮೆ ಪಡುತ್ತೇವೆ.**
>
> **– ಸಿ.ಗೌಸ್ ಪೀರ್ ಸಾಬ್, ಅಧ್ಯಕ್ಷ, ಎಸ್‌ಡಿಎಂಸಿ, ರಾಮನಗರ**

> **ಗ್ರಾಮಸ್ಥರ ಸಹಭಾಗಿತ್ವದಲ್ಲಿ ಶಾಲಾ ವಾತಾವರಣದಿಂದ ದಾಖಲಾತಿ ಏರಿಕೆಗೆ ಸಹಕಾರಿಯಾಗಿದೆ. ಗ್ರಾಮಸ್ಥರ ಕನ್ನಡ ಪ್ರೇಮ ಗಮನಾರ್ಹ.**
>
> **– ಎಚ್.ಲೇಪಾಕ್ಷಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ**

# ಲ್ಯಾಂಡ್ ಲಾರ್ಡ್ ಟ್ರೈಲರ್: ಇದು ದಮಮಿತರ ಸಿಟ್ಟಿನ ಕತೆ

ದುನಿಯಾ ವಿಜಯ್ ನಟನೆಯ 'ಲ್ಯಾಂಡ್‌ಲಾರ್ಡ್' ಸಿನಿಮಾದ ಟ್ರೈಲರ್ ಬಿಡುಗಡೆ ಆಗಿದೆ. ಕನ್ನಡ ಚಿತ್ರರಂಗದ ಯಶಸ್ವಿ ಕತೆಗಾರ ಜಡೇಶ್ ಹಂಪಿ ನಿರ್ದೇಶನ ಮಾಡಿರುವ ಈ ಸಿನಿಮಾ ಭೂಮಾಲೀಕರ ತುಳಿತಕ್ಕೆ ಒಳಗಾದವರ ಕತೆಯನ್ನು ಒಳಗೊಂಡಿರುವುದು ಟ್ರೈಲರ್‌ನಿಂದ ಗೊತ್ತಾಗುತ್ತಿದೆ. ಜಡೇಶ್ ಅವರ ನೆಚ್ಚಿನ ಜಾನರ್ ಇದಾಗಿದ್ದು, ಈ ಹಿಂದೆ ಜಡೇಶ್ ಅವರೇ ಕತೆ ಬರೆದಿದ್ದ 'ಕಾಟೇರ' ಸಿನಿಮಾದ ಕತೆಯೂ ಇದೇ ಮಾದರಿಯದ್ದಾಗಿತ್ತು. 'ಲ್ಯಾಂಡ್ ಲಾರ್ಡ್' ಟ್ರೈಲರ್ ಇದೀಗ ಬಿಡುಗಡೆ ಆಗಿದ್ದು, ತಮಿಳಿನ ರಾಷ್ಟ್ರಪ್ರಶಸ್ತಿ ವಿಜೇತ ಸಿನಿಮಾ 'ಅಸುರನ್' ಅನ್ನು ನೆನಪಿಸುತ್ತಿದೆ ಈ ಸಿನಿಮಾ.

ಲ್ಯಾಂಡ್‌ಲಾರ್ಡ್ ಸಿನಿಮಾ ಹೆಸರೇ ಸೂಚಿಸುತ್ತಿರುವಂತೆ ಭೂಮಾಲಿಕರ ದರ್ಪದ ಕತೆ. ಜೀತದಾಳುಗಳ ನೋವಿನ ಕತೆ. ದುನಿಯಾ ವಿಜಯ್ ಅವರು ತಮ್ಮ ಇತರೆ ಕೆಲ ಸಿನಿಮಾಗಳಿಗಿಂತಲೂ ಭಿನ್ನವಾದ ರೀತಿಯ ಪಾತ್ರದಲ್ಲಿ ನಟಿಸಿದ್ದಾರೆ. ದುನಿಯಾ ವಿಜಯ್ ಇಲ್ಲಿ ವಯಸ್ಸಾದ ವ್ಯಕ್ತಿಯ ಪಾತ್ರದಲ್ಲಿ ನಟಿಸಿದ್ದಾರೆ ಆದರೆ ಸಿನಿಮಾಕ್ಕೆ ಅವರೇ ನಾಯಕ. ಅಮಾನವೀಯ, ಅಹಂಕಾರಿ ಭೂಮಾಲೀಕನ ಪಾತ್ರದಲ್ಲಿ ರಾಜ್ ಬಿ ಶೆಟ್ಟಿ ನಟಿಸಿದ್ದು, ರಾಜ್ ವಿಲನ್ ಆಗಿಯೂ ಸಖತ್ ಗಮನ ಸೆಳೆದಿರುವುದು ಟ್ರೈಲರ್‌ನಲ್ಲಿಯೇ ತಿಳಿದು ಬರುತ್ತಿದೆ.

ಟ್ರೈಲರ್ ಹೆಚ್ಚು ವಿಷಯಗಳನ್ನು ಬಿಟ್ಟುಕೊಟ್ಟಿಲ್ಲವಾದರೂ ಭೂಮಾಲೀಕರ ದೌರ್ಜನ್ಯಕ್ಕೆ ಒಳಗಾಗುವ ಕುಟುಂಬವೊಂದು ಅದನ್ನು ಮೆಟ್ಟಿ ನಿಲ್ಲುವ ಜೊತೆಗೆ ತಮ್ಮಂತೆ ಸಂತ್ರಸ್ತರಾದವರಲ್ಲಿ ಶಕ್ತಿ, ಮಾಹಿತಿ ತುಂಬುವ ಕತೆಯಿಂಬೆದು ತಿಳಿಯುತ್ತು ಇದೆ.

**ಭೂಮಾಲೀಕರ ತುಳಿತಕ್ಕೆ ಒಳಗಾದವರ ಕತೆ**



ಸಿನಿಮಾನಲ್ಲಿ ವಿಜಯ್ ಪುತ್ರಿ ರಿತನ್ಯ ಅವರು ನಟಿಸಿದ್ದು, ಪೊಲೀಸ್ ಕಾನ್‌ಸ್ಟೇಬಲ್ ಪಾತ್ರದಲ್ಲಿ ಅವರು ಕಾಣಿಸಿಕೊಂಡಿದ್ದಾರೆ. ಯುವ ನಟ ಶಿಶಿರ್ ಬೈಕಾಡಿ ಪಾತ್ರವೂ ಗಮನ ಸೆಳೆಯುತ್ತಿದೆ. ರಾಕೇಶ್ ಅಡಿಗ ಸಹ ಸಖತ್ ವಿಲನಿಶ್ ಆಗಿ ಕಾಣಿಸಿಕೊಂಡಿದ್ದಾರೆ. ನಟಿ ರಚಿತಾ ರಾಮ್ ಪಾತ್ರವೂ ಖಡಕ್ ಆಗಿದೆ.

ಟ್ರೈಲರ್‌ನಲ್ಲಿ ಕೆಲವು ಅದ್ದೂರಿ ಆಕ್ಷನ್ ದೃಶ್ಯಗಳು, ಕೆಲವು ಹಾಸ್ಯ ದೃಶ್ಯಗಳ ಝಲಕ್, ಹಾಡುಗಳು, ವಿಲನ್‌ನ ಅಬ್ಬರವನ್ನು ತೋರಿಸಲಾಗಿದೆ. ಒಟ್ಟಾರೆಯಾಗಿ ಜಡೇಶ ಅವರು ದಮನಿತರ ಸಿಟ್ಟಿನ ಕತೆಯನ್ನು ಆಕ್ಷನ್ ಲೇಪದೊಂದಿಗೆ ತೆರೆಗೆ ತಂದಿರುವುದು ಟ್ರೈಲರ್‌ನಿಂದ ತಿಳಿದು ಬರುತ್ತಿದೆ. ಸಿನಿಮಾಕ್ಕೆ ಹೇಮಂತ್ ಗೌಡ ಮತ್ತು ಕೆವಿ ಸಂಪತ್ ಅವರು ಬಂಡವಾಳ ಹೂಡಿದ್ದಾರೆ. ಸಂಗೀತ ನೀಡಿರುವುದು ಅಜನೀಶ್ ಲೋಕನಾಥ್. ಸಂಭಾಷಣೆ ಬರೆದಿರುವುದು ಮಾಸ್ತಿ ಉಪ್ಪಾರಹಳ್ಳಿ. ಸಿನಿಮಾ ಜನವರಿ 23ಕ್ಕೆ ತೆರೆಗೆ ಬರಲಿದೆ.





# ಸೈಬರ್ ಕಿಡಿಗೇಡಿಗಳ ವಿರುದ್ಧ ನಟಿ ಅನಸೂಯಾ ಭಾರದ್ವಾಜ್ ಯುದ್ಧ

ಟಾಲಿವುಡ್‌ನ ಖ್ಯಾತ ನಟಿ ಮತ್ತು ಜನಪ್ರಿಯ ನಿರೂಪಕಿ ಅನಸೂಯಾ ಭಾರದ್ವಾಜ್ ಇತ್ತೀಚಿನ ದಿನಗಳಲ್ಲಿ ಸೋಷಿಯಲ್ ಮೀಡಿಯಾದಲ್ಲಿ ನಡೆಯುತ್ತಿರುವ ಕಿರುಕುಳದ ವಿರುದ್ಧ ಅತ್ಯಂತ ಕಠಿಣ ಮತ್ತು ದಿಟ್ಟ ಹೆಜ್ಜೆ ಇಟ್ಟಿದ್ದಾರೆ. ತಮ್ಮ ಘನತೆಗೆ ಧಕ್ಕೆ ತರುತ್ತಿದ್ದ ಕಿಡಿಗೇಡಿಗಳಿಗೆ ತಕ್ಕ ಪಾಠ ಕಲಿಸಲು ಅವರು ಕಾನೂನಿನ ಮೊರೆ ಹೋಗಿದ್ದಾರೆ. ಅನಸೂಯಾ ಅವರು ಸೈಬರ್ ಕ್ರೈಂ ಪೊಲೀಸರಿಗೆ ನೀಡಿರುವ ದೂರಿನ ಪ್ರಕಾರ, ಕಳೆದ ಕೆಲವು ಸಮಯದಿಂದ ಸೋಷಿಯಲ್ ಮೀಡಿಯಾದಲ್ಲಿ ಅವರ ವಿರುದ್ಧ ಕೇವಲ ಟ್ರೋಲಿಂಗ್ ನಡೆಯುತ್ತಿರಲಿಲ್ಲ, ಬದಲಾಗಿ ಅದು ಲೈಂಗಿಕ ದೌರ್ಜನ್ಯದ ಮಟ್ಟಕ್ಕೆ ತಲುಪಿತ್ತು. ಕಿಡಿಗೇಡಿಗಳು ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಬಳಸಿ ಅನಸೂಯಾ ಅವರ ಮುಖವನ್ನು ಅಶ್ಲೀಲ ವಿಡಿಯೋಗಳು ಮತ್ತು ಫೋಟೋಗಳಿಗೆ ಮಾರ್ಫಿಂಗ್ ಮಾಡಿ ಹರಿಬಿಟ್ಟಿದ್ದರು. ಇದಲ್ಲದೆ, ಅವರಿಗೆ ಸಾಮಾಜಿಕ ಜಾಲತಾಣಗಳಲ್ಲಿ ನಿರಂತರವಾಗಿ ಲೈಂಗಿಕ ಕಾಮೆಂಟ್‌ಗಳು ಮತ್ತು ಪ್ರಾಣ ಬೆದರಿಕೆಗಳು ಬರುತ್ತಿದ್ದವು. ಇಂಡಿಯಾ ಟಿವಿ ವರದಿಯ ಪ್ರಕಾರ, ಈ ವಿಡಿಯೋಗಳನ್ನು ವ್ಯಾಪಕವಾಗಿ ಹಂಚಿಕೊಳ್ಳುವ ಮೂಲಕ ತನ್ನ ವ್ಯಕ್ತಿತ್ವವನ್ನು ಕುಗ್ಗಿಸಲು ಮತ್ತು ಸಮಾಜದಲ್ಲಿ ತನ್ನ ಗೌರವಕ್ಕೆ ಧಕ್ಕೆ ತರಲು ಸಂಚು ರೂಪಿಸಲಾಗಿದೆ ಎಂದು ಅನಸೂಯಾ ನೋವು ತೋಡಿಕೊಂಡಿದ್ದಾರೆ. ಈ ದೂರಿನ ಗಂಭೀರತೆಯನ್ನು ಪರಿಗಣಿಸಿದ ಸೈಬರ್ ಪೊಲೀಸರು ಬರೋಬ್ಬರಿ 42 ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ. ಈ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿರುವ ಪೊಲೀಸರು, ಕಿಡಿಗೇಡಿಗಳ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ವಿವಿಧ ಸೆಕ್ಷನ್‌ಗಳಾದ 75, 79, 336(4), 351 ಮತ್ತು 356 ರ ಅಡಿಯಲ್ಲಿ ಕೇಸ್ ದಾಖಲಿಸಿದ್ದಾರೆ. ಇದರೊಂದಿಗೆ ಮಾಹಿತಿ ತಂತ್ರಜ್ಞಾನ ಕಾಯ್ದೆಯ ಸೆಕ್ಷನ್ 66ಇ ಮತ್ತು 67 ಅನ್ನು ಸಹ ಅಳವಡಿಸಲಾಗಿದೆ. ಈ ಸೆಕ್ಷನ್‌ಗಳು ಸೈಬರ್ ಅಪರಾಧ, ಲೈಂಗಿಕ ಕಿರುಕುಳ ಮತ್ತು ಮಾನಹಾನಿಯಂತಹ ಗಂಭೀರ ಪ್ರಕರಣಗಳಿಗೆ ಅನ್ವಯವಾಗುತ್ತವೆ. ಇದು ಕೇವಲ ಮಾನಸಿಕ ಕಿರುಕುಳವಲ್ಲ, ಇದು ಒಬ್ಬ ಮಹಿಳೆಯ ಘನತೆ ಮತ್ತು ಸಾರ್ವಜನಿಕ ಜೀವನದ ಮೇಲೆ ನಡೆದ ನೇರ ದಾಳಿ ಎಂದು ಅನಸೂಯಾ ತಮ್ಮ ದೂರಿನಲ್ಲಿ ಉಲ್ಲೇಖಿಸಿದ್ದಾರೆ.



# ಕನ್ನಡದ ಸೂಪರ್ ಹಿಟ್ ಹಾಡು ಬಳಸಿಕೊಂಡ ತೆಲುಗು ನಿರ್ದೇಶಕ

ಕನ್ನಡ ಚಿತ್ರರಂಗದಲ್ಲಿ 80-90ರ ದಶಕದಲ್ಲಿ ಹಲವು ಸೂಪರ್ ಹಿಟ್ ಗೀತೆಗಳು ಬಂದಿವೆ. ಅವುಗಳನ್ನು ಜನರು ಈಗಲೂ ಇಷ್ಟಪಡುತ್ತಾರೆ. ಈ ಹಾಡುಗಳು ಕಿವಿಗೆ ಕೇಳಲು ಇಂಪು. ಈ ಸಾಲಿನಲ್ಲಿ ಕನ್ನಡದ 'ಪಲ್ಲವಿ ಅನು ಪಲ್ಲವಿ' ಚಿತ್ರದ 'ನಗುವ ನಯನ.. ಹಾಡು ಕೂಡ ಒಂದು. ಈ ಹಾಡು ಎಲ್ಲರ ಮೆಚ್ಚುಗೆ ಪಡೆಯಿತು. ಇದು ತೆಲುಗು ನಿರ್ದೇಶಕನಿಗೂ ಇಷ್ಟ ಆಗಿದೆ. ಅವರು ಹಾಡನ್ನು ಬಳಸಿಕೊಂಡಿದ್ದಾರೆ. ಈ ರೀತಿ ಹಾಡು ಬಳಕೆ ಮಾಡಿದ್ದು ಬೇರೆ ಯಾರೂ ಅಲ್ಲ ತೆಲುಗಿನ ಖ್ಯಾತ ನಿರ್ದೇಶಕ ಸಂದೀಪ್ ರೆಡ್ಡಿ ವಂಗ. 'ಅರ್ಜುನ್ ರೆಡ್ಡಿ', 'ಅನಿಮಲ್' ರೀತಿಯ ಸಿನಿಮಾಗಳನ್ನು ನೀಡಿದ ಖ್ಯಾತಿ ಅವರಿಗೆ ಇದೆ. ಅವರು ಸಖತ್ ರಾ ಆದಂತಹ ಚಿತ್ರಗಳನ್ನು ನೀಡುತ್ತಾರೆ. ಅವರು ಕನ್ನಡದ 'ನಗುವ ನಯನ' ಹಾಡನ್ನು ಇಷ್ಟಪಟ್ಟಿದ್ದಾರೆ. ಇನ್‌ಸ್ಟಾಗ್ರಾಮ್‌ನಲ್ಲಿ ಪೋಸ್ಟ್ ಒಂದನ್ನು ಹಂಚಿಕೊಂಡಿದ್ದಾರೆ ಸಂದೀಪ್ ರೆಡ್ಡಿ ವಂಗ. ಸಮುದ್ರ ತೀರದಲ್ಲಿ ಹಕ್ಕಿಯೊಂದು ನಡೆದಾಡುವ ವಿಡಿಯೋ ಇದು. ಈ ವಿಡಿಯೋಗೆ ಅವರು ಕನ್ನಡದ 'ನಗುವ ನಯನ' ಹಾಡನ್ನು ಹಾಕಿದ್ದಾರೆ. ಈ ವಿಡಿಯೋ ನೋಡಿದ ಅನೇಕರು ಖುಷಿಯಿಂದ ಪ್ರತಿಕ್ರಿಯೆ ನೀಡಿದ್ದಾರೆ. ಕನ್ನಡಿಗರು ಈ ವಿಷಯಕ್ಕೆ ಸಂತಸಪಟ್ಟಿದ್ದಾರೆ. 'ಪಲ್ಲವಿ ಅನು ಪಲ್ಲವಿ' ಸಿನಿಮಾ 1983ರಲ್ಲಿ ತೆರೆಗೆ ಬಂತು. ಅನಿಲ್ ಕಪೂರ್, ಲಕ್ಷ್ಮೀ ಮೊದಲಾದವರು ನಟಿಸಿದ್ದರು. ಮಣಿ ರತ್ನಂ ಸಿನಿಮಾಗೆ ನಿರ್ದೇಶನ ಮಾಡಿದ್ದರು. ಇಳಯರಾಜ ಅವರು ಸಂಗೀತ ಸಂಯೋಜನೆ ಚಿತ್ರಕ್ಕೆ ಇತ್ತು. ಸಂದೀಪ್ ರೆಡ್ಡಿ ಅವರು ಸದ್ಯ ತೆಲುಗಿನಲ್ಲಿ 'ಸ್ಪಿರಿಟ್' ಸಿನಿಮಾ ನಿರ್ದೇಶನ ಮಾಡುತ್ತಿದ್ದಾರೆ.

# ಆಧ್ಯಾತ್ಮದ ಬದುಕಿನ ದಾರಿ ಹಿಡಿದ ಗೋಲ್ಡನ್ ಸ್ಟಾರ್ ಸಿನಿಮಾ ನಾಯಕಿ

ಬಾಲಿವುಡ್‌ನ ಗ್ಲಾಮರ್ ಲೋಕ, ಕಣ್ಸೆಳೆಯುವ ಬಣ್ಣದ ಬದುಕು ಮತ್ತು ಹಣ-ಹೆಸರು ಎಲ್ಲವನ್ನೂ ಬಿಟ್ಟು ಅಧ್ಯಾತ್ಮದ ಹಾದಿ ಹಿಡಿದ ನಟಿ ಸನಾ ಖಾನ್ ಅವರ ನಿರ್ಧಾರ ಇಂದಿಗೂ ಸಿನಿಕೌತುಕವೇ ಸರಿ. ಜೈ ಹೋ, ಏಕ್ ಪ್ರೇಮ್ ಕಥಾ ಮತ್ತು 'ಸ್ಪೆಷಲ್ ಓಪಿಎಸ್' ನಂತಹ ಸೂಪರ್ ಹಿಟ್ ಚಿತ್ರ ಹಾಗೂ ವೆಬ್ ಸರಣಿಗಳಲ್ಲಿ ನಟಿಸಿ ಮಿಂಚಿದ್ದ ಸನಾ ಖಾನ್, 2020ರಲ್ಲಿ ಇದ್ದಕ್ಕಿದ್ದಂತೆ ಚಿತ್ರರಂಗಕ್ಕೆ ವಿದಾಯ ಘೋಷಿಸಿ ಎಲ್ಲರಿಗೂ ಶಾಕ್ ನೀಡಿದ್ದರು. ಅಂದಿನಿಂದ ಇಂದಿನವರೆಗೆ ಅವರ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಒಂದಲ್ಲ ಒಂದು ಚರ್ಚೆ ನಡೆಯುತ್ತಲೇ ಇರುತ್ತದೆ.

**ಕನ್ನಡದ ಕೂಲ್ ಚಿತ್ರದಲ್ಲಿ ನಟಿಸಿದ್ದ ನಟಿ!:** ವಿಶೇಷವಾಗಿ, ಸನಾ ಖಾನ್ ಅವರು ಮುಫ್ತಿ ಅನಾಸ್ ಸಯದ್ ಅವರನ್ನು ಮದುವೆಯಾದ ನಂತರ, ಅವರ ಪತಿ ಅವರನ್ನು ಬ್ರೈನ್ ವಾಶ್ ಮಾಡಿ ಚಿತ್ರರಂಗದಿಂದ ಹೊರಬರುವಂತೆ ಮಾಡಿದ್ದಾರೆ ಎಂಬ ಗಾಸಿಪ್‌ಗಳು ಜೋರಾಗಿದ್ದವು. ಈಗ ಈ ಎಲ್ಲಾ ಆರೋಪಗಳಿಗೆ ಸನಾ ಖಾನ್ ಖಡಕ್ ಉತ್ತರ ನೀಡಿದ್ದಾರೆ.

ಇತ್ತೀಚೆಗೆ ನಟಿ ರಶ್ಮಿ ದೇಸಾಯಿ ಅವರೊಂದಿಗೆ ಮಾತನಾಡಿದ ಸನಾ, ತಮ್ಮ ಜೀವನದ ಮಹತ್ವದ ತಿರುವುಗಳ ಬಗ್ಗೆ ಮನಬಿಚ್ಚಿ ಮಾತನಾಡಿದ್ದಾರೆ. ಈ ನಟಿ ಸನಾ ಖಾನ್ ಅವರಿಗೆ ಕನ್ನಡ ಚಿತ್ರರಂಗದ ನಂಟು ಕೂಡ ಇದೆ. ಗೋಲ್ಡನ್ ಸ್ಟಾರ್ ಗಣೇಶ್ ನಾಯಕತ್ವದ ಕೂಲ್ ಚಿತ್ರಕ್ಕೆ ಇದೇ ಸನಾ ಖಾನ್ ನಾಯಕಿಯಾಗಿದ್ದರು.



# ಎ.ಆರ್. ರೆಹಮಾನ್ ಪೂರ್ವಾಗ್ರಹ ಪೀಡಿತ, ದ್ವೇಷಪೂರಿತ ವ್ಯಕ್ತಿ: ಕಂಗನಾ ಆರೋಪ

ಖ್ಯಾತ ಸಂಗೀತ ನಿರ್ದೇಶಕ ಎ.ಆರ್.ರೆಹಮಾನ್ ಅವರು 'ಛಾವ' ಸಿನಿಮಾ ಬಗ್ಗೆ ನೀಡಿದ ಹೇಳಿಕೆ ಈಗ ವಿವಾದಕ್ಕೆ ಕಾರಣ ಆಗಿದೆ. ಆ ಸಿನಿಮಾಗೆ ಎ.ಆರ್. ರೆಹಮಾನ್ ಅವರೇ ಸಂಗೀತ ನೀಡಿದ್ದಾರೆ. ಆದರೂ ಕೂಡ ಅವರಿಗೆ ಈ ಸಿನಿಮಾ ಬಗ್ಗೆ ತಕರಾರು ಇದೆ. ಆ ಚಿತ್ರವು ಜನರ ಒಗ್ಗಟ್ಟನ್ನು ಒಡೆಯುತ್ತದೆ ಎಂಬುದು ಅವರ ಅಭಿಪ್ರಾಯ. ಈ ರೀತಿಯ ಹೇಳಿಕೆಗಳನ್ನು ನೀಡಿದ ಬಳಿಕ ಎ.ಆರ್. ರೆಹಮಾನ್ ಅವರನ್ನು ಕಂಗನಾ ರಣಾವತ್ ಟೀಕಿಸಿದ್ದಾರೆ. ಇನ್‌ಸ್ಟಾಗ್ರಾಮ್ ಸ್ಟೋರಿ ಮೂಲಕ ಅವರು ತಮ್ಮ ಅಭಿಪ್ರಾಯ ತಿಳಿಸಿದ್ದಾರೆ.

'ಪ್ರೀತಿಯ ಎ.ಆರ್. ರೆಹಮಾನ್ ಅವರೇ, ನಾನು ಕೇಸರಿ ಪಕ್ಷಕ್ಕೆ ಬೆಂಬಲ ನೀಡುತ್ತೇನೆ ಎಂಬ ಕಾರಣಕ್ಕೆ ನನಗೆ ಚಿತ್ರರಂಗದಲ್ಲಿ ಪಕ್ಷಪಾತ ಆಗುತ್ತದೆ. ಆದರೂ ಕೂಡ ನಾನು ನಿಮ್ಮಷ್ಟು ಪೂರ್ವಾಗ್ರಹ ಪೀಡಿತ ಹಾಗೂ ದ್ವೇಷಪೂರಿತ ವ್ಯಕ್ತಿಯನ್ನು ನೋಡಿಲ್ಲ' ಎಂದು ಕಂಗನಾ ರಣಾವತ್ ಅವರು ಹೇಳಿದ್ದಾರೆ. ಇನ್‌ಸ್ಟಾಗ್ರಾಮ್ ಸ್ಟೋರಿಯಲ್ಲಿ ಅವರು ಇದನ್ನು ಬರೆದುಕೊಂಡಿದ್ದಾರೆ.

# ಕೊಹ್ಲಿ ಹೋರಾಟ ವ್ಯರ್ಥ; ಏಕದಿನ ಸರಣಿ ಸೋತ ಟೀಂ ಇಂಡಿಯಾ

ಇಂದೋರ್‌ನ ಹೋಳ್ಕರ್ ಮೈದಾನದಲ್ಲಿ ನಡೆದ ಭಾರತ ಹಾಗೂ ನ್ಯೂಜಿಲೆಂಡ್ ನಡುವಿನ ಮೂರನೇ ಏಕದಿನ ಪಂದ್ಯದಲ್ಲಿ ಆತಿಥೇಯ ಭಾರತ ತಂಡವನ್ನು 41 ರನ್‌ಗಳಿಂದ ಸೋಲಿಸಿದ ನ್ಯೂಜಿಲೆಂಡ್ ತಂಡ 2-1 ಅಂತರದಿಂದ ಏಕದಿನ ಸರಣಿಯನ್ನು ತನ್ನದಾಗಿಸಿಕೊಂಡಿದೆ. ಇದರೊಂದಿಗೆ ಭಾರತದ ನೆಲದಲ್ಲಿ ಮತ್ತೊಮ್ಮೆ ಇತಿಹಾಸ ನಿರ್ಮಿಸಿರುವ ನ್ಯೂಜಿಲೆಂಡ್ ಟೆಸ್ಟ್ ಕ್ರಿಕೆಟ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದ ನಂತರ ಇದೀಗ ಮೊದಲ ಬಾರಿಗೆ ಭಾರತೀಯ ನೆಲದಲ್ಲಿ ಏಕದಿನ ಸರಣಿಯನ್ನು ಗೆದ್ದಿದೆ. ಡ್ಯಾರಿಲ್ ಮಿಚೆಲ್ ಅವರ ಸತತ ಎರಡನೇ ಶತಕ ಮತ್ತು ಗ್ಲೆನ್ ಫಿಲಿಪ್ಸ್ ಅವರ ಮೊದಲ ಶತಕದ ಸಹಾಯದಿಂದ ಮೊದಲು ಬ್ಯಾಟಿಂಗ್ ಮಾಡಿದ ಕಿವೀಸ್ 337 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಟೀಂ ಇಂಡಿಯಾ ಪ್ರಮುಖ ಬ್ಯಾಟ್ಸ್‌ಮನ್‌ಗಳ ವೈಫಲ್ಯದಿಂದಾಗಿ ಸೋಲಿಗೆ ಕೊರಳೊಡ್ಡಿತು. ತಂಡದ ಪರ ವಿರಾಟ್ ಕೊಹ್ಲಿ ಏಕಾಂಗಿ ಹೋರಾಟ ನೀಡಿದರಾದರೂ, ಅವರಿಗೆ ಪ್ರಮುಖ ಬ್ಯಾಟ್ಸ್‌ಮನ್‌ಗಳು ಸಾಥ್ ನೀಡಲಿಲ್ಲ. ಹೀಗಾಗಿ ತಂಡಕ್ಕೆ ಸರಣಿ ಸೋಲಿನ ಆಘಾತ ಎದುರಾಯಿತು.

ನ್ಯೂಜಿಲೆಂಡ್ ತಂಡದ ಅನುಭವಿ ಬ್ಯಾಟರ್ ಡ್ಯಾರೆಲ್ ಮಿಚೆಲ್ ಭಾರತಕ್ಕೆ ದುಃಸ್ವಪ್ನವಾಗಿದ್ದಾರೆ. ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಡ್ಯಾರೆಲ್ ಮಿಚೆಲ್ ಅದ್ಭುತ ಬ್ಯಾಟಿಂಗ್ ಮಾಡಿದರು. ಮೊದಲ ಪಂದ್ಯದಲ್ಲಿ ಅರ್ಧಶತಕ, ಎರಡನೇ ಪಂದ್ಯದಲ್ಲಿ ಶತಕ ಗಳಿಸಿದರು. ಈಗ ಅವರು ಮೂರನೇ ಪಂದ್ಯದಲ್ಲಿ ಮತ್ತೊಂದು ಶತಕ ಬಾರಿಸಿದ್ದಾರೆ. ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಮೂರನೇ ಮತ್ತು ಅಂತಿಮ ಏಕದಿನ ಪಂದ್ಯ ಇಂದೋರ್‌ನ ಹೋಲ್ಕರ್ ಕ್ರೀಡಾಂಗಣ ದಲ್ಲಿ ನಡೆಯುತ್ತಿದೆ.

ಇದು ಸರಣಿಯ ನಿರ್ಣಾಯಕ ಪಂದ್ಯ. ಈ ಪಂದ್ಯದಲ್ಲೂ ಡ್ಯಾರೆಲ್ ಮಿಚೆಲ್ ತಮ್ಮ ಭರ್ಜರಿ ಬ್ಯಾಟಿಂಗ್ ಪ್ರರ್ದನ ತೋರಿದ್ದಾರೆ. ಭಾರತದ ವಿರುದ್ಧದ ಸರಣಿಯ ಉದ್ದಕ್ಕೂ ಡ್ಯಾರಿಲ್ ಮಿಚೆಲ್ ಅವರ ಬ್ಯಾಟ್ ಜೋರಾಗಿ ಸದ್ದು ಮಾಡುತ್ತಿತ್ತು. ಮೊದಲ ಪಂದ್ಯದಲ್ಲಿ ಅರ್ಧಶತಕ ಗಳಿಸಿದ ನಂತರ, ಅವರು ಎರಡನೇ ಮತ್ತು ಮೂರನೇ



ಪಂದ್ಯಗಳಲ್ಲಿ ಶತಕಗಳನ್ನು ಸಿಡಿಸಿ ದಾಖಲೆ ಸೃಷ್ಟಿಸಿದ್ದಾರೆ. ಭಾರತ ವಿರುದ್ಧದ ಮೂರನೇ ಏಕದಿನ ಪಂದ್ಯದಲ್ಲಿ ಮಿಚೆಲ್ 106 ಎಸೆತಗಳಲ್ಲಿ ತಮ್ಮ ಶತಕವನ್ನು ತಲುಪಿದರು. ಡ್ಯಾರಿಲ್ ಮಿಚೆಲ್ ಇನ್ನೂ ಅಜೇಯರಾಗಿ ಉಳಿದಿದ್ದಾರೆ.

ಮಿಚೆಲ್ 15 ಬೌಂಡರಿಗಳು ಮತ್ತು 3 ಸಿಕ್ಸರ್‌ಗಳ ಸಹಾಯದಿಂದ 137 ರನ್ ಗಳಿಸಿ ಆಡುತ್ತಿದ್ದಾರೆ. ಭಾರತ ವಿರುದ್ಧದ ಕೊನೆಯ 7 ಏಕದಿನ ಪಂದ್ಯಗಳಲ್ಲಿ ಡ್ಯಾರಿಲ್ ಮಿಚೆಲ್ 4 ಶತಕಗಳು ಮತ್ತು 2 ಅರ್ಧಶತಕಗಳನ್ನು ಸಿಡಿಸಿದ್ದಾರೆ. ಡ್ಯಾರೆಲ್ ಮಿಚೆಲ್ ಭಾರತದಲ್ಲಿ ಟೀಮ್ ಇಂಡಿಯಾ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಅತಿಹೆಚ್ಚು ರನ್ ಗಳಿಸಿದ ಆಟಗಾರ ಎಂಬ ಹೆಗ್ಗಳಿಕೆ ಪಾತ್ರರಾಗಿದ್ದಾರೆ. ಪ್ರಸ್ತುತ ನಡೆಯುತ್ತಿರುವ ಏಕದಿನ ಸರಣಿಯಲ್ಲಿ ಮಿಚೆಲ್ 266 ರನ್ ಗಳಿಸಿದ್ದಾರೆ. ಈ ಮೂಲಕ ಶ್ರೀಲಂಕಾದ ಮಾಜಿ ಬ್ಯಾಟರ್ ರಾಯ್ ಡಯಾಸ್ ಅವರ ಹಿಂದಿಕ್ಕಿದ್ದಾರೆ.

# ವಿರಾಟ್ ಕೊಹ್ಲಿಗೆ ಸಾಧ್ಯವಾಗದಿರುವುದನ್ನು ಸಾಧಿಸಿ ತೋರಿಸಿದ ವೈಭವ್ ಸೂರ್ಯವಂಶಿ

ಟೀಮ್ ಇಂಡಿಯಾದ ಯಂಗ್ ಸೆನ್ಸೇಷನ್ ವೈಭವ್ ಸೂರ್ಯವಂಶಿ ಹೆಸರಿಗೆ ಮತ್ತೊಂದು ದಾಖಲೆ ಸೇರ್ಪಡೆಯಾಗಿದೆ. ಈ ದಾಖಲೆಯೊಂದಿಗೆ ಯುವ ಎಡಗೈ ದಾಂಡಿಗ, ದಾಖಲೆಗಳ ಸರದಾರ ವಿರಾಟ್ ಕೊಹ್ಲಿಯನ್ನು ಹಿಂದಿಕ್ಕಿದ್ದಾರೆ. ಈ ಮೂಲಕ ಈ ಸಾಧನೆ ಮಾಡಿದ ಅತ್ಯಂತ ಕಿರಿಯ ಬ್ಯಾಟರ್ ಎನಿಸಿಕೊಂಡಿದ್ದಾರೆ.

ಝಿಂಬಾಬ್ವೆಯಲ್ಲಿ ನಡೆದ ಅಂಡರ್-19 ವಿಶ್ವಕಪ್‌ನ 7ನೇ ಪಂದ್ಯದಲ್ಲಿ ಬಾಂಗ್ಲಾದೇಶ್ ವಿರುದ್ಧ ವೈಭವ್ ಸೂರ್ಯವಂಶಿ 67 ಎಸೆತಗಳಲ್ಲಿ 3 ಸಿಕ್ಸ್ ಹಾಗೂ 6 ಫೋರ್‌ಗಳೊಂದಿಗೆ 72 ರನ್ ಬಾರಿಸಿದ್ದರು. ಈ ಅರ್ಧಶತಕದೊಂದಿಗೆ ವೈಭವ್ ಯೂತ್ ಒಡಿಐ ಕ್ರಿಕೆಟ್‌ನಲ್ಲಿ 1000 ರನ್ ಪೂರೈಸಿದ್ದಾರೆ.

ಈ ಸಾವಿರ ರನ್‌ಗಳೊಂದಿಗೆ ಯೂತ್ ಏಕದಿನ ಕ್ರಿಕೆಟ್‌ನಲ್ಲಿ ವಿರಾಟ್ ಕೊಹ್ಲಿಗೆ ಸಾಧ್ಯವಾಗದಿರುವುದನ್ನು ವೈಭವ್ ಸೂರ್ಯವಂಶಿ ಸಾಧಿಸಿ ತೋರಿಸಿದ್ದಾರೆ. ಅಂದರೆ ಅಂಡರ್-19 ಏಕದಿನ ಕ್ರಿಕೆಟ್‌ನಲ್ಲಿ 28 ಪಂದ್ಯಗಳನ್ನಾಡಿದ್ದ ವಿರಾಟ್ ಕೊಹ್ಲಿ ಕಲೆಹಾಕಿದ್ದು 978 ರನ್‌ಗಳು ಮಾತ್ರ.

ಇದೀಗ ಕೇವಲ 20 ಪಂದ್ಯಗಳ ಮೂಲಕ ವೈಭವ್ ಸೂರ್ಯವಂಶಿ 1026 ರನ್‌ಗಳಿಸಿದ್ದಾರೆ. ಈ ಮೂಲಕ ಯೂತ್ ಒಡಿಐ ಕ್ರಿಕೆಟ್‌ನಲ್ಲಿ 1000 ಕ್ಕೂ ಅಧಿಕ ರನ್ ಗಳಿಸಿದ ಭಾರತದ ಅತ್ಯಂತ ಕಿರಿಯ ಬ್ಯಾಟರ್ ಎನಿಸಿಕೊಂಡಿದ್ದಾರೆ. ಅಷ್ಟೇ ಅಲ್ಲದೆ ಈ ಸಾಧನೆ ಮಾಡಿದ 7ನೇ ಭಾರತೀಯ ಬ್ಯಾಟ್ಸ್‌ಮನ್ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ.

ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವುದು ವಿಜಯ್ ಝೋಲ್. ಅಂಡರ್ -19 ಏಕದಿನ ಪಂದ್ಯಗಳಲ್ಲಿ ಬರೋಬ್ಬರಿ 1404 ರನ್ ಗಳಿಸುವ ಮೂಲಕ ಝೋಲ್ ಟೀಮ್ ಇಂಡಿಯಾ ಪರ ಯೂತ್ ಒಡಿಐ ಕ್ರಿಕೆಟ್‌ನಲ್ಲಿ ಅತ್ಯಧಿಕ ರನ್‌ಗಳಿಸಿದ ಭಾರತೀಯ ಬ್ಯಾಟರ್ ಎನಿಸಿಕೊಂಡಿದ್ದಾರೆ. ಈ ದಾಖಲೆ ಮುರಿಯಲು ವೈಭವ್ ಸೂರ್ಯವಂಶಿಗೆ ಕೇವಲ 378 ರನ್‌ಗಳು ಬೇಕಿದೆ. ಹೀಗಾಗಿ ವೈಭವ್ ಕಡೆಯಿಂದ ಮತ್ತೊಂದು ಭರ್ಜರಿ ದಾಖಲೆಯನ್ನು ನಿರೀಕ್ಷಿಸಬಹುದು.





# ಕರ್ನಾಟಕ ಟೆಸ್ಟ್ ತಂಡ ಪ್ರಕಟ

ಜನವರಿ 22 ರಿಂದ ಶುರುವಾಗಲಿರುವ ರಣಜಿ ಟೂರ್ನಿಯ ದ್ವಿತೀಯಾರ್ಧದ ಪಂದ್ಯಗಳಿಗಾಗಿ ಕರ್ನಾಟಕ ತಂಡವನ್ನು ಪ್ರಕಟಿಸಲಾಗಿದೆ. 15 ಸದಸ್ಯರುಗಳ ಈ ತಂಡವನ್ನು ಮಯಾಂಕ್ ಅಗರ್ವಾಲ್ ಮುನ್ನಡೆಸಲಿದ್ದಾರೆ. ಇನ್ನು ಮೊದಲ ಸುತ್ತಿನಲ್ಲಿ ಕರ್ನಾಟಕ ಪರ ಕಣಕ್ಕಿಳಿದಿದ್ದ ಸ್ಮರಣ್ ರವಿಚಂದ್ರನ್ ಈ ಬಾರಿ ತಂಡದಲ್ಲಿ ಕಾಣಿಸಿಕೊಂಡಿಲ್ಲ. ವಿಜಯ ಹಝಾರೆ ಟೂರ್ನಿಯ ಸೆಮಿಫೈನಲ್ ಪಂದ್ಯಕ್ಕೂ ಮುನ್ನ ಸ್ಮರಣ್ ರವಿಚಂದ್ರನ್ ಅವರ ಭುಜಕ್ಕೆ ಗಾಯವಾಗಿತ್ತು. ಹೀಗಾಗಿ ವಿಜಯ ಹಝಾರೆ ಟೂರ್ನಿಯ ಸೆಮಿಫೈನಲ್ ಮ್ಯಾಚ್‌ನಲ್ಲಿ ಅವರು ಕಣಕ್ಕಿಳಿದಿರಲಿಲ್ಲ.

ಇದೇ ಗಾಯದ ಕಾರಣ ಸ್ಮರಣ್ ರವಿಚಂದ್ರನ್ ಅವರನ್ನು ರಣಜಿ ತಂಡದಿಂದ ಹೊರಗಿಡಲಾಗಿದೆ ಎಂದು ತಿಳಿದು ಬಂದಿದೆ. ಇನ್ನು ಸ್ಮರಣ್ ಬದಲಿಗೆ ಈ ಬಾರಿ ನಿಕಿನ್ ಜೋಸ್ ಕರ್ನಾಟಕ ಟೆಸ್ಟ್ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಅದರಂತೆ ರಣಜಿ ಟೂರ್ನಿಯ ಉಳಿದ ಪಂದ್ಯಗಳಿಗೆ ಕರ್ನಾಟಕ ತಂಡ ಈ ಕೆಳಗಿನಂತಿದೆ.

**ಕರ್ನಾಟಕ ತಂಡ:** ಮಯಾಂಕ್ ಅಗರ್ವಾಲ್ (ನಾಯಕ), ನಿಕಿನ್ ಜೋಸ್, ದೇವದತ್ ಪಡಿಕ್ಕಲ್, ಕರುಣ್ ನಾಯರ್, ಕೆಎಲ್ ಶ್ರೀಜಿತ್, ಅಭಿನವ್ ಮನೋಹರ್, ಶ್ರೇಯಸ್ ಗೋಪಾಲ್, ವಿದ್ಯಾಧರ್ ಪಾಟೀಲ್, ವಿದ್ವತ್ ಕಾವೇರಪ್ಪ, ಅಭಿಲಾಷ್ ಶೆಟ್ಟಿ, ಮೊಹ್ಸಿನ್ ಖಾನ್, ಶಿಖರ್ ಶೆಟ್ಟಿ, ಕೃತಿಕ್ ಕೃಷ್ಣ, ಕೆವಿ ಅನೀಶ್, ಎಂ. ವೆಂಕಟೇಶ್.

**ಅಗ್ರಸ್ಥಾನದಲ್ಲಿ ಕರ್ನಾಟಕ:** 2025-26ರ ಸಾಲಿನ ರಣಜಿ ಟೂರ್ನಿಯಲ್ಲಿ ಗ್ರೂಪ್-ಬಿ ನಲ್ಲಿ ಕಣಕ್ಕಿಳಿಯುತ್ತಿರುವ ಕರ್ನಾಟಕ ತಂಡವು ಈವರೆಗೆ 5 ಪಂದ್ಯಗಳನ್ನಾಡಿದೆ. ಈ ಐದು ಪಂದ್ಯಗಳಲ್ಲಿ 2 ಗೆಲುವು ಹಾಗೂ ಮೂರು ಡ್ರಾ ಸಾಧಿಸುವಲ್ಲಿ ಕರ್ನಾಟಕ ತಂಡ ಯಶಸ್ವಿಯಾಗಿದೆ. ಇಲ್ಲಿ ಸೌರಾಷ್ಟ್ರ ಮತ್ತು ಗೋವಾ ವಿರುದ್ಧ ಡ್ರಾ ಸಾಧಿಸಿದ್ದ ಕರ್ನಾಟಕ ತಂಡವು ಮೂರನೇ ಪಂದ್ಯದಲ್ಲಿ ಕೇರಳ ವಿರುದ್ಧ ಜಯ ದಾಖಲಿಸಿತ್ತು. ಇನ್ನು ನಾಲ್ಕನೇ ಪಂದ್ಯದಲ್ಲಿ ಮಹಾರಾಷ್ಟ್ರ ವಿರುದ್ಧ ಡ್ರಾ ಸಾಧಿಸುವಲ್ಲಿ ಯಶಸ್ವಿಯಾಗಿದ್ದರು. ಹಾಗೆಯೇ ಐದನೇ ಪಂದ್ಯದಲ್ಲಿ ಚಂಡಿಗಢ್ ವಿರುದ್ಧ ಇನಿಂಗ್ಸ್ ಹಾಗೂ 185 ರನ್‌ಗಳ ಅಮೋಘ ಗೆಲುವು ದಾಖಲಿಸಿತ್ತು. ಮೊದಲಾರ್ಧದಲ್ಲಿ ಭರ್ಜರಿ ಪ್ರದರ್ಶನ ನೀಡಿರುವ ಕರ್ನಾಟಕ ತಂಡವು ದ್ವಿತೀಯಾರ್ಧದ ಮೊದಲ ಮ್ಯಾಚ್‌ನಲ್ಲಿ ಮಧ್ಯ ಪ್ರದೇಶ್ ತಂಡವನ್ನು ಎದುರಿಸಲಿದೆ. ಜನವರಿ 22 ರಿಂದ ಬೆಂಗಳೂರಿನ ಆಲೂರಿನಲ್ಲಿ ನಡೆಯಲಿರುವ ಈ ಪಂದ್ಯದ ಬಳಿಕ ಕರ್ನಾಟ ತಂಡವು ಪಂಜಾಬ್ ತಂಡವನ್ನು ಎದುರಿಸಲಿದೆ. ಈ ಮ್ಯಾಚ್ ಶುರುವಾಗುವುದು ಜನವರಿ 29 ರಿಂದ. ಈ ಎರಡು ಮ್ಯಾಚ್‌ಗಳೊಂದಿಗೆ ಮೊದಲ ಸುತ್ತಿನ ಪಂದ್ಯಗಳು ಮುಕ್ತಾಯಗೊಳ್ಳಲಿದೆ. ಇದಾದ ಬಳಿಕ ಪ್ರೀ ಕ್ವಾರ್ಟರ್ ಫೈನಲ್ ಪಂದ್ಯಗಳು ಆರಂಭವಾಗಲಿದೆ.

# ಕೇವಲ 16 ಇನಿಂಗ್ಸ್‌ಗಳಲ್ಲೇ ವಿಶ್ವ ದಾಖಲೆ ಬರೆದ ಅಮನ್ ಮೊಖಾಡೆ

ದೇಶೀಯ ಅಂಗಳದಲ್ಲಿ ವಿದರ್ಭ ತಂಡದ 25 ವರ್ಷದ ಯುವ ಬ್ಯಾಟರ್ ಅಮನ್ ಮೊಖಾಡೆ ದಾಖಲೆಗಳ ಮೇಲೆ ದಾಖಲೆ ಬರೆಯುತ್ತಾ ಸಾಗುತ್ತಿದ್ದಾರೆ. ಈವರೆಗೆ ಕೇವಲ 16 ಇನಿಂಗ್ಸ್ ಮಾತ್ರ ದೇಶೀಯ ಕ್ರಿಕೆಟ್‌ನಲ್ಲಿ ಹೊಸ ವಿಶ್ವ ದಾಖಲೆ ನಿರ್ಮಾಣವಾಗಿದೆ. ಈ ದಾಖಲೆ ನಿರ್ಮಿಸಿರುವುದು ಮತ್ಯಾರೂ ಅಲ್ಲ, ವಿದರ್ಭ ತಂಡದ ಯುವ ದಾಂಡಿಗ ಅಮನ್ ಮೊಖಾಡೆ ಅದು ಕೂಡ ಕೇವಲ 16 ಇನಿಂಗ್ಸ್‌ಗಳ ಮೂಲಕ ಎಂಬುದು ವಿಶೇಷ. ವಿಜಯ ಹಝಾರೆ ಟೂರ್ನಿಯ ಸೆಮಿಫೈನಲ್ ಪಂದ್ಯದಲ್ಲಿ ಕರ್ನಾಟಕ ವಿರುದ್ಧ ಅಮನ್ ಮೊಖಾಡೆ 138 ರನ್‌ಗಳ ಭರ್ಜರಿ ಶತಕ ಸಿಡಿಸಿದ್ದರು. ಈ ಶತಕದೊಂದಿಗೆ ಲಿಸ್ಟ್ ಎ ಕ್ರಿಕೆಟ್‌ನಲ್ಲಿ 1000 ರನ್‌ಗಳನ್ನು ಪೂರೈಸಿದ್ದಾರೆ. ಈ ಮೂಲಕ ಹೊಸ ವಿಶ್ವ ದಾಖಲೆಯನ್ನು ಸಹ ನಿರ್ಮಿಸಿದ್ದಾರೆ. ಅಂದರೆ ಲಿಸ್ಟ್ ಎ ಕ್ರಿಕೆಟ್‌ನಲ್ಲಿ ಅತೀ ಕಡಿಮೆ ಇನಿಂಗ್ಸ್‌ಗಳಲ್ಲಿ 1000 ರನ್ ಪೂರೈಸಿದ ಭಾರತೀಯ ಬ್ಯಾಟರ್ ಎಂಬ ದಾಖಲೆಯನ್ನು ಅಮನ್ ಮೊಖಾಡೆ ತಮ್ಮದಾಗಿಸಿಕೊಂಡಿದ್ದಾರೆ. ಅಷ್ಟೇ ಅಲ್ಲದೆ ಗ್ರೇಮ್ ಪೊಲ್ಲಾಕ್ ಬರೆದಿದ್ದ ವರ್ಲ್ಡ್ ರೆಕಾರ್ಡ್ ಅನ್ನು ಅಮನ್ ಸರಿಗಟ್ಟಿದ್ದಾರೆ. ಸೌತ್ ಆಫ್ರಿಕಾದ ಮಾಜಿ ಆಟಗಾರ ಗ್ರೇಮ್ ಪೊಲ್ಲಾಕ್ ಕೇವಲ 16 ಇನಿಂಗ್ಸ್‌ಗಳ ಮೂಲಕ ಲಿಸ್ಟ್ ಎ ಕ್ರಿಕೆಟ್‌ನಲ್ಲಿ 1000 ರನ್ ಕಲೆಹಾಕಿದ್ದರು. ಈ ಮೂಲಕ 60ರ ದಶಕದಲ್ಲಿ ಏಕದಿನ ಕ್ರಿಕೆಟ್‌ನಲ್ಲಿ ಹೊಸ ವಿಶ್ವ ದಾಖಲೆ ನಿರ್ಮಿಸಿದ್ದರು. ಇದೀಗ ಈ ದಾಖಲೆಯನ್ನು ಅಮನ್ ಸರಿಗಟ್ಟಿದ್ದಾರೆ.

**138 ರನ್‌ಗಳ ಭರ್ಜರಿ ಶತಕ**



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966